₹ 4 ಪುಟ: 4 ಸಂಪುಟ: 4 ಸಂಚಿಕೆ 76 newsbelagavi@gmail.com 9900332089 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 Issue: 76 Saturday, 06, MAY, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ದಿ ಕೇರಳ ಸ್ಟೋರಿ ಚಿತ್ರ ಭಯೋತ್ಪಾದನೆಯ ಸಂಚು ಆಧರಿಸಿದ್ದು, ವೋಟ್ ಬ್ಯಾಂಕ್‌ಗಾಗಿ ಕಾಂಗ್ರೆಸ್ ವಿರೋಧ: ಪ್ರಧಾನಿ ಮೋದಿ

ಬಳ್ಳಾರಿ: 'ದಿ ಕೇರಳ ಸ್ಟೋರಿ' ಚಿತ್ರವು ಭಯೋತ್ಪಾದನೆಯ ಪಿತೂರಿಯನ್ನು ಆಧರಿಸಿದ್ದಾಗಿದ್ದು, ಇದು ಭಯೋತ್ಪಾದನೆಯ ಕೊಳಕು ಸತ್ಯವನ್ನು ತೋರಿಸುತ್ತದೆ ಮತ್ತು ಭಯೋತ್ಪಾದಕರ ವಿನ್ಯಾಸವನ್ನು ಬಹಿರಂಗಪಡಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಕರ್ನಾಟಕ ವಿಧಾನಸಭೆ ಚುನಾವಣೆ ನಿಮಿತ್ತ ಬಳ್ಳಾರಿಯಲ್ಲಿ ಬೃಹತ್ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಈ ವೇಳೆ ಕನ್ನಡದಲ್ಲೇ ಪ್ರಧಾನಮಂತ್ರಿ ನರೇಂದ್ರ ಮೋದಿ ಭಾಷಣ ಆರಂಭಿಸಿದರು. 'ಬಳ್ಳಾರಿಯ ನನ್ನ ಸಹೋದರ. ಸಹೋದರಿಯರೇ ಎಂದು ಕನ್ನಡದಲ್ಲೇ ಭಾಷಣ ಆರಂಭಿಸಿದರು. ಕನಕದುರ್ಗಮ್ಮ. ಕುಮಾರಸ್ವಾಮಿ ದೇವಾಲಯಕ್ಕೆ ನನ್ನ ನಮಸ್ಕಾರಗಳು. ದೊಡ್ಡ ಸಂಖ್ಯೆಯಲ್ಲಿ ಬಿಜೆಪಿಗೆ ಆರ್ಶಿವಾದ ಮಾಡಲು ಆಗಮಿಸಿದ್ದೀರಾ. ನಿಮ್ಮಗೆ ನನ್ನ ನಮಸ್ಕಾರಗಳು. ನಿನ್ನೆ ರಾತ್ರಿ ಮಳೆ ಬಂದ್ರೂ ದೊಡ್ಡ ಸಂಖ್ಯೆಯಲ್ಲಿ ಎಲ್ಲರೂ ಬಂದಿದ್ದೀರಾ. ಇದೇ ಮುಂದಿನ ಚುನಾವಣೆಯ ದಿಕ್ಸೂಚಿಯಾಗಿದೆ ಎಂದು ಮೋದಿ ಹೇಳಿದರು.

ಭಯೋತ್ಪಾದನೆ ಮತ್ತು ಭಯೋತ್ಪಾದನಾ ಪ್ರವೃತ್ತಿಯ ಚಲನಚಿತ್ರಗಳನ್ನು ಕಾಂಗ್ರೆಸ್ ವಿರೋಧಿಸುತ್ತಿದೆ. ಕಾಂಗ್ರೆಸ್ ಮತ ಬ್ಯಾಂಕ್‌ಗಾಗಿ ಭಯೋತ್ಪಾದನೆಯನ್ನು ರಕ್ಷಿಸಿದೆ. ಕಾಂಗ್ರೆಸ್ ತನ್ನ ವೋಟ್ ಬ್ಯಾಂಕ್‌ಗಾಗಿ ಭಯೋತ್ಪಾದನೆಗೆ ಬಲಿಯಾಗಿರುವುದನ್ನು ನೋಡಿ ನನಗೆ ಆಶ್ಚರ್ಯವಾಗಿದೆ.

ಇಂತಹ ಪಕ್ಷ ಎಂದಾದರೂ ಕರ್ನಾಟಕವನ್ನು ಉಳಿಸಲು ಸಾಧ್ಯವೇ? ಭಯೋತ್ಪಾದನೆಯ ವಾತಾವರಣದಲ್ಲಿ, ಇಲ್ಲಿನ ಉದ್ಯಮ, ಐಟಿ ಉದ್ಯಮ, ಕೃಷಿ, ಕೃಷಿ ಮತ್ತು ವೈಭವದ ಸಂಸ್ಕೃತಿ ನಾಶವಾಗುತ್ತದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ ಭ್ರಷ್ಟಾಚಾರ ಮಾಡಿ ದೇಶದ ಜನರನ್ನು ಮೋಸ ಮಾಡಿದೆ. ಸುಳ್ಳು ಸರ್ವೆಗಳನ್ನು ಮಾಡಿಸಿ ದೇಶದ ಜನರನ್ನು ಕಾಂಗ್ರೆಸ್ ವಂಚಿಸಿದೆ. ಕರ್ನಾಟಕದಲ್ಲೂ ಕಾಂಗ್ರೆಸ್ ಸುಳ್ಳು



ಸರ್ವೆ ಮಾಡಿಸಿದೆ. ಹಣ ಬಲದ ಜೊತೆಗೆ ಸುಳ್ಳು ಸರ್ವೆ ಸುದ್ದಿಗಳನ್ನು ಹಬ್ಬಿಸುತ್ತಿದ್ದಾರೆ.

ಸ್ವಾತಂತ್ರ್ಯದ ಬಳಿಕ ದೇಶದ ವ್ಯವಸ್ಥೆಯನ್ನು ಕಾಂಗ್ರೆಸ್ ಭ್ರಷ್ಟ ಮಾಡಿತ್ತು. ಭ್ರಷ್ಟಾಚಾರವನ್ನು ಮಾಡಿ ದೇಶದ ಜನರನ್ನು ಮೋಸ ಮಾಡಿದೆ. ಸುಳ್ಳು ಸರ್ವೆಗಳನ್ನು ಮಾಡಿಸಿ ದೇಶದ ಜನರನ್ನು ಕಾಂಗ್ರೆಸ್ ವಂಚಿಸಿದೆ.

ಕರ್ನಾಟಕದಲ್ಲೂ ಕಾಂಗ್ರೆಸ್ ಸುಳ್ಳು ಸರ್ವೆ ಮಾಡಿಸಿದೆ. ಹಣ ಬಲದ ಜೊತೆಗೆ ಸುಳ್ಳು ಸರ್ವೆ ಸುದ್ದಿಗಳನ್ನು ಹಬ್ಬಿಸುತ್ತಿದ್ದಾರೆ. ಕರ್ನಾಟಕವನ್ನು ದೇಶದ ನಂಬರ್ 1 ರಾಜ್ಯ ಮಾಡುತ್ತೇವೆ.

ಬಿಜೆಪಿ ಪ್ರಣಾಳಿಕೆಯನ್ನು ನೀಡಿದ ಎಲ್ಲ ಭರವಸೆಗಳನ್ನು ಈಡೇರಿಸುತ್ತೇವೆ.

ಕಾಂಗ್ರೆಸ್ ಸುಳ್ಳು ಮೂಟೆಯ ಪ್ರಣಾಳಿಕೆಯನ್ನು ಹೊರಡಿಸಿದೆ. ಪ್ರಣಾಳಿಕೆಯಲ್ಲಿ ಬಜರಂಗಳ ನಿಷೇಧ ಮಾಡುವುದಾಗಿ ಘೋಷಿಸಿದೆ ಎಂದು ಮೋದಿ ಹೇಳಿದರು.

ಬಳ್ಳಾರಿಯ ನಿಮ್ಮ ಪ್ರೀತಿ, ಉತ್ಸಾಹ ನಾನು ಎಂದೂ ಮರೆಯುವುದಿಲ್ಲ ಎಂದು ಬಿಜೆಪಿ ಸಮಾವೇಶದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು. ಬಿಜೆಪಿ ಬುಡಕಟ್ಟು ಸಮುದಾಯವನ್ನು ಸಶಕ್ತೀಕರಣಗೊಳಿಸಿದೆ.

ಕಾಂಗ್ರೆಸ್ ಬುಡಕಟ್ಟು ಸಮುದಾಯಕ್ಕೆ ಅವಮಾನ ಮಾಡ್ತಿದೆ. ಸಮಾಜದ ವಂಚಿತ ಜನರ ಅಭಿವೃದ್ಧಿಯನ್ನು ಕಾಂಗ್ರೆಸ್ ಎಂದೂ ಸಹಿಸುವುದಿಲ್ಲ.

ಬುಡಕಟ್ಟು ಮಹಿಳೆಯನ್ನು ರಾಷ್ಟ್ರಪತಿ ಮಾಡಿದ್ರೆ ಅಪಮಾನಿಸುತ್ತಾರೆ.

ಆದಿವಾಸಿ ಮಹಿಳೆ ರಾಷ್ಟ್ರಪತಿ ಆದ್ರೆ ಕಾಂಗ್ರೆಸ್ನವರಿಗೆ ಹೊಟ್ಟೆಕಿಚ್ಚು. ಹಿಂದುಳಿದವರ ಅಭಿವೃದ್ಧಿ ಕಾಂಗ್ರೆಸ್ ಪಕ್ಷ ಎಂದೂ ಸಹಿಸುವುದಿಲ್ಲ ಎಂದು ಮೋದಿ ಟೀಕಿಸಿದರು.

ಅಂತೆಯೇ ಕರ್ನಾಟಕವನ್ನು ದೇಶದ ನಂಬರ್ ಒನ್ ರಾಜ್ಯವನ್ನಾಗಿ ಮಾಡಲು ಭದ್ರತಾ ವ್ಯವಸ್ಥೆ, ಕಾನೂನು ಮತ್ತು ಸುವ್ಯವಸ್ಥೆ ಅತ್ಯಂತ ಪ್ರಮುಖ ಅವಶ್ಯಕತೆಯಾಗಿದೆ. ಕರ್ನಾಟಕವು ಭಯೋತ್ಪಾದನೆಯಿಂದ ಮುಕ್ತವಾಗಿರುವುದು ಅಷ್ಟೇ ಮುಖ್ಯ. ಬಿಜೆಪಿ ಯಾವಾಗಲೂ ಭಯೋತ್ಪಾದನೆ ವಿರುದ್ಧ ಕಠಿಣ ನಿಲುವು ಹೊಂದಿದೆ. ಆದರೆ ಭಯೋತ್ಪಾದನೆ ವಿರುದ್ಧ ಕ್ರಮ ಕೈಗೊಂಡಾಗಲೆಲ್ಲ ಕಾಂಗ್ರೆಸ್‌ಗೆ ಹೊಟ್ಟೆ ನೋವು ಬರುತ್ತದೆ.

ಕಾಂಗ್ರೆಸ್ ಗೆಲ್ಲುವ ರಾಜಕೀಯಕ್ಕಾಗಿ ನಕಲಿ ನಿರೂಪಣೆ ಮತ್ತು ಸಮೀಕ್ಷೆಗಳನ್ನು ಮಾಡುತ್ತದೆ. ರಾಜ್ಯದ ಮತದಾರರನ್ನು ದಾರಿ ತಪ್ಪಿಸುವ ಪ್ರಯತ್ನ ಮಾಡುತ್ತಿದ್ದಾರೆ.

ಕಾಂಗ್ರೆಸ್ ನ ಪ್ರಣಾಳಿಕೆಯಲ್ಲಿ ತುಷ್ಟೀಕರಣ, ನಿಷೇಧಾಜ್ಞೆ ಅಷ್ಟೆ. ಅವರ (ಕಾಂಗ್ರೆಸ್) ತುಷ್ಟೀಕರಣದ ರಾಜಕಾರಣವನ್ನು ಕರ್ನಾಟಕದ ಜನತೆ ಗಮನಿಸುತ್ತಿದ್ದಾರೆ. ನಾನು ಬಜರಂಗ್ ಬಲಿಯನ್ನು ಆಹ್ವಾನಿಸುವುದನ್ನು ಅವರು ಇಷ್ಟಪಡುವುದಿಲ್ಲ ಎಂದು ಹೇಳಿದರು.

## ಭ್ರಷ್ಟಾಚಾರ ಮಾಡಿದ್ದರೆ ಸಾರ್ವಜನಿಕವಾಗಿ ನೇಣು ಹಾಕಿ: ಅರವಿಂದ ಕೇಜ್ರಿವಾಲ್



ನವದೆಹಲಿ: 'ನನ್ನನ್ನು ಕಳ್ಳ ಎಂದು ಸಾಬೀತು ಪಡಿಸಲು ತನಿಖಾ ಸಂಸ್ಥೆಗಳು ಇನ್ನಿಲ್ಲದ ಪ್ರಯತ್ನ ಮಾಡುತ್ತಿದೆ. ಒಂದು ವೇಳೆ ನಾನು ಒಂದು ಪೈಸೆಯ ಭ್ರಷ್ಟಾಚಾರ ಮಾಡಿದ್ದಾಗಿ ಸಾಬೀತುಪಡಿಸಿದ್ದೇ ಆದಲ್ಲಿ ಸಾರ್ವಜನಿಕವಾಗಿ ನನ್ನನ್ನು ನೇಣು ಹಾಕಿ' ಎಂದು ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಹೇಳಿದ್ದಾರೆ.


ಪಂಜಾಬ್‌ನಲ್ಲಿ 80 ಆಮ್ ಆದ್ಮಿ ಕ್ಲಿನಿಕ್ ಲೋಕಾರ್ಪಣೆಗೊಳಿಸದ ಬಳಿಕ ಅವರು ಮಾತನಾಡಿದರು.

ಅವರು ನನ್ನ ಹಿಂದೆ ಸಿಬಿಐ, ಇ.ಡಿ, ಆದಾಯ ತೆರಿಗೆ ಹಾಗೂ ಪೊಲೀಸರನ್ನು ಬಿಟ್ಟಿದ್ದಾರೆ. ಏನೇ ಆದರೂ ಸರಿಯೇ ಕೇಜ್ರಿವಾಲ್ ಒಬ್ಬ ಕಳ್ಳ ಎಂದು ಬಿಂಬಿಸಬೇಕು. ನಾನು ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದೇನೆ ಎಂದು ಸಾಬೀತುಪಡಿಸಬೇಕು ಎಂದು ಅವರು ಬಯಸಿದ್ದಾರೆ' ಎಂದು ಕೇಜ್ರಿವಾಲ್ ದೂರಿದರು.

ನಾನು ಮೋದಿಜಿಯವರಿಗೆ ಹೇಳಬಯಸುತ್ತೇನೆ.. ಪ್ರಧಾನ ಮಂತ್ರಿಗಳೇ, ಒಂದು ವೇಳೆ ಕೇಜ್ರಿವಾಲ್ ಭ್ರಷ್ಟನಾಗಿದ್ದರೆ, ಪ್ರಪಂಚದಲ್ಲಿ ಯಾರೂ ಪ್ರಮಾಣಿಕರಿಲ್ಲ ಎಂದರ್ಥ. ಒಂದು ವೇಳೆ ನಾನು ಒಂದು ಪೈಸೆ ಭ್ರಷ್ಟಾಚಾರ ಮಾಡಿದ್ದು ಸಾಬೀತಾದರೆ, ನನ್ನನ್ನು ಸಾರ್ವಜನಿಕವಾಗಿ ನೇಣು ಹಾಕಿ' ಎಂದು ಹೇಳಿದ್ದಾರೆ.

ಆದರೆ ದೈನಂದಿನ ನಾಟಕ ಹಾಗೂ ತಮಾಷೆಯನ್ನು ನಿಲ್ಲಿಸಿ' ಎಂದು ಪ್ರಧಾನಿ ಮೋದಿ ವಿರುದ್ಧ ಹರಿಹಾಯ್ದರು.

## ನೀಟ್ ಪರೀಕ್ಷೆ: ವೇಳಾಪಟ್ಟಿ ಬದಲಿಸಿಕೊಳ್ಳಲು ಕುಮಾರಸ್ವಾಮಿ ಆಗ್ರಹ



ಬೆಂಗಳೂರು: ಇದೇ ಭಾನುವಾರ ಬೆಂಗಳೂರಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಚುನಾವಣೆಗಾಗಿ ಹಮ್ಮಿಕೊಂಡಿರುವ ರೋಡ್ ಶೋದಿಂದ ನೀಟ್ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಲಿದೆ. ಈ ಕಾರಣಕ್ಕೆ ಪ್ರಧಾನಿಗಳು ರೋಡ್ ಶೋ ವೇಳಾಪಟ್ಟಿಯನ್ನು ಬದಲಿಸಿಕೊಳ್ಳಬೇಕು ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ ಒತ್ತಾಯಿಸಿದರು.

ಸುದ್ದಿಗಾರರ ಜತೆ ಶುಕ್ರವಾರ ಮಾತನಾಡಿದ ಅವರು, ಭಾನುವಾರ ನೀಟ್ ಪರೀಕ್ಷೆಯ ನಡುವೆಯೂ ಪ್ರಧಾನಿ ಮೋದಿ ರೋಡ್ ಶೋ ವಿಚಾರದ ಬಗ್ಗೆ ವಿದ್ಯಾರ್ಥಿಗಳ ಪೋಷಕರು ಹಾಗೂ ಸಾರ್ವಜನಿಕರಿಂದ ಬರುತ್ತಿರುವ ಟೀಕೆಗಳ ಬಗ್ಗೆ ನನಗೆ ಮಾಹಿತಿ ಇದೆ. ರೋಡ್ ಶೋ ಗಳಿಂದ ಮಕ್ಕಳ ಭವಿಷ್ಯಕ್ಕೆ ಧಕ್ಕೆ ಉಂಟಾಗಬಾರದು ಎಂದರು.

ಬಿಜೆಪಿಗ ನಾಡಿನ ಜನರ ಸಮಸ್ಯೆಗಳಿಗಿಂತ ಅಧಿಕಾರ ಹಿಡಿಯೋದೆ ಮುಖ್ಯವಾಗಿದೆ. ಅಧಿಕಾರಕ್ಕೋಸ್ಕರ ಅವರು ಏನು ಬೇಕಾದರೂ ಮಾಡ್ತಾರೆ. ಜನಸಾಮಾನ್ಯರ ಬದುಕಿನ ಬಗ್ಗೆ ಅವರಿಗೆ ಯಾವುದೇ ಕಾಳಜಿ ಇಲ್ಲ. ಏನಾದರೂ ಮಾಡಿ ಅಧಿಕಾರ ಹಿಡಿಯಬೇಕು ಎಂಬ ಅಜೆಂಡಾ ಇಟ್ಟುಕೊಂಡಿದ್ದಾರೆ ಎಂದು ಟೀಕಿಸಿದರು.

ಸಾರ್ವಜನಿಕ ವಲಯದಲ್ಲಿ ಇದು ಸರಿನಾ, ತಪ್ಪಾ ಚರ್ಚೆ ನಡೆದರೂ ಅದನ್ನು ಬಿಜೆಪಿಯವರು ಗಂಭೀರವಾಗಿ ತೆಗೆದುಕೊಳ್ಳುವುದಿಲ್ಲ. ದೇಶದ ಪ್ರಧಾನಿಯಾಗಿ ಮಕ್ಕಳ ಭವಿಷ್ಯದ ಜತೆಗೆ ಚೆಲ್ಲಾಟ ಆಡೋದು ಸರಿಯಲ್ಲ. ನೀಟ್ ಪರೀಕ್ಷೆಗೆ ತೊಂದರೆ ಕೊಡಬಾರದು. ಮಕ್ಕಳ ಭವಿಷ್ಯದ ಬಗ್ಗೆ ಅವರಿಗೆ ಏನಾದರೂ ಕಿಂಚಿತ್ ಕಾಳಜಿ ಇದ್ದರೆ ರೋಡ್ ಶೋ ಮುಂದಕ್ಕೆ ಹಾಕುವುದು ಒಳ್ಳೆಯದು ಎಂದರು.



## ಮೇ 8ರಂದು ಸಂಜೆ 6 ಗಂಟೆಗೆ ಬಹಿರಂಗ ಪ್ರಚಾರಕ್ಕೆ ತೆರೆ

ಬೆಂಗಳೂರು: ರಾಜ್ಯ ವಿಧಾನಸಭೆ ಚುನಾವಣೆ ಹಿನ್ನಲೆಯಲ್ಲಿ ಪ್ರಚಾರದ ಭರಾಟೆ ಮುಗಿಲು ಮುಟ್ಟಿದ್ದು, ಮೇ 8 ರಂದು ಸಂಜೆ 6 ಗಂಟೆಗೆ ಬಹಿರಂಗ ಪ್ರಚಾರಕ್ಕೆ ತೆರೆ ಬೀಳಲಿದೆ.

ಬೆಂಗಳೂರಿನಲ್ಲಿ ರಾಜ್ಯ ಚುನಾವಣಾ ಆಯೋಗದ ಮುಖ್ಯಾಧಿಕಾರಿ ಮನೋಜ್ ಕುಮಾರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮೇ 8 ರಂದು ಸಂಜೆ 6 ಗಂಟೆವರೆಗೆ ಮಾತ್ರ ಅವಕಾಶವಿದೆ. ಮೇ 8ರ ಸಂಜೆ 6 ಗಂಟೆ ನಂತರ ಅಭ್ಯರ್ಥಿಗಳು ಮಾತ್ರ ಮನೆ ಮನೆ ಪ್ರಚಾರ ಕೈಗೊಳ್ಳ ಬಹುದಾಗಿದೆ ಎಂದರು. ಬೆಂಗಳೂರಿನಲ್ಲಿ ಮೇ 6, 7 ರಂದು ಪ್ರಧಾನಿ ಮೋದಿ ಅವರ ರೋಡ್ ಶೋಗೆ ಅನುಮತಿ ನೀಡಲಾಗಿದೆ ಎಂದು ತಿಳಿಸಿದ್ದಾರೆ.

## ಎಂಇಎಸ್ ಕಿಡಿಗೇಡಿಗಳ ಸಂಘಟನೆ: ಸಿಎಂ ವಾಗ್ದಾಳಿ



ಹುಬ್ಬಳ್ಳಿ: ಎಂಇಎಸ್ ಕಿಡಿಗೇಡಿಗಳ ಸಂಘಟನೆ. ನಾವು ಅವರನ್ನು ನಿಭಾಯಿಸುತ್ತೇವೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಹುಬ್ಬಳ್ಳಿಯಲ್ಲಿ ಮಾಧ್ಯಮ ದವರೊಂದಿಗೆ ಮಾತನಾಡಿದರು. ಚುನಾವಣೆ ವೇಳೆ ಎಮ್‌ಇಎಸ್‌ನವರು ಜನರ ಮನಸ್ಸನ್ನು ಕೆಡಿಸುವ ಗಿಮಿಕ್ ಮಾಡುತ್ತಾರೆ. ಬೆಳಗಾವಿ ಜನರಿಗೆ ಇದೆಲ್ಲಾ ಗೊತ್ತಿದೆ. ಇದಕ್ಕೆ ಜನರೇ ಉತ್ತರ ಕೊಡುತ್ತಾರೆ ಎಂದರು. ಜನ ತೀರ್ಮಾನ ತೆಗೆದುಕೊಂಡು ಎಮ್‌ಇಎಸ್‌ಅನ್ನು ಐದು ವರ್ಷ ಮನೆಗೆ ಕಳುಹಿಸುತ್ತಾರೆ ಎಂದರು.

ನಮ್ಮ ಪ್ರಧಾನಿ ಕಾಂಗ್ರೆಸ್‌ನ ಪ್ರಧಾನಿಗಳಂತೆ ಇರಬೇಕಿಲ್ಲ ನಮ್ಮ ಪ್ರಧಾನಿ ಕಾಂಗ್ರೆಸ್‌ನ ಪ್ರಧಾನಮಂತ್ರಿಗಳ ರೀತಿ ಇರಬೇಕೆಂದಿಲ್ಲ. ಅವರಿಗೆ, ಜನರ ಬಳಿ ಹೋಗಬಾರದು, ಜನರ ಭಾವನೆ ತಿಳಿಯಬಾರದು ಹಾಗೂ ದಿಲ್ಲಿಯಲ್ಲಿರಬೇಕು. ಹಳ್ಳಿಗೆ ಹೋದರೆ ಅವರು ಪ್ರಧಾನಿ ಅಲ್ಲಾ ಅನ್ನೋದು ಹಳೆಯ ಕಾಂಗ್ರೆಸ್‌ನ ವಿಚಾರಧಾರೆ. ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅದೇ ವಿಚಾರಧಾರೆಗೆ ಹೊಂದಿಕೊಂಡಿದ್ದಾರೆ ಎಂದರಲ್ಲದೇ ಅದರಿಂದ ಹೊರಗೆ ಬರಲು ಅವರಿಗೂ ಸಾಧ್ಯವಿಲ್ಲ ಎಂದರು.

ವಿಭಿನ್ನ ಪ್ರಧಾನಿಯಿದ್ದರೆ ಕಾಂಗ್ರೆಸ್ ಗೆ ಕಷ್ಟ: ವಿಭಿನ್ನವಾಗಿರುವ ಪ್ರಧಾನಿಗಳು ಇದ್ದಾಗ ಅವರಿಗೆ ಕಷ್ಟವಾಗುತ್ತೆ. ರಾಜ್ಯದ ಜನರು ಕಷ್ಟದಲ್ಲಿದ್ದಾಗ ನಮ್ಮ ಪ್ರಧಾನಿ ಅತಿ ಹೆಚ್ಚು ಪರಿಹಾರ ಕೊಟ್ಟಿದ್ದಾರೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಅತೀ ಹೆಚ್ಚು ಆತ್ಮಹತ್ಯೆ ಗಳಾಗಿದ್ದವು.

ಮನಮೋಹನ್ ಸಿಂಗ್, ರಾಹುಲ್ ಗಾಂಧಿ ಆವಾಗ ರಾಜ್ಯಕ್ಕೆ ಬಂದಿದ್ದರೆ? ಎಂದು ಪ್ರಶ್ನಿಸಿದರು.

ಬಿಜೆಪಿ ಹೆದರಿದೆ ಎನ್ನುವುದು ಹಾಸ್ಯಾಸ್ಪದ ಎಲ್ಲಿಯವರೆಗೆ ಕಾಂಗ್ರೆಸ್‌ನವರು ಪಿಎಫ್‌ಐ, ಎಸ್‌ಡಿಪಿಐ ನ್ನು ಸಂತೋಷಪಡಿಸುವ ಪ್ರಯತ್ನದಲ್ಲಿ ಇರುತ್ತಾರೊ, ಅಲ್ಲಿಯವರೆಗೆ ಭಜರಂಗದಳದ ವಿಚಾರ ಜನರ ಮಧ್ಯೆ ಇರುತ್ತದೆ. ಕಾಂಗ್ರೆಸ್ ಪ್ರಣಾಳಿಕೆ ನೋಡಿ ಬಿಜೆಪಿ ಹೆದರಿದೆ ಎನ್ನುವುದು ಹಾಸ್ಯಾಸ್ಪದ ಎಂದರು.

ಬಿ.ಎಲ್.ಸಂತೋಷ ಲಿಂಗಾಯತ ಮತಗಳು ಅಗತ್ಯವಿಲ್ಲ ಎಂಬ ಹೇಳಿಕೆಗೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿ ಈ ವಿಚಾರ ಈಗ ಬೇಡ ಎಂದರು.

## ಮೂರು ಗೋಣಿ ಚೀಲದಲ್ಲಿದ್ದ ಕೋಟಿಗೂ ಅಧಿಕ ಹಣ ಜಪ್ತಿ



ಕೋಲಾರ: ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲೂಕಿನ ಹಂಚಾಳ ಗ್ರಾಮದ ಬಳಿ ಇರುವ ವಿಲ್ಲಾ ಸಮೀಪ ಮತ್ತೆ ಕೋಟಿ ಕೋಟಿ ನಗದು ಜಪ್ತಿ ಮಾಡಲಾಗಿದೆ.

ವಿಲ್ಲಾ ಸಮೀಪ ಬಿಟ್ಟು ಹೋಗಿದ್ದ ಕಾರಿನಲ್ಲಿ ಮೂರು ಗೋಣಿ ಚೀಲದಲ್ಲಿ ಹಣ ಪತ್ತೆಯಾಗಿದೆ. ಜಿಯೋನ್ ಹಿಲ್ಸ್ ಗಾಲ್ಫ್ ರೆಸಾರ್ಟ್ ವಿಲ್ಲಾದಲ್ಲಿ ಹಣ ಪತ್ತೆಯಾಗಿದೆ. ರಿಯಲ್ ಎಸ್ಟೇಟ್ ಉದ್ಯಮಿ ರಮೇಶ ಎಂಬುವರಿಗೆ ಸೇರಿದ ವಿಲ್ಲಾದಲ್ಲಿ ಹಣ ಪತ್ತೆಯಾಗಿದೆ. ಪೊಲೀಸರು ದಾಳಿ ನಡೆಸಿದ ವೇಳೆ ವಿಲ್ಲಾ ಸಮೀಪ ಕಾರ್ ಬಿಟ್ಟು ಕೆಲವರು ಪರಾರಿಯಾಗಿದ್ದರು.

ಬಿಟ್ಟು ಹೋಗಿದ್ದ ಕಾರ್ ಲಾಕ್ ಓಪನ್ ಮಾಡಿದಾಗ ಕೋಟಿಗೂ ಅಧಿಕ ಹಣ ಪತ್ತೆಯಾಗಿದೆ. ಚುನಾವಣಾಧಿಕಾರಿಗಳು ಹಣ ಲೆಕ್ಕ ಹಾಕುತ್ತಿದ್ದಾರೆ. ಹಂಚಾಳ ಸಮೀಪ ಇರುವ ರೆಸಾರ್ಟ್ ನಲ್ಲಿ ಮೊದಲಿಗೆ 2.5 ಕೋಟಿ ರೂಪಾಯಿ ಹಣ ಪತ್ತೆಯಾಗಿತ್ತು. ನಂತರ ಕೋಟಿಗೂ ಅಧಿಕ ಹಣ ಪತ್ತೆಯಾಗಿದೆ ಎನ್ನಲಾಗಿದೆ.



## ಕಿಚ್ಚ ಸುದೀಪ್ ನೋಡಲು ಮುಗಿಬಿದ್ದ ಅಭಿಮಾನಿ; ಆಯತಪ್ಪಿ ಕೆಳಗೆ ಬಿದ್ದ ಸಚಿವ ಸೋಮಣ್ಣ

ಚಾಮರಾಜನಗರ: ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಪರ ನಟ ಕಿಚ್ಚ ಸುದೀಪ್ ಚಾಮರಾಜನಗರ ಜಿಲ್ಲೆಯ ಸಂತೆಮಾರೆನ ಹಳ್ಳಿಯಲ್ಲಿ ಭರ್ಜರಿ ರೋಡ್ ಶೋ, ಪ್ರಚಾರ ನಡೆಸಿದ್ದಾರೆ. ಈ ವೇಳೆ ಅವಘಡವೊಂದು ಸಂಭವಿಸಿದೆ. ಕಾರಿನ ಮೇಲೆ ನಿಂತು ನಟ ಕಿಚ್ಚ ಸುದೀಪ್ ಹಾಗೂ ಸಚಿವ ವಿ.ಸೋಮಣ್ಣ ಜನರತ್ತ ಕೈ ಬೀಸುತ್ತಿದ್ದ ವೇಳೆ ಅಭಿಮಾನಿಯೊಬ್ಬ ಕಿಚ್ಚ ಸುದೀಪ್ ಅವರನ್ನು ನೋಡಲು ಕಾರಿನ ಮೇಲೆ ಹತ್ತಿದ್ದಾನೆ ತಾನು ಆಯತಪ್ಪುತ್ತಿದ್ದಂತೆ ಸಚಿವ ಸೋಮಣ್ಣ ಅವರನ್ನು ಹಿಡಿದುಕೊಂಡಿದ್ದಾನೆ. ಸಚಿವ ಸೋಮಣ್ಣ ಅಭಿಮಾನಿಯ ಸಮೇತವಾಗಿ ಆಯತಪ್ಪಿ ಕೆಳಗೆ ಬಿದ್ದಿದ್ದಾರೆ.

ತಕ್ಷಣ ಕಿಚ್ಚ ಸುದೀಪ್ ಹಾಗೂ ಇತರರು ಸಚಿವರನ್ನು ಮೇಲಕೆತ್ತಿದ್ದಾರೆ.

ಇದೇ ವೇಳೆ ನೆಚ್ಚಿನ ನಟನನ್ನು ನೋಡಲು ಸಾಗರೋಪಾದಿಯಲ್ಲಿ ಜನರು ಸಂತೇಮಾರೇನ ಹಳ್ಳಿಗೆ ಆಗಮಿಸಿದ್ದು, ಜನರನ್ನು ನಿಯಂತ್ರಿಸಲು ಪೊಲೀಸರು ಲಘು ಲಾಠಿ ಪ್ರಹಾರ ನಡೆಸಿದ ಘಟನೆ ನಡೆದಿದೆ.

## ಚುನಾವಣೆಯಲ್ಲಿ ಬಿಜೆಪಿಗೆ ತಕ್ಕ ಪಾಠ ಸಿಗಲಿದೆ: ಜಗದೀಶ್ ಶೆಟ್ಟರ್



ಧಾರವಾಡ: ಬಿಜೆಪಿ ಈಗ ಯಾರ ಕೈಯಲ್ಲಿ ಇದೆ ಎಂಬುದು ಎಲ್ಲರಿಗೂ ಗೊತ್ತಾಗುತ್ತಿದೆ. ಇದರಿಂದ ಉಳಿದ ಸಮಯದಾಯದವರು ನೊಂದಿದ್ದಾರೆ. ತಕ್ಕ ಪಾಠ ಬಿಜೆಪಿಗೆ ಚುನಾವಣೆಯಲ್ಲಿ ಸಿಗಲಿದೆ ಎಂದು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಹೇಳಿದರು. ನಗರದಲ್ಲಿ ಮಾತನಾಡಿದ ಅವರು, ಮುಂದೆಯೂ ಲಿಂಗಾಯತ ಅಭ್ಯರ್ಥಿಯನ್ನೇ ಸಿಎಂ ಮಾಡುತ್ತೇವೆ ಎಂದು ಹೇಳುವ ಧೈರ್ಯ ಬಿಜೆಪಿಯವರಿಗೆ ಇದೆಯಾ ಎಂದು ಪ್ರಶ್ನೆ ಮಾಡಿದ ಅವರು, ಲಿಂಗಾಯತ ಸಮುದಾಯ ಹೊರಗಿಟ್ಟು ಅದರ ಬೆಂಬಲ ಇಲ್ಲದೇ ಬಿಜೆಪಿಯವರು ಸರ್ಕಾರ ರಚನೆ ಮಾಡಲು ಹೊರಟಿದ್ದಾರೆ. ಅವಸರವೇ ಬಿಜೆಪಿಗೆ ಅಪಘಾತವನ್ನುಂಟು ಮಾಡಲಿದೆ ಎಂದರು. ರಾಜ್ಯದಲ್ಲಿ 25 ಸಂಸದರಿದ್ದರೂ ಪ್ರಹ್ಲಾದ್ ಜೋಶಿ ಒಬ್ಬರನ್ನೇ ಕ್ಯಾಬಿನೆಟ್ ದರ್ಜೆಯ ಸಚಿವರನ್ನಾಗಿ ಮಾಡಲಾಗಿದೆ. ನಾರಾಯಣಸ್ವಾಮಿ ದಲಿತ ಜನಾಂಗದವರು ಅವರು ರಾಜ್ಯಮಂತ್ರಿಯಾಗಿದ್ದಾರೆ. ಶೋಭಾ ಕರಂದ್ಲಾಜೆ ಒಕ್ಕಲಿಗರು ಅವರು ಕೂಡ ರಾಜ್ಯ ಮಂತ್ರಿಯಾಗಿದ್ದಾರೆ. ಲಿಂಗಾಯತ ಸಮಾಜದ ಭಗವಂತ ಖೂಬಾ ಹಾಗೂ ಸುರೇಶ್ ಅಂಗಡಿಯವರನ್ನೂ ರಾಜ್ಯ ಮಂತ್ರಿಯನ್ನಾಗಿ ಮಾಡಲಾಗಿತ್ತು. ಇಲ್ಲೇ ತಾರತಮ್ಯ ಎದ್ದು ಕಾಣುತ್ತಿದೆ ಎಂದು ಹೇಳಿದರು. ವಿನಯ್ ಕುಲಕರ್ಣಿ ಅವರಿಗೆ ನೇರವಾಗಿ ಬಂದು ಪ್ರಚಾರ ಮಾಡಲು ಆಗುತ್ತಿಲ್ಲ. ಅವರ ಮೇಲೆ ದೊಡ್ಡ ಷಡ್ಯಂತ್ರವೇ ನಡೆದಿದೆ. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಅವರ ಬೆಂಬಲಿಗರಿಗೆ ಪ್ರಚಾರ ಮಾಡುವ ಹಕ್ಕಿದೆ. ಆದರೆ ಅವರ ಬೆಂಬಲಿಗರ ಮೇಲೂ ಐಟಿ ದಾಳಿ ನಡೆಸಿ ಹೆದರಿಸುವ ತಂತ್ರ ನಡೆದಿದೆ. ಇದು ಬಹಳ ದಿನ ನಡೆಯುವುದಿಲ್ಲ. ಕೇಂದ್ರದಲ್ಲಿ ಅಧಿಕಾರ ಇದೆ ಎಂದು ಇಲ್ಲಿನ ಕೇಂದ್ರ ಸಚಿವರು ಈ ರೀತಿ ದಾಳಿ ಮಾಡಿಸುತ್ತಿದ್ದಾರೆ. ಇದನ್ನು ಮೆಟ್ಟಿ ನಿಲ್ಲುವ ಶಕ್ತಿ ನಮಗಿದೆ. ಇದೆಲ್ಲದಕ್ಕೂ ಮೇ.13 ರಂದು ಜನ ಉತ್ತರ ಕೊಡುತ್ತಾರೆ ಎಂದು ಶೆಟ್ಟರ್ ಹೇಳಿದರು. ನಿನ್ನೆ ನಾನು ರೋಣ, ಹಾವೇರಿ, ಗಜೇಂದ್ರಗಡ ಸೇರಿದಂತೆ ಹಲವು ಕಡೆ ಪ್ರಚಾರ ಮಾಡಿದ್ದೇನೆ. ಮಧ್ಯಾಹ್ನ ಉರಿಬಿಸಿಲಿನಲ್ಲೂ ಜನ ಸೇರಿದ್ದರು. ಇದನ್ನು ನೋಡಿದರೆ ನಮಗೆ ಉತ್ತಮ ಬೆಂಬಲ ಸಿಗುತ್ತಿದೆ. ಬಿಜೆಪಿಯಲ್ಲಿ ನನಗೆ ಅಪಮಾನ ಮಾಡಿದ್ದಕ್ಕೆ ಹೊರ ಬಂದಿದ್ದೇನೆ. ನಾನು ಕಟ್ಟಿದ ಮನೆಯಿಂದ ನನ್ನನ್ನು ಹೊರ ಹಾಕುವ ಕೆಲಸ ನಡೆಯಿತು ಎಂದರು.

## ಪ್ರಧಾನಿ ಮೋದಿ-ಕೆ.ಎಸ್. ಈಶ್ವರಪ್ಪ ವಿರುದ್ಧ ಚುನಾವಣಾ ಆಯೋಗಕ್ಕೆ ಕಾಂಗ್ರೆಸ್ ದೂರು

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ಹಾಗೂ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಕಾಂಗ್ರೆಸ್ ಗುರುವಾರ ಭಾರತೀಯ ಚುನಾವಣಾ ಆಯೋಗಕ್ಕೆ ದೂರು ನೀಡಿದೆ. ಬಿಜೆಪಿ ಹಿರಿಯ ನಾಯಕರಾಗಿರುವ ಪ್ರಧಾನಿ ಮೋದಿ ಪ್ರಚಾರದಲ್ಲಿ ಹಿಂದೂ ದೇವರುಗಳನ್ನು ಬಳಸಿಕೊಳ್ಳುವ ಮೂಲಕ ಜನರ ಭಾವನೆಗಳಿಗೆ ನೋವುಂಟು ಮಾಡಿದ್ದಾರೆ ಎಂದು ಕಾಂಗ್ರೆಸ್ ಆರೋಪಿಸಿದೆ. ಅಲ್ಲದೇ ರೋಡ್ ಶೋ ಮೂಲಕ ಜನರಿಗೆ ಅನಾನುಕೂಲತೆ ಉಂಟು ಮಾಡುತ್ತಿದ್ದಾರೆ. ಈ ಸಂಬಂಧ ಸುಪ್ರೀಂ ಕೋರ್ಟ್ ಈಗಾಗಲೇ ಮಾರ್ಗಸೂತ್ರ ಹೊರಡಿಸಿರುವುದಾಗಿ ಕಾಂಗ್ರೆಸ್ ಕಾನೂನು ಘಟಕದ ಎಸ್ ಎ ಅಹ್ಮದ್ ಹೇಳಿದರು. ಇನ್ನೊಂದೆಡೆ ಮಾಜಿ ಸಚಿವ ಕೆ. ಎಸ್. ಈಶ್ವರಪ್ಪ ಕಾಂಗ್ರೆಸ್ ಪ್ರಣಾಳಿಕೆ ಪ್ರತಿ ಸುಟ್ಟು ಹಾಕುವ ಮೂಲಕ ನೀತಿ ಸಂಹಿತೆ ಉಲ್ಲಂಘಿಸಿದ್ದು, ಅವರ ಕ್ರಮ ಕೈಗೊಳ್ಳಬೇಕೆಂದು ಕಾಂಗ್ರೆಸ್, ಚುನಾವಣಾ ಆಯೋಗವನ್ನು ಒತ್ತಾಯಿಸಿದೆ.

## ಡಿಕೆ ಶಿವಕುಮಾರ್ ಬದಲು ಕೆ.ಡಿ ಶಿವಕುಮಾರ್ ಅಂತ ಹೆಸರು ಇಟ್ಟುಕೊಳ್ಳಿ: ಈಶ್ವರಪ್ಪ

ಹುಬ್ಬಳ್ಳಿ: ಕರ್ನಾಟಕದಲ್ಲಿ ಜಾತಿ ರಾಜಕಾರಣಕ್ಕೆ ಬೆಂಕಿ ಹಚ್ಚಿದವರೇ ಕೆಪಿಸಿಸಿ ಅಧ್ಯಕ್ಷರಾಗಿರುವ ಡಿ.ಕೆ.ಶಿವಕುಮಾರ್. ಇಂಥವರು ಬಿಜೆಪಿ ಜಾತಿ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸುತ್ತಿರುವುದು ನಾಚಿಕೆಗೇಡು ಎಂದಿದ್ದಾರೆ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಸೇರಿದಂತೆ ಕೈ ನಾಯಕರನ್ನು ತರಾಟೆಗೆ ತೆಗೆದುಕೊಂಡರು. ಕರ್ನಾಟಕ ರಾಜ್ಯದ ಜನರ ಆಕ್ರೋಶ ತೋರಿಸಲು ಕಾಂಗ್ರೆಸ್ ಪ್ರಣಾಳಿಕೆ ಸುಟ್ಟಿದ್ದೇನೆ. ರಾಷ್ಟ್ರಾಭಿಮಾನಿ, ದೇಶ ರಕ್ಷಕ ಸಂಘಟನೆ ಬಜರಂಗ ದಳವನ್ನು ಮುಸ್ಲಿಂ ಮತಕ್ಕಾಗಿ ನಿಷೇಧಿಸುವ ಮಾತನ್ನು ಆಡುತ್ತಿದೆ ಕಾಂಗ್ರೆಸ್ ಎಂದು ದೂರಿದರು.



ಡಿ.ಕೆ. ಶಿವಕುಮಾರ್ ಅವರು ಅವರು ಜಾತಿವಾದಿ. ನಿಮ್ಮ ಜಾತಿಯವನನ್ನು ಸಿಎಂ ಮಾಡಲು ನನ್ನನ್ನು ಬೆಂಬಲಿಸಿ ಎಂದು ಕೇಳುವ ಅವರ ಜಾತಿವಾದಿಯಲ್ಲವೇ ಎಂದು ಕೇಳಿದರು ಈಶ್ವರಪ್ಪ. ಬಜರಂಗ ದಳಕ್ಕೂ ಆಂಜನೇಯನಿಗೂ ಏನು ಸಂಬಂಧ ಎನ್ನುವ ಅಸಂಬದ್ಧ ಪ್ರಶ್ನೆಯನ್ನು ಕೇಳಿದ್ದಾರೆ ಡಿ.ಕೆ. ಶಿವಕುಮಾರ್. ಬಜರಂಗ ಬಲಿಯಂತೆ ಕೆಚ್ಚು ತೋರಿಸುವುದು, ಅವನನ್ನು ಆರಾಧಿಸುತ್ತೇವೆ ಎನ್ನುವ ಕಾರಣಕ್ಕಾಗಿ ಸಂಘಟನೆಗೆ ಆ ಹೆಸರು ಇಟ್ಟಿದ್ದೇವೆ. ಡಿ.ಕೆ. ಶಿವಕುಮಾರ್‌ಗೆ ಶಿವಕುಮಾರ್ ಅನ್ನೋ ಹೆಸರು ಯಾಕಿಟ್ಟರು? ಶಿವಕುಮಾರ್ ಥರ ಇರಲಿ ಅಂತ ತಾನೇ? ಅವರಿಗೆ ಡಿ.ಕೆ. ಶಿವಕುಮಾರ್ ಅಂತ ಹೆಸರು ಯಾಕೆ ಬೇಕು? ಕೆಡಿ ಶಿವಕುಮಾರ್ ಅಂತ ಹೆಸರು ಇಟ್ಕೊಳ್ಳಿ ಎಂದು ಈಶ್ವರಪ್ಪ ಹೇಳಿದರು.

ಆರ್‌ಎಸ್‌ಎಸ್ ಮಹತ್ವ ಅರಿತುಕೊಂಡಿರುವ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಕಾಂಗ್ರೆಸ್ ಪಕ್ಷದ ಬಜರಂಗದಳ ನಿಷೇಧಿಸುವ ಪ್ರಣಾಳಿಕೆಯನ್ನಿಟ್ಟುಕೊಂಡು ಹೇಗೆ ಜನರ ಮುಂದೆ ಹೋಗುತ್ತಾರೆ. ಅವರ ಸ್ವಾಭಿಮಾನ ಎಲ್ಲಿ ಹೋಯ್ತು? ಜಗದೀಶ್ ಶೆಟ್ಟರ್ ಅವರು ಮತಕ್ಕಾಗಿ ಸ್ವಾಭಿಮಾನವನ್ನು ಮಾರಿಕೊಳ್ಳುತ್ತಿದ್ದಾರೆಯೇ ಎಂದು ಪ್ರಶ್ನಿಸಿದ್ದಾರೆ.



# ಇಂದು ರಾಹುಲ್ ಗಾಂಧಿ ಬೆಳಗಾವಿಗೆ

## ಸಾರ್ವಜನಿಕ ಪ್ರಚಾರ ಸಭೆ ನಡೆಯುವ ಸ್ಥಳ ಪರಿಶೀಲಿಸಿದ ಸತೀಶ್ ಜಾರಕಿಹೊಳಿ



ಬೆಳಗಾವಿ: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಇಂದು ಬೆಳಗಾವಿಗೆ ಆಗಮಿಸುತ್ತಿದ್ದು, ಯಮಕನಮರಡಿ ಮತಕ್ಷೇತ್ರದ ಭೂತರಾಮನಹಟ್ಟಿಯಲ್ಲಿ ಮಧ್ಯಾಹ್ನ 2 ಗಂಟೆಗೆ ಹಮ್ಮಿಕೊಂಡಿರುವ ಬೃಹತ್ ಸಾರ್ವಜನಿಕ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ಯಮಕನಮರಡಿ ಮತಕ್ಷೇತ್ರದ ಭೂತರಾಮನಹಟ್ಟಿಯಲ್ಲಿ ನಡೆಯುವ ಕಾರ್ಯಕ್ರಮದ ಸ್ಥಳವನ್ನು ಪರಿಶೀಲಿಸಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾಳೆ ನಡೆಯುವ ಬೃಹತ್ ಸಾರ್ವಜನಿಕ ಪ್ರಚಾರ ಸಭೆಯಲ್ಲಿ25 ಸಾವಿರ ಜನ ಸೇರುವ ನಿರೀಕ್ಷೆಇದೆ ಎಂದರು.

ರಾಜ್ಯದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ಸಿದ್ದರಾಮಯ್ಯನವರು ಸೇರಿದಂತೆ ಅನೇಕ ನಾಯಕರು ಹಲವು ಕ್ಷೇತ್ರಗಳಲ್ಲಿ ಪ್ರಚಾರ ಕೈಗೊಂಡಿದ್ದಾರೆ. ಇನ್ನು ಕೊನೆಯ ನಾಲ್ಕು ದಿನಗಳಲ್ಲಿ ಇನ್ನೂಳಿದ ಕ್ಷೇತ್ರಗಳಲ್ಲಿ ರಾಹುಲ್ ಗಾಂಧಿ ಸೇರಿದಂತೆ ಅನೇಕ ನಾಯಕರು ಪ್ರಚಾರ ಸಭೆಗಳಲ್ಲಿ ಪಾಲ್ಗೊಳ್ಳುತ್ತಿದ್ದಾರೆ ಎಂದು ಹೇಳಿದರು.

ಅಮಿತ್ ಶಾ ಅವರು ನಾಳೆ ಬೆಳಗಾವಿ ಜಿಲ್ಲೆಯ ಅನೇಕ ಕ್ಷೇತ್ರಗಳಲ್ಲಿ ರೋಡ್ ಶೋ, ಪ್ರಚಾರ ಸಭೆ ಹಮ್ಮಿಕೊಂಡಿದ್ದಾರೆ. ಕೊನೆ ಗಳಿಗೆಯಲ್ಲಿ ಎಲ್ಲರೂ ತಮ್ಮ ಅಭ್ಯರ್ಥಿಗಳ ಗೆಲುವಿಗೆ ಪ್ರಯತ್ನಿಸುವುದು ಸಾಮಾನ್ಯ. ಬಿಜೆಪಿ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬರಲ್ಲವೆಂದು ತಿಳಿದು ಪ್ರಧಾನಿ ಮೋದಿ ರಾಜ್ಯದಲ್ಲಿ ರೋಡ್ ಶೋ ಮಾಡುತ್ತಿದ್ದಾರೆ. ಕಾರಣ ಬಿಜೆಪಿಯವರು ಎಷ್ಟೇ ಪ್ರಚಾರ, ರೋಡ್ ಶೋ ನಡೆಸಿದರೂ ರಾಜ್ಯದಲ್ಲಿ ಅಧಿಕಾರಕ್ಕೆ ಬರಲ್ಲ. ಅಭಿವೃದ್ಧಿ ಪರ ರಾಜಕೀಯ ಮಾಡುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ, ಅಧಿಕಾರಕ್ಕೆ ತರುತ್ತಾರೆಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುನೀಲ್ ಹಣಮನ್ನವರ್, ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಎಂಜೆ., ಮಹೇಶ ಕಡಪಟ್ಟಿ, ರಾಮಣ್ಣ ಗುಳ್ಳಿ, ಕಿರಣ ರಜಪೂತ್ ಸೇರಿದಂತೆ ಅನೇಕ ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಮುಖಂಡರು ಇದ್ದರು.

# ಬಜರಂಗಬಲಿ ಆಕ್ರೋಶಕ್ಕೆ ಕಾಂಗ್ರೆಸ್ ಸುಟ್ಟು ಹೋಗಲಿದೆ: ಜೋಶಿ



ಹುಬ್ಬಳ್ಳಿ: 'ಹನುಮಂತನಿಂದ ಲಂಕೆ ಹೇಗೆ ಸುಟ್ಟು ಬೂದಿಯಾಗಿದೆಯೋ, ಅದೇ ರೀತಿ ಕಾಂಗ್ರೆಸ್'ನ ರಾಜಕೀಯ ಭವಿಷ್ಯ ಬಜರಂಗಬಲಿಯ ಆಕ್ರೋಶದಲ್ಲಿ ಸುಟ್ಟುಬಲಿಯಾಗಲಿದೆ' ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಕ್ರೋಶ ವ್ಯಕ್ತಪಡಿಸಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಬಜರಂಗದಳ ನಿಷೇಧದ ವಿಷಯದಲ್ಲಿ ಕಾಂಗ್ರೆಸ್ ನಾಯಕರು ಗೊಂದಲದಲ್ಲಿ ಸಿಲುಕಿದ್ದಾರೆ. ಒಂದುಕಡೆ ವೀರಪ್ಪ ಮೊಯ್ಲಿ ಬಜರಂಗದಳ ನಿಷೇಧಿಸುವುದಿಲ್ಲ ಎನ್ನುತ್ತಾರೆ. ಇನ್ನೊಂದೆಡೆ ಸುರ್ಜೇವಾಲ, ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ನಿಷೇಧಿಸುತ್ತೇವೆ ಎನ್ನುತ್ತಿದ್ದಾರೆ.

ಮೊದಲು ತಮ್ಮ ಪಕ್ಷದ ನಿಲುವು ಅವರು ಸ್ಪಷ್ಟಪಡಿಸಲಿ. ಅವರ ಪಕ್ಷದಲ್ಲಿಯೇ ಬಜರಂಗದಳದ ಬಲ ಹಾಗೂ ಬಜರಂಗಬಲಿಯ ಭಯ ಎಷ್ಟಿದೆ ಎನ್ನುವುದು ತಿಳಿಯಬೇಕು' ಎಂದರು.

ಜಗದೀಶ ಶೆಟ್ಟರ್ ಅವರು ಬಜರಂಗದಳ ನಿಷೇಧದ ಕುರಿತು ಅವರ ಪಕ್ಷದ ವೇದಿಕೆಯಲ್ಲಿ ಚರ್ಚಿಸಲಿ.

ಅದನ್ನು ನಿಷೇಧಿಸುವ ಕುರಿತು ಅವರ ನಿಲುವೇನು ಎನ್ನುವುದನ್ನು ಸ್ಪಷ್ಟಪಡಿಸಲಿ' ಎಂದು ಜೋಶಿ ವಿನಂತಿಸಿದರು.


ಗೋವಾದಲ್ಲಿನ ವ್ಯವಸ್ಥೆ ನೋಡಿ ಅಲ್ಲಿಯ ಸರ್ಕಾರ ಶ್ರೀರಾಮಸೇನೆ ನಿಷೇಧಿಸಿದೆ. ಬಜರಂಗದಳ ನಮ್ಮ ಸಂಘಪರಿವಾರದ ಅಂಗಸಂಸ್ಥೆಯಾಗಿದ್ದು, ಯಾವುದೇ ಪ್ರಚೋದನೆ, ಕೋಮುಗಲಭೆ ಸೃಷ್ಟಿಸುವ ಕೆಲಸ ಮಾಡಿಲ್ಲ. ಆದರೆ, ಕಾಂಗ್ರೆಸ್ ಭಯೋತ್ಪಾದನೆ ಕೃತ್ಯದಲ್ಲಿ ತೊಡಗಿರುವ ಪಿಎಫ್ಐ ಜೊತೆ ಬಜರಂಗದಳವನ್ನು ಹೋಲಿಕೆ ಮಾಡುತ್ತಿದೆ.

ಪಿಎಫ್ಐ ಸಂಘಟನೆ ಐಎಸ್ಐ ಜೊತೆ ನಂಟು ಹೊಂದಿದ್ದು, ಹಿಂದೂ ರಾಷ್ಟ್ರವನ್ನು ಇಸ್ಲಾಮಿಕ್ ರಾಷ್ಟ್ರ ಮಾಡುವ ಘೋಷಣೆ ಮಾಡಿದೆ. ಇಂತಹ ದೇಶದ್ರೋಹಿ ಸಂಘಟನೆ ಜೊತೆ ಅಪ್ಪಟ ಹಿಂದೂ ಸಂಘಟನೆ ಹೋಲಿಕೆ ಸರಿಯಲ್ಲ' ಎಂದು ಎಚ್ಚರಿಕೆ ನೀಡಿದರು.

# ಬಿಜೆಪಿ ಲಂಚ ರೇಟ್ ಕಾರ್ಡ್ ಬಿಡುಗಡೆ ಮಾಡಿದ ಕಾಂಗ್ರೆಸ್

ಬೆಂಗಳೂರು: ವಿಧಾಸಭೆ ಚುನಾವಣೆಗೆ ಐದು ದಿನಗಳು ಬಾಕಿಯಿದ್ದು, ಆರೋಪ, ಪ್ರತ್ಯಾರೋಪಗಳು ಕೇಳಿಬರುತ್ತಿವೆ. ಅದರಂತೆ ಇದೀಗ ಎಐಸಿಸಿ ವಕ್ತಾರ ಪವನ್ ಖೇರಾ ಅವರು ಇಂದು ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಬಿಜೆಪಿ ಸರ್ಕಾರದ ಭ್ರಷ್ಟಾಚಾರ ಕುರಿತ ರೇಟ್ ಕಾರ್ಡ್ ಬಿಡುಗಡೆ ಮಾಡಿದ್ದಾರೆ.


ಇನ್ನು ಇದೇ ವೇಳೆ ಮಾತನಾಡಿದ ಅವರು, 'ಬಿಜೆಪಿಯು ರಾಜ್ಯವನ್ನು ರಾಜಕೀಯ ಪ್ರವಾಸದ ಕೇಂದ್ರ ಮಾಡಿಕೊಂಡಿದೆ. ಬಿಜೆಪಿ ಸರ್ಕಾರದ ಭ್ರಷ್ಟಾಚಾರದ ಬಗ್ಗೆ ರಾಜ್ಯದ ಜನರಿಗೆ ಗೊತ್ತಿದೆ. ರಾಜ್ಯದಲ್ಲಿ 40% ಅಲ್ಲ 50% ಕಮಿಷನ್ ನಡೆಯುತ್ತಿದೆ. ರಾಜ್ಯದ ಮುಖ್ಯಮಂತ್ರಿ ಹುದ್ದೆಗೆ 2,500 ಕೋಟಿ




ಕಮಿಷನ್, ಮಂತ್ರಿ ಹುದ್ದೆಗೆ 500 ಕೋಟಿ, ವರ್ಗಾವಣೆಗೆ 5–15 ಕೋಟಿ, ಇಂಜಿನಿಯರ್ ಹುದ್ದೆಗೆ 1ರಿಂದ 5 ಕೋಟಿ ನೀಡಬೇಕು ಎನ್ನುವ ಮೂಲಕ ಬಿಜೆಪಿ ವಿರುದ್ದ ಹರಿಹಾಯ್ದಿದ್ದಾರೆ.

ಇಂದು ಅತ್ಯಂತ ಮಹತ್ವದ ದಿನ, ಬಿಜೆಪಿ ಜನರ ಗಮನ ಬೇರೆ ಕಡೆ ಸೆಳೆಯಲು ಪ್ರಾರಂಭ ಮಾಡಿದೆ. ಆದರೆ, ಕರ್ನಾಟಕದ ಜನ ಮಾತ್ರ ಎಲ್ಲ ವಿಚಾರಗಳನ್ನು ನೆನಪಿನಲ್ಲಿ ಇಟ್ಟುಕೊಂಡಿದ್ದಾರೆ. ಭ್ರಷ್ಟಾಚಾರದ ರೇಟ್ ಕಾರ್ಡ್ ಬಿಡುಗಡೆಯಿಂದ ಜನರಿಗೆ ಬಿಜೆಪಿಯವರ ಬಗ್ಗೆ ಸಿಟ್ಟಿದೆ. ಭ್ರಷ್ಟಾಚಾರದ ರೇಟ್ ಕಾರ್ಡ್ ಬಗ್ಗೆ ಜನರು ಆಕ್ರೋಶಗೊಂಡಿದ್ದಾರೆ. ಇದೇ ಸಿಟ್ಟು ಬಿಜೆಪಿ ವಿರುದ್ದ ಜನರು ಓಟು ಒತ್ತುವಂತೆ ಮಾಡುತ್ತದೆ. ಬಿಜೆಪಿ ಮತ್ತೆ ಬಂದರೆ 40% ಕಮಿಷನ್ ಭ್ರಷ್ಟಾಚಾರ 80% ಆಗುತ್ತದೆ ಎಂಬ ಭಯ ಆತಂಕ ಜನರಿಗೆ ಇದೆ. ಇದೇ ಭಾವನೆಗಳು ಬಿಜೆಪಿಗೆ ಹೊಡೆತ ಕೊಡಲಿದೆ ಎಂದರು.

# ಸಂಚರಿಸುತ್ತಿದ್ದ ಕಾರಿಗೆ ಆಕಸ್ಮಿಕ ಬೆಂಕಿ



ಬೆಳಗಾವಿ: ಸಂಚರಿಸುತ್ತಿದ್ದ ಇಂಡಿಕಾ ಕಾರಿಗೆ ಆಕಸ್ಮಿಕವಾಗಿ ಬೆಂಕಿ ತಗಲಿದ ಪರಿಣಾಮ ಕಾರು ಸಂಪೂರ್ಣವಾಗಿ ಸುಟ್ಟು ಕರಕಲಾದ ಘಟನೆ ಬೆಳಗಾವಿ ತಾಲೂಕಿನ ಭೂತರಾಮನಟ್ಟಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಶುಕ್ರವಾರ ರಾತ್ರಿ 8.45 ಗಂಟೆಗೆ ಸಂಭವಿಸಿದೆ. ಭೂತರಾಮಟ್ಟಿ ಬಳಿಯ ಮೃಗಾಲಯದ ಬಳಿಯ ಪುಣೆ–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಶುಕ್ರವಾರ ರಾತ್ರಿ ಸುಮಾರು 8.45 ಗಂಟೆಗೆ ಈ ಘಟನೆ ನಡೆದಿದೆ. ನಡುರಸ್ತೆಯಲ್ಲಿ ಕಾರಿಗೆ ಬೆಂಕಿ ತಾಗಿದ ಹಿನ್ನೆಲೆಯಲ್ಲಿ ಸಂಚಾರ ನಿಂತು ಹೋಗಿದೆ.ಈ ಘಟನೆಯಿಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ವ್ಯತ್ಯಯ ಉಂಟಾಗಿರುವುದರಿಂದ ಪ್ರಯಾಣಿಕರು ಕೆಲವು ಗಂಟೆಗಳ ಕಾಲ ಪರದಾಡುವಂತಾಗಿದೆ. ಈ ಕಾರಿನಲ್ಲಿ ಎಷ್ಟು ಜನ ಇದ್ದರು ಎಂಬ ಮಾಹಿತಿ ಗೊತ್ತಾಗಿಲ್ಲ.

# ಡಾ.ಕಲಪ್ಪಾ ಉಪ್ಪೆರವರಿಗೆ ಶ್ರದ್ಧಾಂಜಲಿ



ಔರಾದ: ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಸುಭಾಸ್ ಚಂದ್ರ ಭೋಸ್ ಯುವಕ ಸಂಘದ ವತಿಯಿಂದ ತಾಲೂಕಿನ ವೈದ್ಯರಾದ ಡಾ.ಕಲಪ್ಪಾ ಉಪ್ಪೆರವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.ಈ ಸಂದರ್ಭದಲ್ಲಿ ಡಾ ಮುಂಗಳೆ ಮಾತನಾಡಿ ಕಲ್ಲಪ್ಪಾ ಉಪ್ಪೆರವರ ಅಗಲಿಕೆ ನಮ್ಮ ವೈದ್ಯರಿಗೆ ಬಹಳ ನೋವುಂಟು ಮಾಡಿದೆ ರೋಗಿಗಳೊಂದಿಗೆ ಇರುವ ಅವರ ಸಂಭಂದ ಉಪಚರಿಸುವ ನೀತಿ ನಮಗೆ ಮಾದರಿ ಎಂದರು. ಮುಖಂಡ ಶರಣಪ್ಪಾ ಪಾಟೀಲ್ ಮಾತನಾಡಿ ಡಾ.ಕಲ್ಲಪ್ಪಾರವರು ವೈದ್ಯಕಿಯ ರಂಗ ಅಷ್ಟೇ ಅಲ್ಲದೆ ಸಾಮಾಜಿಕ,ಶೈಕ್ಷಣಿಕ, ಧಾರ್ಮಿಕ ಕ್ಷೇತ್ರದಲ್ಲೂ ಅವರ ಕೊಡುಗೆ ಅಪಾರವಾಗಿದೆ ಎಂದರು. ಸಂಘದ ಅಧ್ಯಕ್ಷ ರತ್ನದೀಪ್ ಕಸ್ತೂರೆ ಮಾತನಾಡಿ ಡಾ.ಕಲಪ್ಪಾ ಉಪ್ಪೆರವರು ಔರಾದ ತಾಲೂಕಾ ಅಲ್ಲದೆ ನೆರೆಯ ಮಹಾರಾಷ್ಟ್ರ, ತೆಲಂಗಾಣದಲ್ಲೂ ಚಿರಪರಿಚಿತರಾಗಿದ್ದರು. ಇವರ ನಿಧನದಿಂದ ಜಿಲ್ಲೆಗೆ ಮತ್ತು ತಾಲೂಕಿಗೆ ಅಪಾರ ನಷ್ಟವಾಗಿದೆ ದೇವರು ಇವರ ಆತ್ಮಕ್ಕೆ ಶಾಂತಿ ಕರುಣಿಸಿ ಅವರ ಕುಟುಂಬದವರಿಗೆ ಮತ್ತು ಅಭಿಮಾನಿಗಳಿಗೆ ದುಃಖ ಭರಿಸುವ ಶಕ್ತಿ ನೀಡಲೆಂದು ಪ್ರಾರ್ಥಿಸುತ್ತೇನೆ ಎಂದರು.



## ಮಜ್ಜಿಗೆಗಾಗಿ ಚಿನ್ನ ಕಳೆದುಕೊಂಡ ಮಹಿಳೆಯರು

ನಿಪ್ಪಾಣಿ: ನಿಪ್ಪಾಣಿ ತಾಲೂಕಿನ ಬೋರಂಗಾವ ಗ್ರಾಮದಲ್ಲಿ ಬಿಜೆಪಿ ಅಭ್ಯರ್ಥಿ ಶಶಿಕಲಾ ಜೊಲ್ಲೆ ಪರವಾಗಿ ನಡೆದ ಬಿಜೆಪಿ ಚುನಾವಣಾ ಸಮಾವೇಶದಲ್ಲಿ ಕೇಂದ್ರ ಸಚಿವ ನಿತಿನ್ ಗಡ್ಕರಿ ಆಗಮಿಸಿದ ಹಿನ್ನೆಲೆ ಬೃಹತ್ ಸಮಾವೇಶ ಏರ್ಪಡಿಸಲಾಗಿತ್ತು.

ಜನನಿಬಿಡದಲ್ಲಿ ಮಜ್ಜಿಗೆ ಕುಡಿಯಲು ಹೋದಾಗ ಸುಮಾರು 6 ಮಹಿಳೆಯರ ಮಾಂಗಲ್ಯವನ್ನು ಕಳ್ಳರು ದೋಚಿರುವ ಘಟನೆ ವರದಿಯಾಗಿದೆ.

# 40% ಸರ್ಕಾರ ಕಿತ್ತೊಗೆದೆ ಜನ ಕಾಂಗ್ರೆಸ್ ಜೊತೆ ಕೈಜೊಡಿಸುವುರು: ಪ್ರಣತಿ ಶಿಂಧೆ



ಬೆಳಗಾವಿ: 40% ಸರ್ಕಾರ ಕಿತ್ತೊಗೆದೆ ಜನ ಕಾಂಗ್ರೆಸ್ ಜೊತೆ ಕೈಜೊಡಿಸುವುರು. ಹಾಗಾಗಿ ಈ ಬಾರಿ ಕಾಂಗ್ರೆಸ್ 140 ಅಧಿಕ ಕ್ಷೇತ್ರಗಳಲ್ಲಿ ಗೆಲ್ಲುವ ವಿಶ್ವಾಸ ಹೊಂದಿದೆ ಎಂದು ಸೊಲ್ಲಾಪುರ ಶಾಸಕಿ ಪ್ರಣತಿ ಶಿಂಧೆ ಹೇಳಿದರು

ಇಂದು ಬೆಳಗಾವಿಯ ಕಾಂಗ್ರೆಸ್ ಕಚೇರಿಯಲ್ಲಿ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿ ಕರ್ನಾಟಕ ವಿಧಾನಸಭೆ ಚುನಾವಣೆ ಇಡೀ ದೇಶ ಗಮನಿಸುತ್ತಿದೆ.ಈಗಿನ ಬಿಜೆಪಿ ಬೊಮ್ಮಾಯಿ ಸರ್ಕಾರ ದೇಶದಲ್ಲಿ 40 ಪರ್ಸೆಂಟ್ ಸರ್ಕಾರ ಎಂದು ಖ್ಯಾತಿ ಪಡೆದಿದೆ.

ಅಲ್ಲದೆ ಬೆಲೆ ಏರಿಕೆ ಮಾಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಜನರ ವಿಶ್ವಾಸ ಕಳೆದು ಕೊಂಡಿದೆ ಬಿಜೆಪಿಯ ಅಹಂಕಾರ ಮಾತು ಸಮಾಜದಲ್ಲಿ ಕೋಮುಗಲಭೆ ಸೃಷ್ಟಿಸುತ್ತದೆ. ಇಲ್ಲಿ ಬಂದು ಜನರಿಗೆ ಸುಳ್ಳು ಆಶ್ವಾಸನೆಗಳು ನೀಡುತ್ತಿದ್ದಾರೆ. ಹಾಗಾಗಿ ಇವತ್ತು ದೇಶಕ್ಕಾಗಿ ಪದಕತಂದ ಕ್ರೀಡಾ ಪಟುಗಳಿಗೆ ನ್ಯಾಯದೊರೆಯುತ್ತಿಲ್ಲ ಅವರದೇ ಮುಖಂಡರು ಮಹಿಳೆಯರಿಗೆ ಗೌರವ ನೀಡುತ್ತಿಲ್ಲ ಹೀಗಾಗಿ ಬಿಜೆಪಿ ಪಕ್ಷದ ಮೇಲೆ ಯಾವ ರೀತಿ ನಂಬಿಕೆ ಇಡಬೇಕು ಎಂದು ಕರ್ನಾಟಕ ಜನತೆ ನಿಶ್ಚಯ ಮಾಡಿದ್ದಾರೆ ಈ ಬಾರಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರಲು ಜನರುತೀರ್ಮಾನ ಮಾಡಿದ್ದಾರೆ ಎಂದು ಹೇಳಿದರು.ಸುದ್ದಿಗೋಷ್ಠಿಯಲ್ಲಿ ಜಯರಾಮ್ ರಮೇಶ, ರೋಹನ್ ಗುಪ್ತ ಅಲೋಕ ಶರ್ಮಾ ಪ್ರಣತಿ ಶಿಂದೆ ಉಪಸ್ಥಿತರಿದ್ದರು.

# ಹುಕ್ಕೇರಿ ಪುರಸಭೆಯಲ್ಲಿ ಅನೈತಿಕವಾಗಿ ಆಪರೇಷನ್ ಕಮಲ: ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿಜಯ ರವದಿ ಆರೋಪ



ಹುಕ್ಕೇರಿ: ಸ್ಥಳೀಯ ಪುರಸಭೆಯಲ್ಲಿ ಸ್ಪಷ್ಟ ಬಹುಮತ ಗಳಿಸಿದ ಕಾಂಗ್ರೆಸ್ ಸದಸ್ಯರನ್ನು ಅನೈತಿಕವಾಗಿ 'ಆಪರೇಷನ್ ಕಮಲ' ಮೂಲಕ ಬಿಜೆಪಿಗೆ ಸೇರ್ಪಡೆಗೊಳಿಸಲಾಗಿದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿಜಯ ರವದಿ ಆರೋಪಿಸಿದರು.

ಪಟ್ಟಣದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹುಕ್ಕೇರಿ ಪುರಸಭೆಯ ಕಾಂಗ್ರೆಸ್ ಸದಸ್ಯರನ್ನು ಹೈಜಾಕ್ ಮಾಡಲಾಗಿದೆ. ಬಿಜೆಪಿ ಜನಾದೇಶವನ್ನು ದಿಕ್ಕರಿಸಿ ಪುರಸಭೆ ವಶಪಡಿಸಿಕೊಂಡಿದ್ದು ವಾಮಮಾರ್ಗದಿಂದ ಅಧಿಕಾರ ಹಿಡಿದಿದೆ ಎಂದು ಹರಿಹಾಯ್ದರು. ಪುರಸಭೆಯ ಒಟ್ಟು 23 ಸದಸ್ಯರ ಪೈಕಿ 12 ಜನ ಕಾಂಗ್ರೆಸ್, 8 ಜನ ಬಿಜೆಪಿ ಮತ್ತು 3 ಜನ ಪಕ್ಷೇತರರಿದ್ದರು. ಓರ್ವ ಪಕ್ಷೇತರನ ಬೆಂಬಲಿದಿಂದ ಕಾಂಗ್ರೆಸ್‌ಗೆ ಸರಳ ಬಹುಮತವಿತ್ತು. ಆದರೆ, ಅಧಿಕಾರ ಕೈ ತಪ್ಪುವ, ಸೋಲಿನ ಹತಾಶೆಯಲ್ಲಿದ್ದ ಬಿಜೆಪಿ, ಆಸೆ–ಆಮಿಷವೊಡ್ಡಿ ಕಾಂಗ್ರೆಸ್ ಸದಸ್ಯರನ್ನು ಸೆಳೆದುಕೊಂಡಿದೆ. ಇದು ಅನೈತಿಕ ಆಪರೇಷನ್ ಕಮಲ ಎಂದು ರವದಿ ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ತೊರೆದು ಬಿಜೆಪಿಗೆ ಪಕ್ಷಾಂತರಗೊಂಡ ಸದಸ್ಯರನ್ನು ಜನ ಎಂದಿಗೂ ಕ್ಷಮಿಸುವುದಿಲ್ಲ. ಅವರಿಗೆ ತಕ್ಕ ಪಾಠ ಕಲಿಸಲು ಸಿದ್ಧರಾಗಿದ್ದಾರೆ. ಪಕ್ಷಾಂತರಿ ಸದಸ್ಯರ ಸದಸ್ಯತ್ವ ರದ್ದುಗೊಳಿಸುವಂತೆ ಚುನಾವಣಾ ಆಯೋಗ ಮತ್ತು ಪಕ್ಷಕ್ಕೆ ಪತ್ರ ಬರೆಯಲಾಗುವುದು. ಕಾಂಗ್ರೆಸ್ ಪಕ್ಷದ ಚಿನ್ಹೆಯಡಿ ಆಯ್ಕೆಯಾದವರು ನೈತಿಕತೆ ಇದ್ದರೆ ಕೂಡಲೇ ರಾಜೀನಾಮೆ ನೀಡಬೇಕು ಎಂದು ಅವರು ಆಗ್ರಹಿಸಿದರು. ಪ್ರಸಕ್ತ ಚುನಾವಣೆಯಲ್ಲಿ ಕಾಂಗ್ರೆಸ್ ಪರವಾದ ಗಾಳಿ ಬೀಸುತ್ತಿದ್ದು ಕ್ಷೇತ್ರದ ಜನ ಬದಲಾವಣೆ ಬಯಸಿದ್ದಾರೆ. ಕಾರ್ಯಕರ್ತರು ಮನೆ ಮನೆಗೆ ಪ್ರಚಾರ ನಡೆಸಿದ್ದು ಅಭ್ಯರ್ಥಿ ಎ.ಬಿ.ಪಾಟೀಲರು ದಾಖಲೆಯ ಮತಗಳ ಅಂತರದಿಂದ ಗೆಲುವು ಸಾಧಿಸುವ ವಿಶ್ವಾಸವಿದೆ ಎಂದು ಅವರು ಹೇಳಿದರು.

# ಉಚಿತ ಕೊಡುಗೆಗಳು ಅನುಚಿತವಲ್ಲ, ಆದರೆ ಅರ್ಹರನ್ನು ತಲುಪುತ್ತಿಲ್ಲ









ಉಚಿತ ಕೊಡುಗೆಗಳು ಭಾರತದ ಚುನಾವಣಾ ರಾಜಕೀಯದಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ.

ಸರಕಾರದ ಬೊಕ್ಕಸಕ್ಕೆ ಅತಿಯಾದ ಹೊರೆ ಬೀಳುತ್ತದೆ ಎಂದು ತಿಳಿದಿದ್ದರೂ ಮತದಾರರನ್ನು ಓಲೈಸಲು ಉಚಿತ ಕೊಡುಗೆಗಳನ್ನು ಘೋಷಿಸಲು ರಾಜಕೀಯ ಪಕ್ಷಗಳು ಪೈಪೋಟಿ ನಡೆಸುತ್ತವೆ..ಪ್ರತಿ ಚುನಾವಣೆ ಎದುರಾದಾಗಲೆಲ್ಲಾ ರಾಜಕೀಯ ಪಕ್ಷಗಳು ಭರಪೂರ ಉಚಿತ ಕೊಡುಗೆಗಳನ್ನು ಘೋಷಿಸುತ್ತವೆ. ಆರೋಗ್ಯ, ಶಿಕ್ಷಣ, ಉಚಿತ ವಿದ್ಯುತ್, ನೀರು, ಬೈಸಿಕಲ್, ಸ್ಕೂಟರ್, ಸೀರೆ, ಮತಗಳನ್ನು ಸೆಳೆಯಬಲ್ಲ ಶಕ್ತಿ ಇರುವ ಎಲ್ಲ ವಸ್ತುಗಳನ್ನೂ ಉಚಿತಾಗಿ ನೀಡುವ ಘೋಷಣೆ ಮಾಡುತ್ತಾರೆ. ಕರ್ನಾಟಕದಲ್ಲಿ ಈ ವಾರದಲ್ಲಿ ಚುನಾವಣೆ ನಡೆಯಲಿದ್ದು ಕಾಂಗ್ರೆಸ್, ಬಿಜೆಪಿ ಮತ್ತು ಜೆಡಿಎಸ್ ಉಚಿತ ಕೊಡುಗೆಗಳ ಮಹಾಪೂರವನ್ನೇ ಹರಿಸಿವೆ.

ಈ ಕೊಡುಗೆಗಳನ್ನು ನೀಡಲು ರಾಜ್ಯದ ಬೊಕ್ಕಸಕ್ಕೆ ಶಕ್ತಿ ಇದೆಯೇ ಎಂದು ಯಾವೊಂದು ಪಕ್ಷವೂ ಯೋಚಿಸುವುದಿಲ್ಲ. ಆರಂಭದಲ್ಲಿ ಜೆಡಿಎಸ್ ಪಂಚರತ್ನ ಯಾತ್ರೆ ನಡೆಸುವಾಗಲೇ ತನ್ನ ಪಂಚ ಯೋಜನೆಗಳೂ ಏನೆಂದು ಹೇಳಿತ್ತು. ನಂತರ ಕಾಂಗ್ರೆಸ್ ತನ್ನ ಬುಟ್ಟಿಯಿಂದ ಒಂದೊಂದಾಗಿ ಉಚಿತ ಕೊಡುಗೆಗಳ ಘೋಷಣೆ ಮಾಡುತ್ತಾ ಹೋಯಿತು. ಮೇಲಾಗಿ ಈ ಉಚಿತ ಕೊಡುಗೆಗಳು ಸಾರ್ವಜನಿಕರ ಗಮನ ಸೆಳೆಯುವುದರ ಜೊತೆಗೆ ಅಚ್ಚರಿ ಮೂಡಿಸಿದವು. ಕಾಂಗ್ರೆಸ್ ಮತ ಹಾಕಿದರೆ ಇಷ್ಟೊಂದು ಉಚಿತ ಕೊಡುಗೆಗಳು ಸಿಗುತ್ತವೆಯೇ ಎಂದು ಜನಸಾಮಾನ್ಯರು ಮೂಗಿನ ಮೇಲೆ ಬೆರಳಿಟ್ಟುಕೊಳ್ಳುವಂತೆ ಮಾಡಿದವು. ಈ ಅನಿರೀಕ್ಷಿತ ಕಾಂಗ್ರೆಸ್ ಘೋಷಣೆ ಆಡಳಿತಾರೂಢ ಬಿಜೆಪಿಯನ್ನು ನಿದ್ದೆಗೆಡಿಸಿತು. ಪ್ರಧಾನಿ ಮೋದಿ ಆದಿಯಾಗಿ ಎಲ್ಲರೂ ಭಾರತ, ಪಾಕಿಸ್ತಾನ ಅಥವಾ ಶ್ರೀಲಂಕಾದಂತೆ ದಿವಾಳಿಯಾಗುತ್ತದೆ ಎಂದು ಮುಗಿಬೀಳುತ್ತಾ ನಾವು ಉಚಿತ ಕೊಡುಗೆಗಳನ್ನು ನೀಡುವುದಿಲ್ಲ. ಕೊಂಡುಕೊಳ್ಳುವಷ್ಟು ಶಕ್ತಿ ನೀಡುವ ಉದ್ಯೋಗಗಳನ್ನು ಸೃಷ್ಟಿ ಮಾಡುತ್ತೇವೆ ಎಂದು ಸಮರ್ಥನೆ ನೀಡುತ್ತಾ ಬರುತ್ತದೆಯಾದರೂ ಆ ಪಕ್ಷಕ್ಕೆ ಉಚಿತ ಕೊಡುಗೆಗಳನ್ನು ಘೋಷಿಸದೆ ಅನ್ಯ ಮಾರ್ಗವೇ ಇರಲಿಲ್ಲ.

ಉಚಿತ ಎಂದ ಮಾತ್ರಕ್ಕೆ ರಾಜಕೀಯ ಪಕ್ಷವೊಂದು ತನ್ನ ಪಕ್ಷದ ಕಚೇರಿಯಿಂದ ತಂದುಕೊಡುತ್ತದೆ ಎಂದೋ ಅಥವಾ ರಾಜಕಾರಣಿಯೊಬ್ಬ ತನ್ನ ಖಜಾನೆಯಿಂದಲೋ ತಂದುಕೊಡುವುದಿಲ್ಲ. ಉಚಿತವಾದರೂ ಅದು ಸಾರ್ವಜನಿಕರ ತೆರಿಗೆ ಹಣವಾಗಿರುತ್ತದೆ ಎನ್ನುವುದನ್ನು ಮತದಾರ ಮರೆಯಬಾರದು. ಯಾವುದೇ ಪಕ್ಷ ತನ್ನ ಪ್ರಣಾಳಿಕೆಯನ್ನು ಗಂಭೀರವಾಗಿ ಪರಿಗಣಿಸಬೇಕು. ಇದಕ್ಕೆ ಸಾಂವಿಧಾನಿಕ ಮೌಲ್ಯವಿರುತ್ತದೆ ಮತ್ತು ಉತ್ತರದಾಯಿತ್ವವೂ ಇರುತ್ತದೆ. ಆದರೆ ಇಂದು ಯಾರೊಬ್ಬರೂ ಪ್ರಣಾಳಿಕೆಯನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ. ಅದೊಂದು ಕರಪತ್ರವಾಗಿ ಹರಿದಾಡುತ್ತಿರುತ್ತದೆ. ಮತದಾನ ಮುಗಿದ ಮೇಲೆ ಕಿಮ್ಮತ್ತು ಕಳೆದುಕೊಳ್ಳುತ್ತದೆ.

### ಉಚಿತ ಎಂದರೇನು?

ಸಾರ್ವಜನಿಕರು ತಮಗೆ ತಾವೇ ಹೊಂದಿಸಿಕೊಳ್ಳಲಾಗದ ಆರೋಗ್ಯ, ಶಿಕ್ಷಣ, ನೀರು ಸಂಪರ್ಕ, ವಿದ್ಯುತ್ ಸಾರಿಗೆ ಮೊದಲಾದ ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಸರಕಾರದ ಕರ್ತವ್ಯ. ಇವುಗಳನ್ನು ನಿರ್ವಹಿಸಲೆಂದೇ ನಾವು ಸರಕಾರಗಳನ್ನು ಆಯ್ಕೆ.ಮಾಡಿಕೊಳ್ಳುತ್ತೇವೆ. ಎಷ್ಟರ ಮಟ್ಟಿಗೆ ಉಚಿತವಾಗಿ ನೀಡುತ್ತೇವೆ ಎನ್ನುವುದು ಅಯಾ ರಾಜ್ಯದ ಆದಾಯವನ್ನು ಅವಲಂಬಿಸಿರುತ್ತದೆ. ಒಟ್ಟು ಬಜೆಟ್‌ನಲ್ಲಿ ವೆಚ್ಚವಾಗಿ ಇನ್ನೂ ಹಣ ಉಳಿದಿದ್ದರೆ ನಿಶ್ಚಿತವಾಗಿ ಗರಿಷ್ಠ ಮಟ್ಟದಲ್ಲಿ ಉಚಿತವಾಗಿ ಕೊಡಲು ಅವಕಾಶವಿರುತ್ತದೆ. ದುರಂತವೆಂದರೆ ದೇಶದ ಎಲ್ಲ ರಾಜ್ಯಗಳೂ ಸಾಲದ ಸುಳಿಯಲ್ಲಿವೆ. ಇಂತಹ ಸನ್ನಿವೇಶದಲ್ಲಿ ಉಚಿತವಾಗಿ ಕೊಡುತ್ತಾ ಹೋದರೆ ರಾಜ್ಯಗಳ ಗತಿ ಏನು ಎಂದು ಆರ್ಥಿಕ ತಜ್ಞರು ಆತಂಕ ವ್ಯಕ್ತಪಡಿಸುತ್ತಾರೆ.

### ಎಲ್ಲಿಂದ ಆರಂಭ?

80ರ ದಶಕದಲ್ಲಿ ಈ ಉಚಿತ ಕೊಡುಗೆಗಳ ಆರಂಭವಾಗುತ್ತದೆ. ಮೊತ್ತ ಮೊದಲ ಬಾರಿ ಅಂದಿನ ತಮಿಳುನಾಡು ಸರಕಾರ ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಆರಂಭಿಸುತ್ತದೆ. ಈ ಊಟಕ್ಕಾಗಿಯೇ ಲಕ್ಷಾಂತರ ಮಕ್ಕಳು ಶಾಲೆಗೆ ಬರುತ್ತಿದ್ದರು ಮತ್ತು ಇದರಿಂದ ಸಾಕ್ಷರತಾ ಪ್ರಮಾಣ ಹೆಚ್ಚುತ್ತಾ ಹೋಯಿತು. ನಂತರ ರಚನೆಯಾದ ಜಯಲಲಿತಾ ನೇತೃತ್ವದ ಸರಕಾರ ಎಗ್ಗಿಲ್ಲದೆ ಉಚಿತಗಳ ಸುರಿಮಳೆಯನ್ನೇ ಸುರಿಸುತ್ತದೆ. ಸೀರೆ, ಕುಕ್ಕರ್, ವಾಷಿಂಗ್ ಮೆಷಿನ್, ಟಿವಿ ಹೀಗೆ ಮತ ಸೆಳೆಯುವ ಎಲ್ಲ ವಸ್ತುಗಳನ್ನೂ ಉಚಿತವಾಗಿ ನೀಡಲು. ಆರಂಭಿಸುತ್ತಾರೆ. ಅತ್ತ ಉತ್ತರದ ಪಂಜಾಬ್‌ನಲ್ಲಿ ಅಕಾಲಿಗಳ ಸರಕಾರವೂ ಇದೇ ಪರಂಪರೆಯನ್ನು ಮುಂದುವರಿಸುತ್ತದೆ. ಈ ಮೂಲಕ ಚುನಾವಣೆಗಳಲ್ಲಿ ಅನಯಾಸವಾಗಿ ಗೆಲುವು ಸಾಧಿಸುತ್ತಾ ಹೋಗುತ್ತದೆ. 2015ರಲ್ಲಿ ದೆಹಲಿಯಲ್ಲಿ ಎಎಪಿ ಸರಕಾರ ಉಚಿತ ವಿದ್ಯುತ್, ನೀರು ಮತ್ತು ಬಸ್‌ಗಳಲ್ಲಿ ಉಚಿತ ಪ್ರಯಾಣದ ಘೋಷಣೆಯನ್ನು ಮಾಡುತ್ತದೆ.

### ಉಚಿತದ ಮೊರೆಹೋಗುವುದೇಕೆ?

ಸರಕಾರದ ಸಾಧನೆ ಕಳಪೆಯಾದಾಗ ಮತದಾರರ ಗಮನವನ್ನು ಬೇರೆಡೆ ಸೆಳೆಯಲು ಆಡಳಿತ ಪಕ್ಷ ಉಚಿತ ಘೋಷಣೆಗಳ ಮೊರೆ ಹೋಗುತ್ತದೆ. ಮುಂದಿನ ಚುನಾವಣೆಗೆ ನೀಡುವ ಜನಪ್ರಿಯ ಕಾರ್ಯಕ್ರಮಗಳನ್ನು ಅಧಿಕಾರದಲ್ಲಿದ್ದಾಗಲೇ ಏಕೆ ಜಾರಿಗೊಳಿಸಲಿಲ್ಲ ಎಂಬ ಪ್ರಶ್ನೆಗೆ ಇವರ ಬಳಿ ಉತ್ತರವಿರುವುದಿಲ್ಲ. ಪ್ರತಿಪಕ್ಷಗಳ ಸ್ಥಿತಿಯೂ ಇದಕ್ಕಿಂತ ಭಿನ್ನವಾಗಿರುವದಿಲ್ಲ..ಏನನ್ನು ನೀಡುತ್ತಿದ್ದೇವೆ. ಯಾರಿಗೆ ನೀಡುತ್ತಿದ್ದೇವೆ ಎಂಬ ವಿವೇಚನೆ ಇಲ್ಲದೆ ಘೋಷಣೆ. ಮಾಡಿಬಿಡುತ್ತವೆ. ಆರ್ಥಿಕ ದುಷ್ಪರಿಣಾಮಗಳನ್ನಂತೂ ಕಿಂಚಿತ್ತೂ ಚಿಂತಿಸುವುದಿಲ್ಲ. ಈ ನಿಟ್ಟಿನಲ್ಲಿ ವಕೀಲರೊಬ್ಬರು ಸುಪ್ರೀಂಕೋರ್ಟ್‌ನಲ್ಲಿ ದಾವೆ ಹೂಡಿದ್ದು, ವಿಚಾರಣೆಯ ಸಂದರ್ಭದಲ್ಲಿ ಘನ ನ್ಯಾಯಾಲಯವು, ಉಚಿತ ಕೊಡುಗೆಗಳು ಮತ್ತು ಭರವಸೆಗಳು ದೇಶದ ಆರ್ಥಿಕ ದೃಷ್ಟಿಯಿಂದ ಗಂಭೀರವಾದ ಸಂಗತಿ ಎಂದು ಕಳವಳ ವ್ಯಕ್ತಪಡಿಸಿದೆ. ರಾಜಕೀಯ ಪಕ್ಷ ಈ ಉಚಿತ ಕೊಡುಗೆಗಳಿಂದ ಆರ್ಥಿಕತೆಗೆ ಪೆಟ್ಟು ಬೀಳುವುದು ಸಹಜ. ಆದರೆ ಈ ರೀತಿ ಮಾಡದಂತೆ ತಾನೇನೂ ಮಾಡಲು ಆಗುವುದಿಲ್ಲ. ಶಾಸಕಾಂಗ ವಿಷಯಗಳಲ್ಲಿ ನ್ಯಾಯಾಲಯ ಮೂಗು ತೂರಿಸಲು ಆಗದು ಎಂದು ಹೇಳಿದೆ. ಉಚಿತ ಕೊಡುಗೆಗಳ ಘೋಷಣೆ ಮಾಡದಂತೆ ತಡೆಯಾಜ್ಞೆ ನೀಡಲೂ ಆಗದು ಎಂದು ಹೇಳಿದೆ. ಆದರೆ ಈ ನಿಟ್ಟಿನಲ್ಲಿ ಚುನಾವಣ ಆಯೋಗ ಒಂದು ನಿರ್ಧಾರ ಕೈಗೊಳ್ಳಬಹುದು ಎಂದೂ ತಿಳಿಸಿದೆ.

ಅದರಂತೆ ಆಯೋಗವು ರಾಜಕೀಯ ಪಕ್ಷಗಳು ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಣೆ ಮಾಡುವಾಗ ಉಚಿತ ಕೊಡುಗೆಗಳನ್ನು ನಿರ್ಬಂಧಿಸಲು ಮಾದರಿ ನೀತಿ ಸಂಹಿತೆಗೆ ಮಾರ್ಪಾಟು ಮಾಡಲು ಸಲಹೆ ಕೇಳಿರುತ್ತದೆ. ಈ ಸಲಹೆಯನ್ನು ರಾಜಕೀಯ ಪಕ್ಷಗಳು ತೀವ್ರವಾಗಿ ವಿರೋಧ ವ್ಯಕ್ತಪಡಿಸಿವೆ. ಚುನಾವಣಾ ಆಯೋಗವು ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳನ್ನು ನಡೆಸಲು ಸ್ವತಂತ್ರವಾಗಿದೆಯೇ ಹೊರತು ರಾಜಕೀಯ ಪಕ್ಷಗಳ ನೀತಿ ನಿರೂಪಣೆಗಳನ್ನು ಅಲ್ಲ ಎಂದು ವಿರೋಧ ವ್ಯಕ್ತಪಡಿಸಿವೆ.

## ಉಚಿತ ಕೊಡುಗೆ ಸಾಗಿ ಬಂದ ಹಾದಿ

@ 2006 ರಲ್ಲಿ ತಮಿಳುನಾಡು ಸರಕಾರ ಉಚಿತವಾಗಿ ಕಲರ್ ಟಿವಿಗಳನ್ನು ನೀಡುವುದನ್ನು ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಕೆ. ಚುನಾವಣೆಗೆ ಮುನ್ನ ಭರವಸೆ ನೀಡಿದ್ದು ಟಿವಿ ಸೆಟ್‌ಗಳನ್ನು ವಿತರಿಸುವುದಾಗಿ ತಮಿಳುನಾಡು ಸರಕಾರ ಸ್ಪಷ್ಟನೆ

@ 2007: ಅರ್ಜಿ ವಜಾಗೊಳಿಸಿದ ಹೈಕೋರ್ಟ್

@ 2013: ಉಚಿತ ಕೊಡುಗೆಗಳ ಘೋಷಣೆಯು ಮುಕ್ತ ಮತ್ತು ನ್ಯಾಯ ಸಮ್ಮತ ಚುನಾವಣೆ ನಡೆಯುವುದನ್ನು ಅಲುಗಾಡಿಸಲಿದೆ ಎಂದು ಅಭಿಪ್ರಾಯಪಟ್ಟ ಸುಪ್ರೀಂಕೋರ್ಟ್ ಮಾರ್ಗಸೂಚಿಗಳನ್ನು ರಚಿಸುವಂತೆ ಚುನಾವಣಾ ಆಯೋಗಕ್ಕೆ ಸೂಚನೆ

@2014: ಮಾದರಿ ನಿತಿ ಸಂಹಿತೆಯಲ್ಲಿ ಪ್ರಣಾಳಿಕೆಗಳನ್ನು ನಿಯಂತ್ರಿಸಲು ಹೊಸ ಅಧ್ಯಾಯ ಸೇರ್ಪಡೆ ಮಾಡಿದ ಚುನಾವಣಾ ಆಯೋಗ

@ 2022ಜನವರಿ: ಉಚಿತ ಕೊಡುಗೆಗಳನ್ನು ಘೋಷಿಸುವುದನ್ನು ನಿರ್ಬಂದಿಸುವಂತೆ ವಕೀಲ ಅಶ್ವಿನ್ ಉಪಾಧ್ಯಾಯ ಎಂಬುವರು ಸುಪ್ರೀಂ ಕೋರ್ಟ್ ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆ

@ 2022,ಜುಲೈ: ಉಚಿತ ಕೊಡುಗೆಗಳನ್ನು ರೆವ್ಡಿ ಸಂಸ್ಕೃತಿ ಎಂದು ಕರೆದು ವಿರೋಧ ವ್ಯಕ್ತಪಡಿಸಿದ ಪ್ರಧಾನಿ ಮೋದಿ

@ 2022, ಆಗಸ್ಟ್ : ಅಂದಿನ ಮುಖ್ಯ ನ್ಯಾಯಮೂರ್ತಿ ಎನ್.ವೈ.ರಮಣ ಅವರು ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ಅವರ ನೇತೃತ್ವದಲ್ಲಿ ಮೂವರು ನ್ಯಾಯಮೂರ್ತಿಗಳ ಪೀಠ ರಚನೆ.

### ಉಚಿತಗಳು ತರವೇ

ರಾಜಕೀಯ ಪಕ್ಷಗಳು ಪ್ರಕಟಿಸುವ ಆಮಿಷಗಳು ಸಾಧುವೇ? ಅವಶ್ಯಕತೆ ಇರುತ್ತವೆಯೇ?

ಅನಿವಾರ್ಯವೇ ಎಂದು ಯಾವುದೇ ಪಕ್ಷ ಚಿಂತಿಸುವುದಿಲ್ಲ. ಉಚಿತ ಕೊಡುಗೆಗಳು ತಮ್ಮ ಪಕ್ಷಕ್ಕೆ ಪ್ರಾಣವಾಯು ಎಂದು ಮಾತ್ರ ಭಾವಿಸಿವೆ. ಚುನಾವಣೆಗೂ ಮುನ್ನ ಘೋಷಿಸುವ ಪ್ರಣಾಳಿಕೆಗೂ ಅನುಷ್ಠಾನಕ್ಕೂ ಅಜಗಜಾಂತರ ವ್ಯತಾಸಗಳಿರುತ್ತವೆ. ಒಂದು ವೇಳೆ ಜಾರಿ ಮಾಡಿದರೆ ರಾಜ್ಯದ ಆರ್ಥಿಕ ಪರಿಸ್ಥಿತಿಗೆ ಹೊಡೆತ ಬೀಳುವ ಸಂಭವವಿರುತ್ತದೆ. ಒಂದು ರಾಜ್ಯದ ಆರ್ಥಿಕ ಪರಿಸ್ಥಿತಿ ಡೋಲಾಯಮಾನವಾಗಿರುತ್ತದೆ.

ಆರ್ಥಿಕ ಪ್ರಗತಿ, ಉದ್ಯೋಗ ಸೃಷ್ಟಿ, ಶಿಕ್ಷಣ, ಆರೋಗ್ಯ ಮತ್ತು ಮೂಲಭೂತ ಸೌಕರ್ಯಗಳಂತಹ ವಿಷಯಗಳನ್ನು ಕುರಿತು ಯಾರೂ ಆಸ್ಥೆ ವಹಿಸುವುದಿಲ್ಲ. ಆ ಕ್ಷಣಕ್ಕೆ ಮತದಾರರನ್ನು ಸಮ್ಮೋಹನಗೊಳಿಸುವಂತಹ ಭರಪೂರ ಜನಪ್ರಿಯ ಉಚಿತ ಘೊಷಣೆಗಳನ್ನು ಪ್ರಕಟಿಸುತ್ತಾರೆ. ಅಧಿಕಾರವನ್ನು ಉಳಿಸಿಕೊಳ್ಳುವುದು ಅಥವಾ ಗಳಿಸುವುದು ಮಾತ್ರ ರಾಜಕೀಯ ಪಕ್ಷಗಳ ಉದ್ದೇಶವಾಗಿರುತ್ತದೆ.


ಆರ್ಥಿಕ ತಜ್ಞರ ಪ್ರಕಾರ ಆಹಾರ ಉತ್ಪಾದನೆ, ಉದ್ಯೋಗ ಸೃಷ್ಟಿಗೆ ಬೇಕಾದ ನೆರವು, ಶಿಕ್ಷಣ, ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳು, ಬಡವರಿಗೆ ಮತ್ತು ದುರ್ಬಲ ವರ್ಗದ ಜನರಿಗೆ ಉಚಿತ ವೈದ್ಯಕೀಯ ನೆರವು, ಉಚಿತ ಆಹಾರ ನೀಡುವುದನ್ನು ಹೊರತುಪಡಿಸಿ ಉಳಿದೆಲ್ಲವೂ ಉಚಿತ ಕೊಡುಗೆಗಳ ವ್ಯಾಪ್ತಿಗೆ ಬರುತ್ತದೆ ಎಂದು ಹೇಳುತ್ತಾರೆ..ಉಚಿತ ವಿದ್ಯುತ್, ಉಚಿತ ಮೊಬೈಲ್, ಉಚಿತ ಲ್ಯಾಪ್ ಟಾಪ್ ಕೂಡ ಉಚಿತ ಕೊಡುಗೆಗಳ ವ್ಯಾಪ್ತಿಗೆ ಒಳಪಡುತ್ತದೆ. ಈ ಉಚಿತ ಕೊಡುಗೆಗಳ ಕಾರಣದಿಂದಾಗಿ ವಿತ್ತೀಯ ಕೊರತೆ ಉಂಟಾಗುತ್ತದೆ. ಈ ಉಚಿತ ಕೊಡುಗೆಗಳ ಭಾರಕ್ಕೆ ಹಲವಾರು ರಾಜ್ಯಗಳ ಆರ್ಥಿಕ ವ್ಯವಸ್ಥೆಯೇ ಬುಡಮೇಲಾಗಿರುವ ಉದಾಹರಣೆಗಳುಂಟು. ಜಾರ್ಖಂಡ್, ಕೇರಳ, ಒಡಿಶಾ ತೆಲಂಗಾಣ ಮತ್ತು ಉತ್ತರ ಪ್ರದೇಶ ರಾಜ್ಯಗಳು ಸಬ್ಸಿಡಿ ಭಾರಕ್ಕೆ ನಲುಗಿವೆ. ಉಚಿತ ವಿದ್ಯುತ್, ಉಚಿತ ನೀರು,. ಉಚಿತ ಸಾರ್ವಜನಿಕ ಸಾರಿಗೆ ಸಾಲ ಮನ್ನಾವನ್ನು ಉಚಿತ ಕೊಡುಗೆಗಳು ಎಂದು ಆರ್ಬಿಐ ವಿಂಗಡಿಸಿದೆ. ಈಗಾಗಲೇ ಬಹುತೇಕ ರಾಜ್ಯಗಳ ಒಟ್ಟು ಬಜೆಟ್ ಗಾತ್ರದಲ್ಲಿ ಹೆಚ್ಚಿನ ಪಾಲನ್ನು ಸಂಬಳ ಮತ್ತು ಪಿಂಚಣಿ ಕಬಳಿಸುತ್ತಿವೆ. ಒಂದು ವೇಳೆ ಉಚಿತ ಕೊಡುಗೆಗಳ ಒಟ್ಟು ಮೊತ್ತ ಬಜೆಟ್‌ನ ಶೇ2ರಷ್ಟನ್ನು ದಾಟಿದರೂ ಅಂತಹ ರಾಜ್ಯಗಳು ಸಾಲದ ಸುಳಿಗೆ ಸಿಲುಕುತ್ತವೆ ಎಂದು ಆರ್ಥಿಕ ತಜ್ಞರು ಎಚ್ಚರಿಕೆ ನೀಡುತ್ತಾರೆ. ಉಚಿತ ಕೊಡುಗೆಗಳನ್ನು ನೀಡುತ್ತಲೇ ಅತಿ ಹೆಚ್ಚು ಸಾಲದ ಸುಳಿಗೆ ಪಂಜಾಬ್, ರಾಜಸ್ತಾನ, ಆಂಧ್ರ ಪ್ರದೇಶ, ಜಾರ್ಖಂಡ್, ಕೇರಳ, ಮಧ್ಯ ಪ್ರದೇಶ, ಉತ್ತರ ಪ್ರದೇಶ, ಹರಿಯಾಣ ಸಿಲುಕಿವೆ.

ಬಡವರು, ಗ್ರಾಮೀಣ ಭಾಗದ ಜನರು, ರೈತರಿಗೆ ಏನಾದರೂ ಸವಲತ್ತುಗಳನ್ನು ಒದಗಿಸಿದರೆ ಉಚಿತ ಕೊಡುಗೆ ಎಂದು ಲೇವಡಿ ಮಾಡಲಾಗುತ್ತದೆ. ಆದರೆ ನಿಜಕೂ ಅವರಿಗೆ ಈ ಉಚಿತ ಕೊಡುಗೆಯ ಅನಿವಾರ್ಯತೆ ಇರುತ್ತದೆ ಎನ್ನುವುದನ್ನು ಮರೆಯಬಾರದು. ನಮ್ಮ ತೆರಿಗೆ ಹಣ ಪೋಲಾಗುತ್ತಿದೆ ಎಂದು ಶ್ರೀಮಂತ ವರ್ಗ ಅಸಹನೆ ತೋರುತ್ತದೆ. ಕಾರ್ಪೋರೇಟ್ ವಲಯಕ್ಕೆ ಕಡಿಮೆ ಬಡ್ಡಿ ದರದಲ್ಲಿ ಅಪಾರ ಪ್ರಮಾಣದ ಸಾಲ ನೀಡುವುದು.

ತೆರಿಗೆ ರಜಾ ದಿನಗಳನ್ನು ಘೋಷಣೆ ಮಾಡುವುದು, ಉಚಿತ ಅಥವಾ ಕಡಿಮೆ ದರದಲ್ಲಿ ಭೂಮಿ ಒದಗಿಸುವುದನ್ನು ಈ ಶ್ರೀಮಂತ ವರ್ಗ ಯಾವತ್ತೂ ಪ್ರಶ್ನಿಸುವುದಿಲ್ಲ. ಇದಕ್ಕೆಲ್ಲಾ ಎಲ್ಲಿಂದ ಹಣ ಬರುತ್ತದೆ ಎಂದು ಚಿಂತಿಸುವುದೂ ಇಲ್ಲ.

ಒಟ್ಟಾರೆ ಬಡವರು ಮತ್ತು ಅರ್ಹರಿಗೆ ಒದಗಿಸುವ ಯಾವ ಸೌಲಭ್ಯವೂ ಅನುಚಿತವಲ್ಲ. ಅಂತಿಮವೂ ಅಲ್ಲ. ಅವರು ತಮ್ಮ ಅನ್ನವನ್ನು ತಾವೇ ಸಂಪಾದಿಸಿಕೊಂಡು ಸ್ವಾವಾಲಂಬಿಗಳನ್ನಾಗಿ ಮಾಡುವುದು ಸರಕಾರದ ಕೆಲಸ. ಅಲ್ಲಿಯವೆಗೂ ಈ ಸವಲತ್ತುಗಳನ್ನು ನೀಡುವುದು ಮತ್ತು ಪಡೆದುಕೊಳ್ಳುವುದು ಅಪರಾಧ ಅಲ್ಲ. ಉಚಿತ ಕೊಡುಗೆಗಳಿಗೆ ಬೇಡಿಕೆ ಇದೆ ಎಂದರೆ ತಲೆ ತಗ್ಗಿಸಬೇಕಾದ್ದು, ಇದುವರೆಗೂ ಆಡಳಿತ ನಡೆಸಿದ ರಾಜಕೀಯ ಪಕ್ಷಗಳೇ ಹೊರತು ಶ್ರೀಸಾಮಾನ್ಯ ಅಲ್ಲ. ಅರ್ಹರಿಗೆ ಈ ಪ್ರಯೋಜನಗಳು ಲಭ್ಯವಾಗಲಿ ಎನ್ನುವುದಷ್ಟೇ ಎಲ್ಲರ ಕಳಕಳಿಯಾಗಿದೆ.

ಮುಂಬರುವ ಸರ್ಕಾರಗಳು ಕಟ್ಟಕಡೆಯ ನಾಗರೀಕನನ್ನೂ ಸ್ವಾವಾಲಂಬಿಯನ್ನಾಗಿ ಮಾಡಲಿ ಎಂದು ಆಶಿಸೋಣ.



ಎಚ್. ಮಾರುತಿ

# ಜನಾಶೀರ್ವಾದದ ಮುಂದೆ ದುಡ್ಡಿನ ಆಟ ನಡೆಯಲ್ಲ: ಮಲ್ಲಿಕಾರ್ಜುನ ರಾಶಿಂಗೆ

ಹುಕ್ಕೇರಿ: ಈ ಬಾರಿಯ ಚುನಾವಣೆಯಲ್ಲಿ ಜನಾಶೀರ್ವಾದದ ಮುಂದೆ ಬಿಜೆಪಿ ಮತ್ತು ಕತ್ತಿ ಕುಟುಂಬದ ದುಡ್ಡಿನ ಆಟ ನಡೆಯಲ್ಲ ಎಂದು ಕೆಪಿಸಿಸಿ ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ ಹೇಳಿದರು.

ಹುಕ್ಕೇರಿ ಮತಕ್ಷೇತ್ರದ ಸುಲ್ತಾನಪುರ, ಮದಿಹಳ್ಳಿ, ಮದಮಕ್ಕನಾಳ, ಬೆಣಿವಾಡ, ರಕ್ಷಿ, ಶಿರಗಾಂವ ಮತ್ತಿತರ ಕಡೆಗಳಲ್ಲಿ ಶುಕ್ರವಾರ ವಿವಿಧ ದಲಿತಪರ ಸಂಘಟನೆಗಳ ಮುಖಂಡರು ಕೈಗೊಂಡಿರುವ ಕಾಂಗ್ರೆಸ್ ಅಭ್ಯರ್ಥಿ ಎ.ಬಿ.ಪಾಟೀಲ ಪರ ಮತಪ್ರಚಾರದಲ್ಲಿ ಅವರು ಮಾತನಾಡಿದರು.

ಈ ಬಾರಿ ಪ್ರತಿಯೊಬ್ಬ ಕಾಂಗ್ರೆಸ್‌ನ ಸಾಮಾನ್ಯ ಕಾರ್ಯಕರ್ತರು ತಾವೇ ಅಭ್ಯರ್ಥಿ ಎಂದು ತಿಳಿದು ಮನೆ ಮನೆಗೆ ತೆರಳಿ ಮತಯಾಚನೆ ಮಾಡುತ್ತಿದ್ದು ಎ.ಬಿ.ಪಾಟೀಲರ ಗೆಲುವು ಶತಸಿದ್ಧ. ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಅಭೂತಪೂರ್ವ ಬೆಂಬಲ ವ್ಯಕ್ತವಾಗುತ್ತಿದ್ದು ವಿರೋಧಿ ಗುಂಪಿನ ದುಡ್ಡಿನ ಆಟ ನಡೆಯುವುದಿಲ್ಲ. ಜನಬಲದ ಮುಂದೆ ಹಣಬಲ ಮಂಡಿಯೂರಲಿದೆ ಎಂದು ಅವರು ಹೇಳಿದರು.



ಈ ಹಿಂದೆ ಮಾಜಿ ಸಿಎಂ ಸಿದ್ಧರಾಮಯ್ಯ ಅವಧಿಯಲ್ಲಿ ನಡೆದಿದ್ದ ಅಭಿವೃದ್ಧಿ ಕೆಲಸಗಳೇ ಕಾಂಗ್ರೆಸ್ ಗೆಲುವಿಗೆ ಶ್ರೀರಕ್ಷೆಯಾಗಲಿದೆ. ಬಿಜೆಪಿ ಸರ್ಕಾರದಲ್ಲಿ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿಯಲ್ಲಿ ಬಿಜೆಪಿ ಸರ್ಕಾರ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಿದೆ ಎಂದು ಅವರು ದೂರಿದರು.

ಚುನಾವಣೆಯ ಕೊನೆಯ ದಿವಸದಲ್ಲಿ ಬಿಜೆಪಿಯವರು ಕೋಟಿ ಕೋಟಿ ಹಣ ಕೊಡುತ್ತಾರೆ.

ಆದರೆ, ಅವರು ಏನು ಕೊಡುತ್ತಾರೋ ಅದನ್ನು ತೆಗೆದುಕೊಳ್ಳಿ. ಮತವನ್ನು ಮಾತ್ರ ಕಾಂಗ್ರೆಸ್‌ಗೆ ಹಾಕಿ ಎಂದು ಸಲಹೆ ನೀಡಿದ ರಾಶಿಂಗೆ, ಎಬಿಪಿ ಒಬ್ಬ ಪ್ರಾಮಾಣಿಕ, ಸರಳ, ಸಜ್ಜನಿಕೆ ರಾಜಕಾರಣಿಯಾಗಿದ್ದು ಅವರಿಗೆ ಮತ ನೀಡಬೇಕು ಎಂದು ಮನವಿ ಮಾಡಿದರು.

ಈ ವೇಳೆ ಮುಖಂಡರಾದ ಕೆ.ವೆಂಕಟೇಶ, ಕೆಂಪಣ್ಣಾ ಶಿರಹಟ್ಟಿ, ಲಕ್ಷ್ಮಣ ಹೂಲಿ, ಮಂಜು ಪಡದಾರ, ರಾಜು ಮೂಥಾ, ಶೀತಲ ಕಟ್ಟಿ, ಆನಂದ ಖಾತೇದಾರ, ರವಿ ವಾಳವಿ, ಮಹೇಶ ಮಾಳಗೆ, ಮಾರುತಿ ಚಿಕ್ಕೋಡಿ, ಸುಂದರ ಶಿಂಗೆ, ಸಾಗರ ತಳವಾರ, ಶಂಕರ ಘಂಟೆ, ದಿಲೀಪ ಹೊಸಮನಿ, ಆನಂದ ಕೆಳಗಡೆ, ಪ್ರಕಾಶ ಮೈಲಾಖೆ, ಪಿಂಟು ಸೂರ್ಯವಂಶಿ, ಮಂಜು ಮರಡಿ, ಬಸವರಾಜ ಹವಾಲ್ದಾರ, ರೇಖಾ ಬಾಲವ್ವಗೋಳ ಮತ್ತಿತರರು ಉಪಸ್ಥಿತರಿದ್ದರು.

# ಬಿಜೆಪಿಗೆ ಶಾಕ್: ಕೃಷ್ಣಾ ಆನಿಗೋಳ್ಕರ್ ಸೇರಿ ಹಲವರು ಕಾಂಗ್ರೆಸ್ ಸೇರ್ಪಡೆ

ಬೆಳಗಾವಿ: ರಾಜ್ಯ ಉಣ್ಣೆ ನಿಗಮದ ಅಧ್ಯಕ್ಷ ಕೃಷ್ಣ ಅನಿಗೊಳ್ಕರ್, ಬೀರಾ ಆನಿಗೇಳ್ಕರ್ ಸೇರಿದಂತೆ ನೂರಾರು ಮುಖಂಡರು ಶುಕ್ರವಾರ ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ್ದಾರೆ.

ಕಾಂಗ್ರೆಸ್ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಹಾಗೂ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ನೇತೃತ್ವದಲ್ಲಿ ಹಲವಾರು ಮುಖಂಡರು, ಕಾರ್ಯಕರ್ತರು ಕಾಂಗ್ರೆಸ್ ಸೇರಿದರು. ರಾಜ್ಯ ಉಣ್ಣೆ ನಿಗಮದ ಅಧ್ಯಕ್ಷ ಕೃಷ್ಣ ಆನಿಗೋಳ್ಕರ್, ಬೀರಾ ಆನಿಗೋಳ್ಕರ್, ಡಿಸಿಸಿ ಬ್ಯಾಂಕ್ ನ ಸದಸ್ಯರು ಹಾಗೂ ಶಿಂದೋಳ್ಳಿ ಗ್ರಾಮದ ಸುತ್ತಮುತ್ತಲಿನ ಅನೇಕ ಮುಖಂಡರು ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷದ ತತ್ವ, ಸಿದ್ದಾಂತಗಳನ್ನು ಒಪ್ಪಿ ಪಕ್ಷಕ್ಕೆ ಅಧಿಕೃತವಾಗಿ ಸೇರ್ಪಡೆಗೊಂಡರು.



ಈ ವೇಳೆ ಮಾತನಾಡಿದ ಸತೀಶ್ ಜಾರಕಿಹೊಳಿ, ರಾಜ್ಯಾದ್ಯಂತ ವಿವಿಧ ಪಕ್ಷಗಳಿಂದ ಬಹಳಷ್ಟು ಜನರು ಕಾಂಗ್ರೆಸ್ ಸೇರುತ್ತಿದ್ದಾರೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ಖಚಿತವಾಗಿದ್ದು, ಬೆಳಗಾವಿ ಜಿಲ್ಲೆಯಲ್ಲಿ ಕನಿಷ್ಠ 12 ಸ್ಥಾನಗಳಲ್ಲಿ ಗೆಲ್ಲಲಿದೆ ಎಂದು ತಿಳಿಸಿದರು.

ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದಲ್ಲಿ ಲಕ್ಷ್ಮೀ ಹೆಬ್ಬಾಳಕರ್ ಅವರ ಗೆಲುವು ಖಚಿತವಾಗಿದ್ದು, ಕಳೆದಬಾರಿಗಿಂತ ಎಷ್ಟು ಅಂತರ ಹೆಚ್ಚಲಿದೆ ಎನ್ನುವುದಷ್ಟೇ ಗೊತ್ತಾಗಬೇಕಿದೆ ಎಂದು ಅವರು ಹೇಳಿದರು.

ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಬೆಳಗಾವಿ ಗ್ರಾಮೀಣ ಕ್ಷೇತ್ರ ಸೇರಿದಂತೆ ಜಿಲ್ಲೆಯ ಅನೇಕ ಕ್ಷೇತ್ರಗಳಲ್ಲಿ ಹಲವಾರು ಮುಖಂಡರು ಕಾಂಗ್ರೆಸ್ ಸೇರುತ್ತಿದ್ದಾರೆ. ಪಕ್ಷ ದೊಡ್ಡ ಮಟ್ಟದಲ್ಲಿ ಬಲಗೊಳ್ಳುತ್ತಿದ್ದು, ಕಾಂಗ್ರೆಸ್ ನಿರೀಕ್ಷೆಗೂ ಮೀರಿ ಜಯಭೇರಿ ಭಾರಿಸಲಿದೆ ಎಂದರು.

# ಇಂದು ಲಕ್ಷ್ಮೀ ಹೆಬ್ಬಾಳಕರ ಪರ ಪ್ರಚಾರಕ್ಕೆ ಆಗಮಿಸಲಿದ್ದಾರೆ ನಟ ಶಿವರಾಜಕುಮಾರ್



ಬೆಳಗಾವಿ: ಹ್ಯಾಟ್ರಿಕ್ ಹೀರೊ ಶಿವರಾಜ–ಕುಮಾರ್ ಅವರು ಇಂದು ಮೇ 6ರಂದು ಬೆಳಗಾವಿಗೆ ಆಗಮಿಸಲಿದ್ದಾರೆ.

ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕಿ, ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮೀ ಹೆಬ್ಬಾಳಕರ ಪರ ಅವರು ಭರ್ಜರಿ ಪ್ರಚಾರ ಕೈಗೊಳ್ಳಲಿದ್ದಾರೆ. ಸಂಜೆ 4 ಗಂಟೆಗೆ ಬೆಳಗಾವಿ ತಾಲೂಕಿನ ಸುಳೆಬಾವಿಗೆ ಆಗಮಿಸಲಿರುವ ಅವರು ಅಲ್ಲಿನ ಶ್ರೀ ಮಹಾಲಕ್ಷ್ಮೀ ದೇವಿ ದರ್ಶನ ಪಡೆದು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಸಾರ್ವಜನಿಕರೊಂದಿಗೆ ಸಂವಾದ ನಡೆಸಿ ಚುನಾವಣೆ ಪ್ರಚಾರ ಕಾರ್ಯ ಆರಂಭಿಸಲಿದ್ದಾರೆ. 5 ಗಂಟೆಗೆ ಶಿಂದೊಳ್ಳಿ ಗ್ರಾಮದಲ್ಲಿ ರೋಡ್ ಶೋ ನಡೆಸಿ ಪ್ರಚಾರ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಸಂಜೆ 7 ಗಂಟೆಗೆ ಹೊನ್ನಿಹಾಳ ಗ್ರಾಮದಲ್ಲಿ ರೋಡ್ ಶೋ ನಡೆಸಲಿದ್ದಾರೆ.

# ಮುಸ್ಲಿಮರ ಓಲೈಕೆ ಸರಿಯಲ್ಲ: ಫಡ್ನವಿಸ್



ಹುಬ್ಬಳ್ಳಿ: ಬಜರಂಗದಳವನ್ನು ನಿಷೇಧಿಸುವ ಹೆಸರಿನಲ್ಲಿ ಮುಸ್ಲಿಮರನ್ನು ಓಲೈಸಲು ಹೊರಟಿರುವ ಕಾಂಗ್ರೆಸ್ ನೀತಿಯನ್ನು ಕರ್ನಾಟಕದ ಜನ ಒಪ್ಪುವುದಿಲ್ಲ ಎಂದು ಮಹಾರಾಷ್ಟ್ರ ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಹೇಳಿದರು. ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಜರಂಗದಳದ ಬಗ್ಗೆ ಕಾಂಗ್ರೆಸ್ ನವರ ಮನಸ್ಸಿನಲ್ಲಿದ್ದುದು ಈಗ ಹೊರಗೆ ಬಂದಿದೆ. ಭಾರತವನ್ನು ತುಕ್ಡೆ ತುಕ್ಡೆ ಮಾಡುತ್ತೇವೆ ಎನ್ನುವವರನ್ನು ಅವರು ಅಪ್ಪಿಕೊಳ್ಳುತ್ತಾರೆ. ಜೈ ಶ್ರೀರಾಮ್, ಭಾರತ್ ಮಾತಾಕಿ ಜೈ ಎನ್ನುವ ಸಂಘಟನೆಯನ್ನು ನಿಷೇಧಿಸುವ ಮಾತಾಡುತ್ತಾರೆ ಎಂದರು. ಕರ್ನಾಟಕದಲ್ಲಿ ಬಿಜೆಪಿ ಮತ್ತು ಮೋದಿ ಪರ ಅಲೆ ಇದೆ. ಇಲ್ಲಿ ಬಿಜೆಪಿ ಪೂರ್ಣ ಬಹುಮತದೊಂದಿದೆ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಜಗದೀಶ ಶೆಟ್ಟರ್ ಅವರು ಕಾಂಗ್ರೆಸ್ ಸೇರಿದ್ದರಿಂದ ಲಿಂಗಾಯತ ವೋಟ್ ಬ್ಯಾಂಕ್ ಮೇಲೆ ಪರಿಣಾಮ ಬೀರಲಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿ, 'ಇದರಿಂದ ಯಾವುದೇ ನಷ್ಟವಿಲ್ಲ. ಜನರು ಬಿಜೆಪಿಯ ಜತೆಗಿದ್ದಾರೆ. ಲಿಂಗಾಯತ ಸಮಾಜದ ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಅವರಂತಹ ದೊಡ್ಡ ನಾಯಕರು ಪಕ್ಷದಲ್ಲಿದ್ದಾರೆ. ಭ್ರಷ್ಟ ಲಿಂಗಾಯತ ಮುಖ್ಯಮಂತ್ರಿ ಎಂದು ಲಿಂಗಾಯತರನ್ನು ಅವಹೇಳನ ಮಾಡಿದ ಪಕ್ಷಕ್ಕೆ ಶೆಟ್ಟರ್ ಹೋಗಿದ್ದಾರೆ. ಈ ಬಗ್ಗೆ ಅವರು ಜನತೆಗೆ ಉತ್ತರಿಸಬೇಕು' ಎಂದರು.

# ಅದ್ದೂರಿಯ 109 ನೇಯ ಕಸಾಪ ಸಂಸ್ಥಾಪನಾ ದಿನ ಆಚರಣೆ

ಬೆಳಗಾವಿ: ನೆಹರು ನಗರದ ಕನ್ನಡ ಭವನದಲ್ಲಿ ಇಂದು 109 ನೇಯ ಕಸಾಪ ಸಂಸ್ಥಾಪನಾ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸಲಾಯಿತು. ಉದ್ಘಾಟಕರಾಗಿ ಆಗಮಿಸಿದ ಹಸಿರು ಕ್ರಾಂತಿ ದಿನಪತ್ರಿಕೆಯ ಸಂಪಾದಕರಾದ ಸಂಪತಕುಮಾರ ಮುಚಳಂಬಿಯವರು ಕನ್ನಡದ ಉಳಿವಿಗಾಗಿ ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿಗಳನ್ನು ತಿಳಿಸಿದರು.

"ಕನ್ನಡ ಅಸ್ಮಿತೆ– ಕನ್ನಡ ಸಾಹಿತ್ಯ ಪರಿಷತ್ತು" ಎಂಬ ವಿಷಯದ ಕುರಿತು ಮಹೇಶ ಪ.ಪೂ ಮಹಾವಿದ್ಯಾಲಯದ ಪ್ರಾಚಾರ್ ಎಂ.ವ್ಹಿ.ಭಟ್ಟರವರು ಮಾತನಾಡಿ ಅತ್ಯಂತ ಮೌಲಿಕ ವಿಚಾರಗಳನ್ನು ತಿಳಿಸಿ ಕನ್ನಡದ ಸಂವಾದ, ಚರ್ಚೆಗಳು ಮತ್ತು ಚಟುವಟಿಕೆಗಳು ನಿರಂತರವಾಗಿ ಸಾಗಬೇಕೆಂದರು.



ಕರ್ನಾಟಕ ಸರಕಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ರೇವತಿ.ಹಿರೇಮಠ ಅವರು ಕನ್ನಡ ಅಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಅಪಾರವಾಗಿದೆ ಸ್ತ್ರೀ ಸ್ವ ಸಹಾಯ ಸಂಘಗಳು ಚಟುವಟಿಕೆಗಳಲ್ಲಿ ತೊಡಗಿಕೊಂಡು ಸರಕಾರದ ಯೋಜನೆಗಳನ್ನು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕೆಂದು ಅಭಿಪ್ರಾಯ ಪಟ್ಟರು. ಬೆಳಗಾವಿಯ ಹಿರಿಯ ಸಾಹಿತಿ ಸ. ರಾ ಸುಳಕೂಡೆ ಅವರು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿ ಕಸಾಪ ಚಟುವಟಿಕೆಗಳಿಗೆ ಶಾಸನ ಬದ್ಧವಾಗಿ ಹಣ ಬಿಡುಗಡೆಯಾಗಿ ಹಳ್ಳಿ ಹಳ್ಳಿಗಳಲ್ಲಿ ಕನ್ನಡ ಪ್ರಭಾವ ಬೀರುವ ಸಮಾರಂಭಗಳು ಜರುಗಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಳಗಾವಿ ಜಿಲ್ಲಾ ಕಸಾಪ ಅಧ್ಯಕ್ಷರಾದ ಮಂಗಲಾ ಮೆಟಗುಡರವರು ವಹಿಸಿಕೊಂಡು ಪುಸ್ತಕ ಮುದ್ರಣ ವಿಭಾಗಕ್ಕೆ ಬೆಳಗಾವಿ ಜಿಲ್ಲೆವರೆ ಹೆಚ್ಚಿನ ಸಂಖ್ಯೆಯಲ್ಲಿ ಸಾಹಿತ್ಯ ರಚಿಸಿ ಕಳುಹಿಸಬೇಕೆಂದು ಆಶಯ ವ್ಯಕ್ತಪಡಿಸಿದರು.

ಸಮಾರಂಭದಲ್ಲಿ ಬೆಳಗಾವಿ ಲೇಖಕಿಯ ಸಂಘದ ಪದಾಧಿಕಾರಿಗಳು, ಕಸಾಪ ತಾಲೂಕಾ ಅಧ್ಯಕ್ಷರು, ಜಿಲ್ಲಾ ಕಸಾಪದ ಕಾರ್ಯಕಾರಿ ಸಮಿತಿಯ ಸದಸ್ಯರು ಕನ್ನಡಾಭಿಮಾನಿಗಳು ಹಾಗೂ ಅನೇಕ ಕಲಾವಿದರು ಭಾಗಿಯಾಗಿದ್ದರು. ಎಂ.ವೈ. ಮೆಣಸಿನಕಾಯಿ ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವೀರಭದ್ರಪ್ಪ ಅಂಗಡಿಯವರು ಪರಿಚಯಿಸಿದರು. ಪ್ರತಿಭಾ ಕಳ್ಳಿಮಠ ನಿರೂಪಿಸಿದರು.ಸುನೀಲ ಹಲವಾಯಿ ವಂದಿಸಿದರು.

# ಸತೀಶ ಜಾರಕಿಹೊಳಿ ಬಹುಮತ ಅಂತರದಿಂದ ಗೆಲ್ಲಲು ಸಹಕರಿಸಿ

ಬೆಳಗಾವಿ: ಯಮಕನಮರಡಿ ವಿಧಾನಸಭಾ ಮತಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಜೋಡೆತ್ತು ಬಂಡಿಯ ಮೂಲಕ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಭರ್ಜರಿ ರೋಡ ಶೋ ನಡೆಸಿದರು.

ಯಮಕನಮರಡಿ ಮತಕ್ಷೇತ್ರದ ಅಲತಗಾ, ಅಗಸಗಾಚ ಚೆಲ್ಲುವೆನಟ್ಟಿ, ಮಾಳೇನಟ್ಟಿ, ಹಂದಿಗನೂರು, ಭೋಡೆನಹಟ್ಟಿ, ಕುರಿಹಾಳ, ಮನ್ನಿಕೇರಿ, ಕೇದನೂರು, ದೇವಗಿರಿ, ಕಡೋಲಿ, ಜಾಫರವಾಡಿ ಗ್ರಾಮಗಳಲ್ಲಿ ರಾಹುಲ್ ಜಾರಕಿಹೊಳಿ ಅವರು ತಂದೆಯ ಪರ ಭರ್ಜರಿ ಮತಬೇಟೆ ನಡೆಸಿದರು.

ಯುವ ನಾಯಕ ರಾಹುಲ್ ಜಾರಕಿಹೊಳಿ ಆಗಮಿಸುತ್ತಿದಂತೆ ಗ್ರಾಮದ ಯುವಕರು, ಹಿರಿಯರು, ಮಹಿಳೆಯರು ಸತೀಶ ಅಣ್ಣಾ ಜಾರಕಿಹೊಳಿ ಎಂದು ಜೈಘೋಷ ಮೊಳಗಿಸಿದರು. ಈ ವೇಳೆ ಸುಮಂಗಲೆಯ–ರಿಂದ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರಿಗೆ ಆರತಿ ಬೆಳಗಿಸಿ, ಆತ್ಮೀಯವಾಗಿ ಬರಮಾಡಿಕೊಂಡರು.



ಬಳಿಕ ಅಲತಗಾ ಗ್ರಾಮದೇವಿ ಶ್ರೀ ದುರ್ಗಾಮಾತಾ ದೇವಿಗೆ ರಾಹುಲ್ ಜಾರಕಿಹೊಳಿ ಪೂಜೆ ಸಲ್ಲಿಸಿ, ಆಶೀರ್ವಾದ ಪಡೆದುಕೊಂಡರು.

ಈ ವೇಳೆ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಮಾತನಾಡಿ, ಯಮಕನಮರಡಿ ಕ್ಷೇತ್ರದ ಪ್ರತಿಯೊಂದು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಗುಣಮಟ್ಟದ ರಸ್ತೆಗಳನ್ನು ಅಭಿವೃದ್ಧಿಗೊಳಿಸಲಾಗಿದೆ. ಕ್ಷೇತ್ರ ಹೈಟೆಕ್ ಕ್ಷೇತ್ರವನ್ನಾಗಿ ಮಾಡುವ ಕನಸು ನಮ್ಮದು ಹೀಗಾಗಿ, ಮತದಾರರು ತಂದೆಯವರಾದ ಸತೀಶ ಜಾರಕಿಹೊಳಿ ಅವರನ್ನು ಬಹುಮತ ಅಂತರ ಗೆಲ್ಲಿಸಲು ಸಹಕರಿಸಬೇಕು ಎಂದು ಮನವಿ ಮಾಡಿಕೊಂಡರು.

ತಂದೆಯ ಗೆಲುವಿಗೆ ಸಹಕಾರ ನೀಡಿ: ಕಳೆದ 15 ವರ್ಷಗಳಿಂದ ಯಮಕನಮರಡಿ ಕ್ಷೇತ್ರದಲ್ಲಿ ನಿರಂತರವಾಗಿ ಕ್ಷೇತ್ರದ ಅಭಿವೃದ್ಧಿಗಾಗಿ ಶ್ರಮಿಸುತ್ತಿದ್ದಾರೆ. ಹಿಂದೆಯೂ ಕೈ ಹಿಡಿದು ನಡೆಸಿದ್ದಿರಿ, ಈ ಬಾರೀ ಗ್ರಾಮದ ಜನತೆ ಕೈ ಹಿಡಬೇಕು. ಸತೀಶ ಜಾರಕಿಹೊಳಿ ಅವರು ಬಹುಮತ ಅಂತರದಿಂದ ಜಯಶಾಲಿಯಾಗಬೇಕು ಅದಕ್ಕಾಗಿ ನೀವು ಆರ್ಶೀವಾದ ಮಾಡಬೇಕೆಂದು ಮನವಿ ಮಾಡಿಕೊಂಡರು.

ಕಷ್ಟಗಳಿಗೆ ಧ್ವನಿಗೂಡಿಸುವ ಸೇವಕನನ್ನು ಆಯ್ಕೆ ಮಾಡಿ: ಸಾಮಾಜಿಕ ಕಳಕಳಿ ಇರುವ ಜನನಾಯಕರನ್ನು ಆಯ್ಕೆ ಮಾಡುವ ನಿರ್ಧಾರ ನಿಮ್ಮ ಮೇಲಿದೇ ನಿಮ್ಮ ಕಷ್ಟಗಳಿಗೆ ಧ್ವನಿಗೂಡಿಸುವ ಸೇವಕನನ್ನು ಆಯ್ಕೆ ಮಾಡಬೇಕು. ಕ್ಷೇತ್ರದಲ್ಲಿ ಈ ಸಾಕಷ್ಟು ಅಭಿವೃದ್ಧಿ ಕಾರ್ಯಗಳು ನಡೆಯಬೇಕಿದೆ. ಇದೇ ಮೇ 10 ರಂದು ನಡೆಯುವ ಮತದಾನದಲ್ಲಿ ನಿಮ್ಮ ಸತೀಶ ಜಾರಕಿಹೊಳಿ ಆಗಬೇಕಿದೆ.

ನಿಮ್ಮ ಒಂದೊಂದು ಮತದಾನ ತಂದೆಯವರು ಬಹುಮತ ಅಂತರದಿಂದ ಗೆಲ್ಲಲು ಅನುಕೂಲವಾಗಲಿದೆ ಎಂದರು.

ಈ ವೇಳೆ ಶಾಸಕ ಸತೀಶ ಜಾರಕಿಹೊಳಿ ಅವರ ಆಪ್ತ ಸಹಾಯಕ ಮಲಗೌಡ ಪಾಟೀಲ, ಅರುಣ ಕಟಾಂಬಳೆ, ಕಾಂಗ್ರೆಸ್ ಮುಖಂಡರು ಹಾಗೂ ಗ್ರಾಮಸ್ಥರು ಇತರರು ಇದ್ದರು.

# ಮಗು ಸಹಿತ ಗರ್ಭಿಣಿ ಸಾವು



ಯಾದಗಿರಿ: ಹೊಟ್ಟೆಯಲ್ಲೇ ಮಗು ಸಹಿತ ಗರ್ಭಿಣಿ ಸಾವಿಗೀಡಾಗಿರುವ ಘಟನೆ ಯಾದಗಿರಿಯಲ್ಲಿ ನಡೆದಿದೆ. ಹೆರಿಗೆ ಮಾಡಿಕೊಳ್ಳದೇ ವೈದ್ಯರು ನಿರ್ಲಕ್ಷ್ಯ ತೋ–ರಿದ್ದಾರೆಂದು ಮೃತ ಮಹಿಳೆ ಕುಟುಂಬಸ್ಥರು ಆರೋಪಿಸಿ ಪ್ರತಿಭಟನೆ ನಡೆಸಿದ್ದಾರೆ.

ಯಾದಗಿರಿಯ ತಾಯಿ–ಮಕ್ಕಳ ಆಸ್ಪತ್ರೆಯಲ್ಲಿ ಈ ಘಟನೆ ವರದಿಯಾಗಿದೆ. ಗೂಡೂರು ಗ್ರಾಮದ ಸಂಗೀತಾ (20) ಮೃತ ಗರ್ಭಿಣಿ. 3ನೇ ತಾರೀಖು ಹೆರಿಗೆಗೆಂದು ಆಸ್ಪತ್ರೆಗೆ ದಾಖಲಾಗಿದ್ದರು. ಪ್ರತೀ ತಿಂಗಳು ಆರೋಗ್ಯ ತಪಾಸಣೆ ಮಾಡಿಸಿದ್ದರಿಂದ ಆರೋಗ್ಯವಾಗಿದ್ದರು.

ದಿನ ತುಂಬಿದ್ದರಿಂದ ಯಾವುದೇ ಸಮಸ್ಯೆ ಇಲ್ಲ, ನಾರ್ಮಲ್ ಹೆರಿಗೆ ಮಾಡುವುದಾಗಿ ವೈದ್ಯರು ಹೇಳಿದ್ದರು. ಆಸ್ಪತ್ರೆಗೆ ದಾಖಲಾಗಿದ್ದರೂ ಸ್ಕ್ಯಾನ್ ಮಾಡದೇ ನಿರ್ಲಕ್ಷ್ಯ ವಹಿಸಿದ್ದರು ಎಂದು ಕುಟುಂಬದವರು ದೂರಿದ್ದಾರೆ.

# ಕಾಂಗ್ರೆಸ್ ಪ್ರಚಾರದ ವೇಳೆ ಕಲ್ಲು ತೂರಾಟ

## ಕಾರ್ಯಕರ್ತೆ ತಲೆಗೆ ಗಂಭೀರ ಗಾಯ

ವಿಜಯಪುರ: ಇಲ್ಲಿನ ಮುದ್ದೇಬಿಹಾಳ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಚಾರ ನಡೆಸುತ್ತಿದ್ದ ವೇಳೆ ಕಲ್ಲು ತೂರಾಟ ನಡೆದಿದೆ. ಈ ವೇಳೆ ಮಹಿಳಾ ಕಾರ್ಯಕರ್ತೆ ಶಾಂತಾಗೆ ತಲೆಗೆ ಕಲ್ಲು ಬಿದ್ದು ಗಂಭೀರವಾಗಿ ಗಾಯಗೊಂಡಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿ ಮಾಜಿ ಸಚಿವ ಸಿ.ಎಸ್ ನಾಡಗೌಡ ಪರ ಪ್ರಚಾರ ನಡೆಸುತ್ತಿದ್ದ ವೇಳೆ ಕಲ್ಲು ತೂರಾಟ ನಡೆದಿದೆ. ಮುದ್ದೇಬಿಹಾಳ ಕ್ಷೇತ್ರದ ಗೋನಾಳ ಗ್ರಾಮದಲ್ಲಿ ನಡೆದ ಪ್ರಚಾರ ಕಾರ್ಯ ಕ್ರಮದ ವೇಳೆ ಘಟನೆ ನಡೆದಿದೆ.



ಗಂಭೀರವಾಗಿ ಗಾಯಗೊಂಡ ಕಾರ್ಯಕರ್ತೆ ಶಾಂತಾ ಎಂಬಾಕೆಯನ್ನ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆಯಿಂದ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿದೆ. ತಾಳಿಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಪೊಲೀಸರು ಪರಿಶೀಲಿಸುತ್ತಿದ್ದಾರೆ.

# ಬಿಜೆಪಿ ಕ್ರಿಮಿನಲ್ ಗಳಿಗೆ ಟಿಕೆಟ್ ನೀಡಿದೆ: ಶೆಟ್ಟರ್ ಟೀಕಾ ಪ್ರಹಾರ



ಬೆಳಗಾವಿ: ರಾಜ್ಯದಲ್ಲಿ ಕಾಂಗ್ರೆಸ್ ಪರ ಅಲೆ ಇದ್ದು, 130 ಸ್ಥಾನ ಗೆಲ್ಲುವ ನಿರೀಕ್ಷೆ ಇದೆ. ಬೆಳಗಾವಿ ನಗರದ ಅಭಿವೃದ್ಧಿಗಾಗಿ ಸಹೋದರ ರಾಜು ಸೇಠ ಅವರನ್ನು ಬಹುಮತ ಅಂತರದಿಂದ ಗೆಲ್ಲಲು ಮತದಾರರು ಸಹಕಾರ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಹೇಳಿದರು.

ನಗರದ ಮಹಾಂತ ಭವನದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಕಾರ್ಯಕರ್ತರು ಉದ್ದೇಶಿಸಿ ಮಾತನಾಡಿದರು. ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಬೆಳಗಾವಿ ಉತ್ತರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆಸೀಫ್ ರಾಜು ಸೇಠ್ ಪರ ಪ್ರಚಾರ ಸಭೆ ಕೈಗೊಂಡರು.

ಬೆಳಗಾವಿ ಸೇರಿದಂತೆ, ಕಿತ್ತೂರು ಖಾನಾಪುರ ಮತ್ತು ಎಲ್ಲ ಕ್ಷೇತ್ರಗಳಲ್ಲಿ ಪ್ರಚಾರ ಕಾರ್ಯ ಕೈಗೊಳ್ಳಲಾಗಿದೆ.

ಯಾವುದೇ ಸಂಘಟನೆ ರದ್ದುಗೊಳಿಸುವ ಅಧಿಕಾರ ಸರ್ಕಾರಕ್ಕೆ ಕೈಯಲ್ಲಿ ಇರುವುದಿಲ್ಲ, ಕೇಂದ್ರ ಸರ್ಕಾರಕ್ಕೆ ಬಿಟ್ಟ ವಿಚಾರ ಎಂದು ಹೇಳಿದರು.

ಈ ಬಾರಿ ಕಾಂಗ್ರೆಸ್ ಉತ್ತರ ಮತಕ್ಷೇತ್ರದ ರಾಜು ಸೇಠ್ ಕಣ–ಕ್ಕೆ ಇಳಿದಿದ್ದಾರೆ. ಮತದಾರರ ಬೆಂಬಲ ನೀಡಬೇಕು ಎಂದ ಅವರು, ಸುರೇಶ್ ಅಂಗಡಿ ನಾವು ಬಿಜೆಪಿ ತಳಮಟ್ಟದಿಂದ ಬೆಳೆಸಿದ್ದೆವೆ. ಹಿರಿಯರ ನಾಯಕರಿಗೆ ಬಿಜೆಪಿಯಲ್ಲಿ ಗೌರವ ಇಲ್ಲ

ರಾಜ್ಯದಲ್ಲಿ ಸ್ವಚ್ಛ ಆಡಳಿತ ನಡೆಸಿದ ಹಿರಿಯರನ್ನು ಕೈ ಬಿಟ್ಟು, ಬಿಜೆಪಿ ಕ್ರಿಮಿನಲ್ ಗಳಿಗೆ ಟಿಕೆಟ್ ಕೊಟ್ಟಿದ್ದಾರೆ ಎಂದು ಬಿಜೆಪಿ ವಿರುದ್ಧ ಹರಿಹಾಯ್ದರು.ಬಿಜೆಪಿಯ ತತ್ವ ಸಿದ್ಧಾಂತಗಳು ಕೆಲವ ಒಂದು ಸಮುದಾಯಕ್ಕೆ ಸೀಮಿತ ವಾಗಿವೆ ಕಾಂಗ್ರೆಸ್ ನೊಂದವರ ಧ್ವನಿಯಾಗಲಿದೆ ಎಂದು ಹೇಳಿದರು.

# ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳ್ಕರ ಭರ್ಜರಿ ಮತಯಾಚನೆ

ರಾಯಭಾಗ: ಮತಕ್ಷೇತ್ರದಲ್ಲಿ ಭರ್ಜರಿ ಮತಯಾಚನೆ ಮಾಡುತ್ತಿರುವ ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳ್ಕರ. ವತ್ತಿಯಲ್ಲಿ ಐಎಎಸ್ ಹುದ್ದೆಯಲ್ಲಿದ್ದ ಕಲ್ಲೋಳ್ಕರ, ಐಎಎಸ್ ಹುದ್ದೆಗೆ ರಾಜಿನಾಮೆ ನೀಡಿ ಚುನಾವಣೆ ಅಖಾಡಕ್ಕೆ ಇಳಿದಿದ್ದಾರೆ.

ರಾಯಭಾಗ ಮತಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ದೇ ಮಾಡುತ್ತಿರುವ ಶಂಭು ಕಲ್ಲೋಳ್ಕರ, ಆಟೋ ವಾಹನ ಗುರ್ತನ್ನು ಇಟ್ಟುಕೊಂಡು ಚುನಾವಣೆ ನಡೆಸುತ್ತಿದ್ದಾರೆ.



ಕಲ್ಲೋಳ್ಕರ ಕುಟುಂಬದಲ್ಲಿ ಶಿಕ್ಷಣಕ್ಕೆ ಹೆಚ್ಚು ಆದ್ಯತೆಯನ್ನು ನೀಡಿದ್ದು, ಅವರ ಮನೆಯಲ್ಲಿ ಐಎಎಸ್, ಎಫ್.ಡಿ.ಎ ಹೀಗೆ ಕುಟಂಬದಲ್ಲಿ ಸರ್ಕಾರಿ ಹುದ್ದೆಯಲ್ಲೆ ಕಾರ್ಯನಿರ್ವಹಿಸುತ್ತಿದ್ದಾರೆ, ಶಂಭು ಕಲ್ಲೋಳ್ಕರ ಧರ್ಮಪತ್ನಿಯು ಸಹ ಐಎಎಸ್ ಹುದ್ದೆಯಲ್ಲಿದ್ದಾರೆ.

ಶಿಕ್ಷಣದಲ್ಲಿ ಐಎಎಸ್ ಮಾಡಿದ ಕಲ್ಲೋಳ್ಕರ ಶೈಕ್ಷಣಿಕವಾಗಿ ರಾಯಭಾಗ ಮತಕ್ಷೇತ್ರವನ್ನು ಅಭಿವೃದ್ಧಿ ಮಾಡಲು ಚುನಾವಣೆ ಅಖಾಡಕ್ಕೆ ಇಳಿದಿದ್ದಾರೆ.

ಕಲ್ಲೋಳ್ಕರ ಅವರಿಗೆ ಅಪಾರ ಸಂಖ್ಯೆಯ ಜನರ ಬೆಂಬಲ ದೊರೆಯುತ್ತಿದೆ. ಕಂಕಣವಾಡಿಯಲ್ಲಿ ಡಾ.ಗೋಪಾಲ್ ಪೂಜಾರಿ ಅವರ ಸಾರಥ್ಯದಲ್ಲಿ ಐದು ಸಾವಿರಕ್ಕೂ ಅಧಿಕ ಜನರು ಕಲ್ಲೋಳ್ಕರ ಅವರಿಗೆ ಬೆಂಬಲ ನೀಡಿದ್ದಾರೆ.

ಚುನಾವಣೆ ಕ್ಷಣಗಣನೆಯಲ್ಲಿದ್ದು, ಕಲ್ಲೋಳ್ಕರ ರಾಯಭಾಗ ಮತಕ್ಷೇತ್ರದಲ್ಲಿ ಗೆಲವು ಸಾಧಿಸುತ್ತಾರಾ ಕಾದು ನೋಡಬೇಕಿದೆ.

# ತರಬೇತಿ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿಯ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್, ಸಹಕಾರ ತರಬೇತಿ ಸಂಸ್ಥೆಯು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಇದರ ಅಂಗ ಸಂಸ್ಥೆಯಾಗಿದ್ದು ಸಹಕಾರ ಸಂಘಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ, ಸಹಕಾರ ಇಲಾಖೆ ಮತ್ತು ಸಹಕಾರ ಸಂಘಗಳ ಲೆಕ್ಕಪರಿಶೋಧನೆ ಇಲಾಖೆ ಸಿಬ್ಬಂದಿಗಳಿಗೆ ಹಾಗೂ ಖಾಸಗಿ ಅಭ್ಯರ್ಥಿಗಳಿಗೆ 6 ತಿಂಗಳು / 180 ದಿನಗಳ "ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್" ಸಹಕಾರ ತರಬೇತಿಯನ್ನು ನಿಡಲಾಗುತ್ತಿದೆ.

ಸದರಿ ತರಬೇತಿಯಲ್ಲಿ ಸಹಕಾರ, ಸಹಕಾರ ಪತ್ತು ಮತ್ತು ಬ್ಯಾಂಕಿಂಗ್, ಸಹಕಾರ ಸಂಘಗಳ ನಿರ್ವಹಣೆ, ಲೆಕ್ಕಶಾಸ್ತ್ರ ಮತ್ತು ಲೆಕ್ಕಪರಿಶೋಧನೆ ಹಾಗೂ ಸಹಕಾರ ಕಾಯಿದೆ ಅಂಶಗಳು, ಕಂಪ್ಯೂಟರ ಅಪರೇಷನ್ ಎಂಬ ವಿಷಯಗಳ ಬೋಧನೆ ಮಾಡಲಾಗುತ್ತದೆ. ಸಹಕಾರ ಕ್ಷೇತ್ರವನ್ನು ಬಲಪಡಿಸಲು ಅನೇಕ ತರಬೇತಿಗಳನ್ನು ನೀಡುತ್ತಿದ್ದು, ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಾಸಾಗಿರುವ ಜಿಲ್ಲೆಯ ಸಹಕಾರ ಸಂಘ–ಸಂಸ್ಥೆಗಳಿಂದ ಮತ್ತು ಖಾಸಗಿ ಅಭ್ಯರ್ಥಿಗಳಿಂದ ತರಬೇತಿಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅನುತೀರ್ಣರಾಗಿ ಸಹಕಾರ ಸಂಘ–ಸಂಸ್ಥೆಗಳಲ್ಲಿ ಕನಿಷ್ಠ ಒಂದು ವರ್ಷಕ್ಕಿಂತ ಮೇಲ್ಪಟ್ಟು ಕೆಲಸ ನಿರ್ವಹಿಸಿರುವ ಸಿಬ್ಬಂದಿಗಳು ಸಹ ತರಬೇತಿಯನ್ನು ಪಡೆಯಲೂ ಅರ್ಹರಾಗಿರುತ್ತಾರೆ.

ಈ ಅವಧಿಯಲ್ಲಿ ರೂ.500 ಶಿಷ್ಯವೇತನವನ್ನು ನೀಡಲಾಗುವುದು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ಮೂಲಕ ಅರ್ಜಿ ಹಾಕಿದಲ್ಲಿ ಅಂತಹ ಅಭ್ಯರ್ಥಿಗಳಿಗೆ ರೂ.600 ಶಿಷ್ಯವೇತನ ನೀಡಲಾಗುವುದು. (ವಯೋಮಿತಿ 16 ರಿಂದ ಗರಿಷ್ಠ 30 ವರ್ಷಗಳು ಮೀರಿರಬಾರದು) ಆಸಕ್ತ ಅಭ್ಯರ್ಥಿಗಳು ಮೇಲಿನ ವಿಳಾಸಕ್ಕೆ ಖುದ್ದಾಗಿ ಬೇಟಿ ನೀಡಿ ಅರ್ಜಿ ಪಡೆಯಬಹುದು ಅಥ–ವಾ ಸಮೀಪದ ಜಿಲ್ಲಾ ಸಹಕಾರಿ ಒಕ್ಕೂಟಗಳಲ್ಲಿ ಆರ್ಜಿಗಳನ್ನು ಪಡಯಬಹುದು. ತರಬೇತಿಯು ಜುಲೈ.01 2023 ರಿಂದ ಪ್ರಾರಂಭವಾಗಲಿದ್ದು, ಜೂನ.30 2023 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್, ಬೆಳಗಾವಿ. ದೂರವಾಣಿ:0831–2950026, ಮೊ: 9449007661, 8050533207, 884259545 ಗೆ ಸಂಪರ್ಕಿಸಬಹುದು ಎಂದು ಪ್ರಾಂಶುಪಾಲರಾದ ಶೈಲಾ.ಬಿ.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತರಬೇತಿಯ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: ರೆಗ್ಯೂಲರ್ (ಡಿ.ಸಿ.ಎಂ) ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ 6 ತಿಂಗಳ/180 ದಿನಗಳ ಅವಧಿಯ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಬೆಳಗಾವಿಯ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್‌ಯಿಂದ ಅರ್ಜಿ ಆಹ್ವಾನಿಸಲಾಗಿದೆ. ಸಹಕಾರ ಸಂಘ–ಸಂಸ್ಥೆ/ಸಹಕಾರ ಇಲಾಖೆ/ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಮತ್ತು ಖಾಸಗಿ ಅಭ್ಯರ್ಥಿಗಳು ಸಹ ಅರ್ಜಿ ಸಲ್ಲಿಸಬಹುದು.

ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀಣರಾಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರತಿ ತಿಂಗಳು ರೂ: 600 ಶಿಷ್ಯವೇತನ ಹಾಗೂ ವಿಶೇಷ ಡಿ.ಸಿ.ಎಂ.ತರಬೇತಿ ನೀಡಲಾಗುವುದು.

ಇತರೆ ಅಭ್ಯರ್ಥಿಗಳಿಗೆ ಪ್ರತಿ ತಿಂಗಳು ರೂ 500 ಶಿಷ್ಯವೇತನ ನೀಡಲಾಗುವುದು. ಪುರುಷ ಅಭ್ಯರ್ಥಿಗಳಿಗೆ ವಸತಿ ಸೌಲಭ್ಯ ಉಚಿತವಾಗಿರುತ್ತದೆ ಡಿ.ಸಿ.ಎಂ.ಕೋರ್ಸ ಮುಗುಸಿದ ನಂತರ ಸಹಕಾರ ಸಂಘ/ ಸಹಕಾರ ಬ್ಯಾಂಕ್‌ಗಳ ನೇಮಕಾತಿಲ್ಲಿ ಆಧ್ಯತೆ ನೀಡಲಾಗುತ್ತದೆ.

ಅರ್ಜಿ ಫಾರಂ ಮತ್ತು ವಿವರಣಾ ಪುಸ್ತಕಗಳನ್ನು ತರಬೇತಿ ಸಂಸ್ಥೆಯಿಂದ ಮತ್ತು ತರಬೇತಿ ಸಂಸ್ಥೆಯ ಕಾರ್ಯ ವ್ಯಾಪ್ತಿಯಲ್ಲಿ ಬರುವ ಬೆಳಗಾವಿ ಮತ್ತು ಬಾಗಲಕೋಟೆ ಜಿಲ್ಲಾ ಸಹಕಾರಿ ಯೂನಿಯನ್‌ಗಳಿಂದ ಪಡೆಯಬಹುದು.

ಅರ್ಜಿ ಸಲ್ಲಿಸಲು ಮೇ.30 2023 ಕೊನೆಯ ದಿನವಾಗಿರುತ್ತದೆ .ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು ಕೆ.ಐ.ಸಿ.ಎಂ., ರಾಮತೀಥ–ರ್ನನಗರ, ಬೆಳಗಾವಿ ಹಾಗೂ ದೂರವಾಣಿ ಸಂಖ್ಯೆ: 0831–2950026, ಮೊ:–9449007661, 8884259545, 8050533207 ಗೆ ಸಂಪರ್ಕಿಸಬಹುದು ಎಂದು ಪ್ರಾಂಶುಪಾಲರಾದ ಶೈಲಾ.ಬಿ.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಬಾಲಚಂದ್ರ ಜಾರಕಿಹೊಳಿ ಪರ ಮಾತಯಾಚಣೆ

ಹಳ್ಳೂರ: ಅರಬಾಂವಿ ವಿಧಾನ ಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾದ ಬಾಲಚಂದ್ರ ಜಾರಕಿಹೊಳಿ ಅವರ ಪರ ಮಾತಯಾಚಣೆಯನ್ನು ಹಳ್ಳೂರ ಗ್ರಾಮದ ವಾರ್ಡ 5 ರಲ್ಲಿ ಬಿ ಜೆ ಪಿ ಕಾರ್ಯಕರ್ತರು ಬಿರುಸಿನ ಪ್ರಚಾರ ಮಾಡಿ ಮತ ಯಾಚನೆ ಮಾಡಿದರು. ಈ ಸಮಯದಲ್ಲಿ ಗ್ರಾಮ ಪ ಅಧ್ಯಕ್ಷ ಲಕ್ಷ್ಮಣ ಕತ್ತಿ.ಗ್ರಾಮ ಸದಸ್ಯ ಸಿದ್ದಪ್ಪ ಕೂಲಿಗೋಡ. ಗ್ರಾಮ ಪ ಸದಸ್ಯ ಪರಶುರಾಮ ಶೇಡಬಾಳ್ಕರ.ಸಿದ್ದು ತೇರದಾಳ. ರಮೇಶ ದುರದುಂಡಿ.ಶಂಕರ ಬೋಳನ್ನವರ. ಸಚಿನ ಕೋಹಳ್ಳಿ. ಬಸವರಾಜ ನೇಸುರ. ಹಣಮಂತ ಬೆಳಗಲಿ. ಶಶಾಂಕ ಗೌರವಗೋಳ. ಪಾಪು ಶೇಡಬಾಳ್ಕರ. ಚಂದ್ರಶೇಖರ ಸಪ್ತಸಾಗರ. ಹಣಮಂತ ಸಪ್ತಸಾಗರ. ಪರಶುರಾಮ ಶೇಡಬಾಳ್ಕರ. ಮಾದೇವ ಪತ್ತಾರ, ಸೇರಿದಂತೆ ಬಿ ಜೆ ಪಿ ಕಾರ್ಯಕರ್ತರಿದ್ದರು.

# ಜನರು ಸಂಕಷ್ಟದಲ್ಲಿದ್ದಾಗ ಇವರೆಲ್ಲ ಎಲ್ಲಿದ್ದರು?

## ವಿರೋಧಿ ಅಭ್ಯರ್ಥಿಗಳ ನಡೆಗೆ ಲಕ್ಷ್ಮೀ ಹೆಬ್ಬಾಳಕರ್ ಆಕ್ರೋಶ

ಬೆಳಗಾವಿ : ಈಗ ಬಂದು ಮೊಸಳೆ ಕಣ್ಣೀರು ಸುರಿಸುತ್ತಿರುವ ಬಿಜೆಪಿ ಮತ್ತು ಪಕ್ಷೇತರ ಅಭ್ಯರ್ಥಿಗಳು, ಜನರು ಪ್ರವಾಹ, ಕೊರೋನಾದಂತಹ ಸಂಕಷ್ಟದಲ್ಲಿದ್ದಾಗ ಎಲ್ಲಿದ್ದರು ಎಂದು ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನಿಸಿದ್ದಾರೆ.

ಕ್ಷೇತ್ರದ ಬಾಳೆಕುಂದ್ರಿ ಕೆಎಚ್ ಗ್ರಾಮದಲ್ಲಿ ಶುಕ್ರವಾರ ರೋಡ್ ಶೋ ನಡೆಸಿ, ಬೃಹತ್ ಜನಸ್ತೋಮವನ್ನುದ್ದೇಶಿಸಿ ಅವರು ಮಾತನಾಡುತ್ತಿದ್ದರು. ಬಿಜೆಪಿಯ ನಾಗೇಶ ಮನ್ನೋಳಕರ್ ಮತ್ತು ಪಕ್ಷೇತರ ಅಭ್ಯರ್ಥಿ ಆರ್.ಎಂ.ಚೌಗಲೆ 4 ತಿಂಗಳಿನಿಂದ ಕ್ಷೇತ್ರದ ಜನರಿಗೆ ಕಾಣಿಸಿಕೊಳ್ಳುತ್ತಿದ್ದಾರೆ. 4 ತಿಂಗಳಲ್ಲಿ 4 ಹಬ್ಬಗಳಿಗೆ ಶುಭಾಷಯ ಕೋರಿದ್ದು ಬಿಟ್ಟರೆ ಏನನ್ನೂ ಮಾಡಲಿಲ್ಲ. ರಾಜಹಂಸಗಡದಲ್ಲಿ ನಾನು ಛತ್ರಪತಿ ಶಿವಾಜಿ ಮಹಾರಾಜ ಭವ್ಯ ಪುತ್ಥಳಿ ಸ್ಥಾಪನೆ ಮಾಡಿದರೆ ಪೋಸ್ಟರ್ ಹಚ್ಚಲು ಇವರು ಬಂದಿದ್ದರು. ಇವರೆಲ್ಲ ಪೋಸ್ಟರ್ ಬಾಯ್ಸ್ ಅಷ್ಟೇ ಎಂದು ವ್ಯಂಗ್ಯವಾಡಿದರು.





ಕೊರೋನಾ ಮತ್ತು ಪ್ರವಾಹ ಬಂದಾಗ ಜನರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದರು. ಆಗ ಇವರ್ಯಾರೂ ಕಾಣಿಸಲಿಲ್ಲ. ಜನರ ನೆರವಿಗೆ ಬರಲಿಲ್ಲ. ಆಗ ನಾನು ಮುಂದೆ ನಿಂತು ನನ್ನಿಂದಾದಷ್ಟು ಸಹಾಯ ಮಾಡಿದ್ದೇನೆ. ಕೊರೋನಾ ಸೋಂಕಿತರನ್ನು ಆಸ್ಪತ್ರೆಗೆ ಸಾಗಿಸಲು ಅಂಬುಲೆನ್ಸ್ ವ್ಯವಸ್ಥೆ ಮಾಡಿದ್ದೇನೆ. ಆಹಾರದ ಕಿಟ್, ಔಷಧ ಕಿಟ್, ತರಕಾರಿ, ಕಿರಾಣಿ ಸಾಮಗ್ರಿ ವಿತರಿಸಿದ್ದೇನೆ. ಮನೆ ಮಗಳಾಗಿ ಜವಾಬ್ದಾರಿ ನಿರ್ವಹಿಸಿದ್ದೇನೆ. ಆಗ ಜನರು ಹೇಗಿದ್ದಾರೆ ನೋಡಲು ಬಾರದವರು ಈಗ ದೊಡ್ಡ ದೊಡಡ್ ಮಾತುಗಳನ್ನು ಆಡಿ ಜನರ ದಿಕ್ಕು ತಪ್ಪಿಸುಲ ಯತ್ನಿಸುತ್ತಿದ್ದಾರೆ. ಇವರ ಮಾತನ್ನು ನಂಬುವಷ್ಟು ದಡ್ಡರಲ್ಲ ನನ್ನ ಕ್ಷೇತ್ರದ ಜನರು. ಚುನಾವಣೆ ಮುಂಗಿದ ಬಳಿಕ ಮತ್ತೆ ಇವರೆಲ್ಲ ನಾಪತ್ತೆಯಾಗುತ್ತಾರೆ. ಇವರ ಮೊಬೈಲ್ ಸಹ ಸ್ವಿಚ್ಡ್ ಆಫ್ ಆಗುತ್ತದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಜನರಿಗೆ ಎಚ್ಚರಿಸಿದರು.

ನಾನು ಅಭಿವೃದ್ಧಿ ಕೆಲಸ ಮಾಡಿ ನಿಮ್ಮ ಮುಂದೆ ನಿಂತಿದ್ದೇನೆ. ಕೊಟ್ಟ ವಚನದಂತೆ ನಡೆದುಕೊಂಡು ಬಂದಿದ್ದೇನೆ. ಕಳೆದ 5 ವರ್ಷ ನಿಮ್ಮ ಕಷ್ಟ, ಸುಖದಲ್ಲಿ ಜೊತೆಯಾಗಿದ್ದೇನೆ. ವಿರೋಧ ಪಕ್ಷದ ಶಾಸಕಿಯಾಗಿ ನನ್ನ ಕ್ಷೇತ್ರದ ಜನರ ಬವಣೆ ನೀಗಿಸಲು ಎಷ್ಟು ಕಷ್ಟಪಟ್ಟಿರಬೇಕು ಎಂಬುದನ್ನು ಊಹಿಸಿ. ಇಷ್ಟೊಂದು ಕೆಲಸ ಮಾಡಿದ್ದರಿಂದಲೇ ಇಂದು ನೀವೆಲ್ಲ ನನ್ನನ್ನು ಮಗಳು, ತಾಯಿ, ಅಕ್ಕ, ತಂಗಿ ಎಂದು ಪ್ರೀತಿಸುತ್ತಿದ್ದೀರಿ. ಇಲ್ಲದ ಮಾತುಗಳನ್ನಾಡಿ ದಾರಿ ತಪ್ಪಿಸಲು ಬರುವವರನ್ನು ನಂಬಬೇಡಿ. ಮತ್ತೊಮ್ಮೆ ನಿಮ್ಮ ಸೇವೆ ಮಾಡಲು ನನಗೆ ಅವಕಾಶ ಮಾಡಿಕೊಡಿ, ಮೇ 10ರಂದು ತಪ್ಪದೆ ದಯವಿಟ್ಟು ಇವಿಎಂ ಯಂತ್ರದಲ್ಲಿ ನನ್ನ ಕ್ರಮ ಸಂಖ್ಯೆ 4, ಹಸ್ತದ ಗುರುತಿಗೆ ತಾವೆಲ್ಲರೂ ಮತಗಳನ್ನು ನೀಡುವ ಮೂಲಕ ಹರಸಿ, ಆಶೀರ್ವದಿಸಿ ಎಂದು ಹೆಬ್ಬಾಳಕರ್ ವಿನಂತಿಸಿದರು.

ಕ್ಷೇತ್ರದ ಪೂರ್ವಭಾಗ, ಪಶ್ಚಿಮ ಭಾಗ ಎಲ್ಲೇ ಹೋದರೂ ಅಪಾರ ಸಂಖ್ಯೆಯಲ್ಲಿ ಜನರು ನನ್ನನ್ನು ಬೆಂಬಲಿಸುತ್ತಿದ್ದಾರೆ. ಅಕ್ಕಾ ನಿಮ್ಮಿಂದ ಪ್ರತೀ ಊರಿಗೆ, ಪ್ರತಿ ಕುಂಟುಬಕ್ಕೆ ಸಹಾಯವಾಗಿದೆ ಎನ್ನುತ್ತಾರೆ. ಕಳೆದ ಬಾರಿ ಹೊಸದಾಗಿ ಜನರ ಮುಂದೆ ನಿಂತು ಮತ ಕೇಳಿದ್ದೆ. ಆಗ ದೊಡ್ಡ ಪ್ರಮಾಣದಲ್ಲಿ ನೀವೆಲ್ಲ ಮತ ನೀಡಿ ಗೆಲ್ಲಿಸಿ ಕಳಿಸಿದ್ದೀರಿ. ಈಗ ಅಭಿವೃದ್ಧಿ ಮಾಡಿ ಮತ್ತೆ ಬಂದಿದ್ದೇನೆ. ನಾನು ಮಾಡಿದ ಕೆಲಸಗಳು ನಿಮ್ಮ ಮುಂದಿವೆ. ನಿಮ್ಮಿಂದ ಮತ ಕೇಳಲು ನನಗೆ ಹಕ್ಕಿದೆ ಎಂದುಕೊಳ್ಳುತ್ತೇನೆ. ಜೊತೆಯಾಗಿ ಮುಂದೆ ನಡೆಯೋಣ, ಇನ್ನಷ್ಟು ಯೋಜನೆಗಳನ್ನು ತರುವ ಮೂಲಕ ಕ್ಷೇತ್ರವನ್ನು ಇನ್ನಷ್ಟು ಅಭಿವೃದ್ಧಿಪಡಿಸೋಣ. ಯುವಕರ ಕೈಗೆ ಒಳ್ಳೆಯ ಉದ್ಯೋಗ ಒದಗಿಸೋಣ. ನಿಮ್ಮೆಲ್ಲರ ಸಹಕಾರವಿರಲಿ ಎಂದು ಲಕ್ಷ್ಮೀ ಹೆಬ್ಬಾಳಕರ್ ವಿನಂತಿಸಿದರು.

ಸಹಸ್ರಾರು ಸಂಖ್ಯೆಯಲ್ಲಿ ಜನರು ಸೇರಿ ರೋಡ್ ಶೋ ಯಶಸ್ವಿಗೊಳಿಸಿದರು. ಸ್ಥಳೀಯ ಮುಖಂಡರು, ಮಹಿಳೆಯರು, ಜನಪ್ರತಿನಿಧಿಗಳು ಭಾಗವಹಿಸಿದ್ದರು.

## ಬೆಂಗಳೂರು ಮೋದಿ ರೋಡ್ ಶೋಗೆ ಹೈಕೋರ್ಟ್ ಗ್ರೀನ್ ಸಿಗ್ನಲ್: ಪಿಐಎಲ್ ವಜಾ



ಬೆಂಗಳೂರು: ಬೆಂಗಳೂರಿನಲ್ಲಿ ಭಾನುವಾರ ಪ್ರಧಾನಿ ನರೇಂದ್ರ ಮೋದಿ ರೋಡ್ ಶೋಗೆ ಹೈ ಕೋರ್ಟ್ ಗ್ರೀನ್ ಸಿಗ್ನಲ್ ಕೊಟ್ಟಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತದೆ, ರೋಡ್ ಶೋಗೆ ಅನುಮತಿ ನೀಡಬಾರದು ಎಂಬ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಕರ್ನಾಟ ಹೈಕೋರ್ಟ್ ವಜಾಗೊಳಿಸಿದೆ.

ಸಾರ್ವಜನಿಕರಿಗೆ ತೊಂದರೆಯಾಗುತ್ತದೆ, ರೋಡ್ ಶೋಗೆ ಅನುಮತಿ ನೀಡಬಾರದು ಎಂದು ಹೈಕೋರ್ಟ್‌ನಲ್ಲಿ ಪಿಐಎಲ್ ಸಲ್ಲಿಸಲಾಗಿತ್ತು. ಅರ್ಜಿಯ ವಿಚಾರಣೆ ನಡೆಸಿದ ನ್ಯಾ. ಕೃಷ್ಣ ದೀಕ್ಷಿತ್, ನ್ಯಾ.ವಿಜಯ್ ಕುಮಾರ್ ಅವರಿದ್ದ ಪೀಠ, ಚುನಾವಣೆಯನ್ನು ಹಬ್ಬದ ರೀತಿಯಲ್ಲಿ ಆಚರಿಸಲಾಗುತ್ತಿದೆ ಎಂದು ಅಭಿಪ್ರಾಯಪಟ್ಟಿದೆ. ನೀಟ್ ಪರೀಕ್ಷೆಯ ಹಿನ್ನಲೆಯಲ್ಲಿ ಭಾನುವಾರ ಬೆಳಗ್ಗೆ ಒಂಬತ್ತು ಗಂಟೆಯಿಂದ 11.30ರ ವರೆಗೆ ರೋಡ್ ಶೋಗೆ ಅನುಮತಿ ನೀಡಿದೆ.

ವಕೀಲ ಎನ್ ಪಿ ಅಮೃತೇಶ್ ಅವರು ಈ ಹಿತಾಸಕ್ತಿ ಅರ್ಜಿ ಸಲ್ಲಿಕೆ ಮಾಡಿದ್ದು, ಸಲ್ಲಿಸಿರುವ ಅರ್ಜಿಯು ನ್ಯಾಯಮೂರ್ತಿಗಳಾದ ಕೃಷ್ಣ ಎಸ್. ದೀಕ್ಷಿತ್ ಮತ್ತು ವಿಜಯಕುಮಾರ್ ಎ. ಪಾಟೀಲ್ ಅವರ ನೇತೃತ್ವದ ವಿಭಾಗೀಯ ಪೀಠದ ಮುಂದೆ ಮಧ್ಯಾಹ್ನ 2:30 ವಿಚಾರಣೆ ಬಂದಿದೆ.

ರಾಜ್ಯ ಬಿಜೆಪಿಯು ರೋಡ್ ಶೋ ನಡೆಸುವುದಕ್ಕೆ ನೀಡಿರುವ ಅನುಮತಿ, ಸಂಚಾರ ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳಿಗೆ ಸಂಬಂಧಿಸಿದ ದಾಖಲೆ ಸಲ್ಲಿಸಲು ರಾಜ್ಯ ಸರ್ಕಾರ, ಪೊಲೀಸ್ ಮಹಾನಿರ್ದೇಶಕರು ಮತ್ತು ಬೆಂಗಳೂರು ಪೊಲೀಸ್ ಆಯುಕ್ತರಿಗೆ ನಿರ್ದೇಶಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿತ್ತು.

ಬೆಂಗಳೂರಿನಲ್ಲಿ 36 ಕಿ ಮೀ ವ್ಯಾಪ್ತಿಯಲ್ಲಿ ಮೋದಿ ರೋಡ್ ಶೋ ನಡೆಸಲು ಉದ್ದೇಶಿಸಲಾಗಿದ್ದು, ಇದು ಮೂರು ಲೋಕಸಭಾ ಕ್ಷೇತ್ರಗಳನ್ನು ಒಳಗೊಳ್ಳಲಿದೆ. ಬೆಳಿಗ್ಗೆ 10 ಗಂಟೆಗೆ ರೋಡ್ ಷೋ ಆರಂಭವಾಗಲಿದ್ದು, 45 ವಿಧಾನಸಭಾ ಕ್ಷೇತ್ರಗಳನ್ನು ಇದು ಒಳಗೊಳ್ಳಲಿದೆ. ಸಂಜೆ 4ಕ್ಕೆ ಮತ್ತೆ ರೋಡ್ ಶೋ ಆರಂಭವಾಗಲಿದ್ದು, 13 ವಿಧಾನಸಭಾ ಕ್ಷೇತ್ರಗಳಲ್ಲಿ ಇದು ನಡೆಯಲಿದೆ.

ಬೆಂಗಳೂರಿನ ಪ್ರಮುಖ 18 ವಿಧಾನಸಭಾ ಕ್ಷೇತ್ರಗಳಲ್ಲಿ ರೋಡ್ ಷೋ ಹಾದು ಹೋಗಲಿದ್ದು, ಇಲ್ಲಿ ಹಲವು ವಾಣಿಜ್ಯ ಮತ್ತು ಜನವಸತಿ ಪ್ರದೇಶಗಳು ಇವೆ. ರೋಡ್ ಶೋನಲ್ಲಿ 10 ಲಕ್ಷಕ್ಕೂ ಹೆಚ್ಚು ಪಕ್ಷದ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ಬಿಜೆಪಿ ಸಂಸದ ಪಿ ಸಿ ಮೋಹನ್ ಹೇಳಿದ್ದಾರೆ. ಇದರಿಂದ ಭಾರಿ ಸಂಚಾರ ದಟ್ಟಣೆ ಉಂಟಾಗಲಿದ್ದು, ಜನರು ಓಡಾಡಲು ಆಗದ ಪರಿಸ್ಥಿತಿ ನಿರ್ಮಾಣವಾಗಲಿದೆ. ಇದರಿಂದ ಉಂಟಾಗುವ ನಷ್ಟವನ್ನು ರಾಜಕೀಯ ಪಕ್ಷಗಳು ತುಂಬಿಕೊಡುವುದಿಲ್ಲ ಎಂದು ವಿವರಿಸಲಾಗಿದೆ.

ಬೀದಿ ಬದಿ ವ್ಯಾಪಾರಿಗಳು, ಕೂಲಿ ಕಾರ್ಮಿಕರು, ಕಚೇರಿಗೆ ಹೋಗುವವರಿಗೆ ಭಾರಿ ಸಮಸ್ಯೆಯಾಗಲಿದೆ. ಹೀಗಾಗಿ ರೋಡ್ ಶೋ ನಿರ್ಬಂಧಿಸುವಂತೆ ಕೋರಲಾಗಿದೆ.

## ಬೆಳಗಾವಿ ಗ್ರಾಮೀಣ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ ಲಕ್ಷ್ಮೀ ಹೆಬ್ಬಾಳಕರ್‌ಗೆ ಮತ್ತೊಮ್ಮೆ ಆಶೀರ್ವದಿಸಿ: ಸತೀಶ್ ಜಾರಕಿಹೊಳಿ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಿದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಮತ್ತೊಮ್ಮೆ ಭಾರೀ ಅಂತರದಿಂದ ಗೆಲ್ಲಿಸಬೇಕೆಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ತುಮ್ಮರಗುದ್ದಿ, ಮಾರಿಹಾಳ ಗ್ರಾಮದಲ್ಲಿ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರ ಪರ ಹಮ್ಮಿಕೊಂಡಿದ್ದ ಪ್ರಚಾರಾರ್ಥ ಸಭೆಯಲ್ಲಿ ಮಾತನಾಡಿದ ಅವರು, ಅಭಿವೃದ್ಧಿಯ ಆಧಾರ ಮೇಲೆ ಕಾಂಗ್ರೆಸ್ ಪಕ್ಷ ಮತ ಕೇಳುತ್ತದೆ. ಈ ನಿಟ್ಟಿನಲ್ಲಿ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರು ಗ್ರಾಮೀಣ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದಾರೆ. ಸದಾ ನಿಮ್ಮ ಪ್ರಗತಿಗೆ, ನಿಮ್ಮ ಕಾಳಜಿ ಹೊಂದಿದ ಅವರನ್ನು ಆಯ್ಕೆ ಮಾಡಿ ಎಂದು ಕರೆ ನೀಡಿದರು.



ಬೆಳಗಾವಿ, ಯಮಕನಮರಡಿ ಮತಕ್ಷೇತ್ರದಲ್ಲಿ ಮೊದಲು ಜಾತಿ, ಭಾಷೆಯ ರಾಜಕಾರಣ ನಡೆಯುತ್ತಿತ್ತು. ಆದರೆ ನಾನು ಶಾಸಕರಾಗಿ ಆಯ್ಕೆಯಾದ ಮೇಲೆ ಕಳೆದ 15 ವರ್ಷಗಳಿಂದ ಅಭಿವೃದ್ಧಿ ವಿಚಾರ ಇಟ್ಟುಕೊಂಡು ಚುನಾವಣೆ ಎದುರಿಸುತ್ತಿದ್ದೇವೆ. ಗ್ರಾಮೀಣ ಕ್ಷೇತ್ರದಲ್ಲೂ ಅಭಿವೃದ್ಧಿಯನ್ನು ಇಟ್ಟುಕೊಂಡು ಚುನಾವಣೆ ಎದುರಿಸಬೇಕೆಂದು ತಿಳಿಸಿದ ಅವರು, ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಐದು ವರ್ಷ ನಿಮ್ಮ ಸೇವೆ ಮಾಡಲು ಅವಕಾಶ ನೀಡಿದ್ದಿರಿ. ಮುಂದೆಯೂ ಅವಕಾಶ ನೀಡಿ, ಅವರು ನಿಮ್ಮ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ನಿರ್ಮಾಣ ಮಾಡುತ್ತಾರೆ ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಪ್ರವಾಹ ಬಂದಾಗ ರಾಜ್ಯಕ್ಕೆ ಬರಲಿಲ್ಲ. ಆದರೆ ಈಗ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯಕ್ಕೆ ನೂರಾರು ಬಾರಿ ಆಗಮಿಸುತ್ತಿದ್ದಾರೆ. ಬೆಲೆ ಏರಿಕೆ ಬಗ್ಗೆ ಎಲ್ಲಿಯೂ ಮಾತನಾಡಲ್ಲ. ಜನರ ಸಂಕಷ್ಟ, ಹಿತಾಸಕ್ತಿ ಬಿಜೆಪಿಯವರಿಗೆ ಬೇಕಿಲ್ಲ. ಬಿಜೆಪಿ ಅಭ್ಯರ್ಥಿಗಳು ಏನು ಕೆಲಸ ಮಾಡದಿದ್ದರು ಅವರ ಗೆಲುವಿಗೆ ಪ್ರಧಾನಿ ಮೋದಿ ಅವರ ಆಗಮಿಸುತ್ತಾರೆ. ಆದರೆ ಕಾಂಗ್ರೆಸ್ ಪಕ್ಷದ ಶಾಸಕರು ಕೆಲಸ ಮಾಡಿಯೇ ಚುನಾವಣೆ ಎದುರಿಸಬೇಕೆಂದು ವ್ಯಂಗ್ಯವಾಡಿದರು.

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಸತೀಶ್ ಜಾರಕಿಹೊಳಿ ಅವರ ಮಾರ್ಗದರ್ಶನದಲ್ಲಿಯೇ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ನಾನು ಅನೇಕ ಕೆಲಸಗಳನ್ನು ಮಾಡಿದ್ದೇವೆ. ಕಾರಣ ಮತ್ತೊಮ್ಮೆ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಅಧಿಕ ಮತಗಳಿಂದ ಆಯ್ಕೆ ಮಾಡಬೇಕೆಂದು ಮನವಿ ಮಾಡಿದರು.

ಇದೇ ವೇಳೆ ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿಯವರ ನೇತೃತ್ವದಲ್ಲಿ ರಾಜ್ಯ ಉಣ್ಣೆ ನಿಗಮ ಮಂಡಳಿ ಅಧ್ಯಕ್ಷ ಕೃಷ್ಣ ಅನಿಗೊಳ್ಕರ್, ಬೀರಾ ಅನಿಗೊಳ್ಕರ್, ಡಿಸಿಸಿ ಬ್ಯಾಂಕ್ ನ ಹಲವು ಸದಸ್ಯರು ಹಾಗೂ ಶಿಂದೋಳ್ಳಿ ಗ್ರಾಮದ ಸುತ್ತಮುತ್ತಲಿನ ಅನೇಕ ಮುಖಂಡರು ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತಗಳನ್ನು ಒಪ್ಪಿ ಪಕ್ಷಕ್ಕೆ ಅಧಿಕೃತವಾಗಿ ಸೇರ್ಪಡೆಗೊಂಡರು.

ಈ ಸಂದರ್ಭದಲ್ಲಿ ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ಜಿಪಂ ಸದಸ್ಯರು, ತಾಪಂ ಸದಸ್ಯರು ಸೇರಿದಂತೆ ತುಮ್ಮರಗುದ್ದಿ, ಮಾರಿಹಾಳ ಗ್ರಾಮದ ನೂರಾರು ಕಾರ್ಯಕರ್ಯರು, ಮಹಿಳೆಯರು, ಯುವಕರು ಇದ್ದರು.

## ಕಾಂಗ್ರೆಸ್ ಮುಳುಗುತ್ತಿರುವ ಹಡಗು: ಯಡಿಯೂರಪ್ಪ



ಕಡೂರು: 'ಕಾಂಗ್ರೆಸ್ ಮುಳುಗುತ್ತಿರುವ ಹಡಗು. ಅದನ್ನು ರಾಜ್ಯದ ಜನತೆ ತಿರಸ್ಕರಿಸಲಿದ್ದಾರೆ.ಮತ್ತೊಮ್ಮೆ ಬಿಜೆಪಿ ಅಧಿಕಾರಕ್ಕೆ ಬರಲಿದೆ' ಎಂದು ಬಿಜೆಪಿ ಮುಖಂಡ ಬಿ.ಎಸ್.ಯಡಿಯೂರಪ್ಪ ಹೇಳಿದರು.

ಕಡೂರಿನ ಎಪಿಎಂಸಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಬಹಿರಂಗ ಸಭೆಯಲ್ಲಿ ಅವರು ಮಾತನಾಡಿದರು.

ಕಡೂರಿಗೆ ಭದ್ರಾ ಉಪಕಣಿವೆ ಯೋಜನೆ ವರವಾಗಿದೆ. ಬಿಜೆಪಿ ಸರ್ಕಾರ ಮತ್ತು ಪಕ್ಷ ಕಡೂರಿನ ಮೇಲೆ ವಿಶೇಷ ಮಮತೆಯಿಟ್ಟುಕೊಂಡಿರುವುದು ಸತ್ಯ. ಇಲ್ಲಿ ಬೆಳ್ಳಿ ಪ್ರಕಾಶ್ ಕೆಲಸ ಮಾಡಿ ತೋರಿಸಿದ್ದಾರೆ. ಅದೇ ಅಭಿವೃದ್ಧಿ ಕಾರ್ಯಗಳು ಮುಂದುವರಿದು ಮಾದರಿ ಕ್ಷೇತ್ರವಾಗಬೇಕಾದರೆ ಈ ಕ್ಷೇತ್ರವನ್ನು ಮತ್ತೊಮ್ಮೆ ಬಿಜೆಪಿ ಮಡಿಲಿಗೆ ಹಾಕಿ. ಬೆಳ್ಳಿಪ್ರಕಾಶ್ ಅವರನ್ನು ಗೆಲ್ಲಿಸಿ. ಇಲ್ಲಿ ಸೇರಿರುವ ಜನರನ್ನು ನೋಡಿದರೆ ಶಿಕಾರಿಪುರದಲ್ಲೂ ಇಷ್ಟು ಜನ ಸೇರಿಸಲು ಸಾಧ್ಯವಿಲ್ಲ' ಎಂದರು.

ಮೋದಿ, ಅಮಿತ್ ಷಾ ಅವರೊಂದಿಗೆ ರಾಹುಲ್ ಗಾಂಧಿಯನ್ನು ಹೋಲಿಸಲು ಸಾಧ್ಯವೆ? 135 ಸ್ಥಾನ ಪಡೆದು ಬಿಜೆಪಿ ಸರ್ಕಾರ ರಚನೆ ಮಾಡುವುದು ಖಂಡಿತ. ನಾಳೆ ಇಲ್ಲಿಗೆ ಕಾಂಗ್ರೆಸ್‌ನವರು ಬಂದಾಗ, ಸಿದ್ದರಾಮಯ್ಯನವರೇ ಬೆಳ್ಳಿಪ್ರಕಾಶ್ ಗೆದ್ದಾಗಿದೆ. ಯಾವ ಮುಖ ಇಟ್ಟುಕೊಂಡು ಬಂದಿದ್ದೀರಿ? ಎಂದು ಪ್ರಶ್ನಿಸಬೇಕು' ಎಂದರು.

ಐದು ವರ್ಷಗಳ ಹಿಂದೆ ಯಡಿಯೂರಪ್ಪನವರು ಮುಖ್ಯಮಂತ್ರಿಯಾಗುತ್ತಾರೆ, ಅವರ ಕಾಲು ಹಿಡಿದಾದರೂ ರೂ 1 ಸಾವಿರ ಕೋಟಿ ಅನುದಾನ ತರುತ್ತೇನೆ ಎಂದು ಹೇಳಿದ್ದೆ. ಅದರಂತೆಯೇ ಅವರು ರೂ 1281 ಕೋಟಿ ವೆಚ್ಚದ ಭದ್ರಾ ಉಪಕಣಿವೆ ಯೋಜನೆಗೆ ಮಂಜೂರು ಮಾಡಿದರು ಎಂದು ಶಾಸಕ ಬೆಳ್ಳಿಪ್ರಕಾಶ್ ಹೇಳಿದರು.

ಉತ್ತರ ಪ್ರದೇಶ ಸಹಕಾರಿ ಸಚಿವ ಸಂಜೀವ್ ಗೋಯಲ್, ಬಿಜೆಪಿ ಮಹಿಳಾ ಮೋರ್ಚಾ ರಾಜ್ಯ ಉಪಾಧ್ಯಕ್ಷೆ ಸುನೀತಾ ಜಗದೀಶ್ ಇದ್ದರು.

## ಅಶೋಕ್ ಚವಾಣ್ ಬೃಹತ್ ಬಹಿರಂಗ ಸಭೆ




ಖಾನಾಪುರ: ತಾಲೂಕಿನ ನಂದಗಡ್ ಗ್ರಾಮದಲ್ಲಿ ಮಾನ್ಯ ಮಾಜಿ ಮುಖ್ಯಮಂತ್ರಿಗಳು, ಮಹಾರಾಷ್ಟ್ರ ಅಶೋಕ್ ಚವಾಣ್ ಹಾಗೂ ಮಾನ್ಯ ಶಾಸಕಿ ಡಾ ಅಂಜಲಿತಾಯಿ ಹೇಮಂತ್ ನಿಂಬಾಳ್ಕರ್ ರವರು ಜೊತೆಯಾಗಿ ಬೃಹತ್ ಬಹಿರಂಗ ಸಭೆ ನಡೆಸಿ ಕಾಂಗ್ರೆಸ್ ಪಕ್ಷದ ಐದು ಗ್ಯಾರಂಟಿಗಳನ್ನು ವಿವರಿಸಿಹಾಗೂ ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಅಭಿವೃದ್ಧಿ ಕಾಮಗಾರಿಗಳನ್ನು ಹೆಚ್ಚಾಗಿ ಮಾಡುವುದಾಗಿ ಭರವಸೆ ನೀಡಿದರು.

## ಭಜರಂಗದಳ ನಿಷೇದ ಹೇಳಿಕೆ ಕಾಂಗ್ರೆಸ್ ಹಿಂಪಡೆಯಬೇಕು: ಎಂ ಬಿ ಜಿರಲಿ ಎಚ್ಚರಿಕೆ

ಬೆಳಗಾವಿ: ಭಜರಂಗ ದಳ ಗೋ ಹತ್ಯೆ, ಲವ್ ಜಿಹಾದ್,ಭಯೋತ್ಪಾದನೆ ಹಾಗೂ ಮುಂತಾದ ರಾಷ್ಟ್ರ ವಿರೋಧಿ ಚಟುವಟಿಕೆಗಳ ವಿರುದ್ಧ ಹೋರಾಟ ಮಾಡುತ್ತ ಬಂದಿದೆ ಎಂದು ರಾಜ್ಯ ಬಿಜೆಪಿ ವಕ್ತಾರ ಎಂ ಬಿ ಜಿರಲಿ ಹೇಳಿದರು.

ನಗರದಲ್ಲಿ ಇಂದು ಬಿಜೆಪಿ ಕಾರ್ಯಾಲಯದಲ್ಲಿ ಮಾಧ್ಯಮ ಗೋಷ್ಠಿ ನಡೆಸಿದ ಬಿಜೆಪಿಯ ರಾಜ್ಯ ವಕ್ತಾರ ಎಂ ಬಿ ಜತ್ತಲಿ ಮಾತನಾಡಿ ಭಜರಂಗದ ದಳ ಬ್ಯಾನ್ ಮಾಡುವ ಕುರಿತು ಹೇಳಿರುವ ಕಾಂಗ್ರೆಸ್ ತನ್ನ ಹೇಳಿಕೆಯನ್ನು ಹಿಂಪಡೆಯಬೇಕು.ಅಲ್ಲದೆ ಈ ಹೇಳಿಕೆ ಇಂದ ಭಜರಂಗ ದಳ ಭಕ್ತರಿಗೆ ನೋವುಂಟು ಮಾಡಿದ್ದು ಕಾಂಗ್ರೇಸ್ ಭಜರಂಗಿ ಭಕ್ತರ ಬಳಿ ಕ್ಷೇಮ ಕೇಳಬೇಕು ಎಂದು ವಾಗ್ದಾಳಿ ನಡೆಸಿದರು.



ಇನ್ನು ಬಿಜೆಪಿಯನ್ನು ಟ್ರಬಲ್ ಸರ್ಕಾರ ಎಂದು ಹೇಳುವ ಕಾಂಗ್ರೇಸ್ ಆರ್ಟಿಕಲ್370ರದ್ದು ರಾಮಮಂದಿರ ನಿರ್ಮಾಣ ಹಾಗೂ ತ್ರಿವಳಿ ತಲಾಕ್ ಬಂದ ಮಾಡಿದ್ದು ಇಂತಹ ಜನ ಮೆಚ್ಚುವ ಕಾರ್ಯ ಮಾಡಿದ್ದು ಬಿಜೆಪಿ ಎಂದರು.ಕಾಂಗ್ರೇಸ್ ಅಧಿಕಾರಕ್ಕೆ ಬರುವ ಗ್ಯಾರಂಟಿ ಇಲ್ಲ ಇನ್ನು ಗ್ಯಾರಂಟಿ ಕಾರ್ಡ ಮೂಲಕ ಜನಗಳ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದರು.ಇನ್ನು ಪ್ರಜೆಗಳು ಒಪ್ಪುವಂತ ಅಂಶಗಳನ್ನು ಇಟ್ಟುಕೊಂಡು ಮಾತನಡಲಿ ಎಂದು ಹರಿಹಾಯ್ದರು.

ಪಿ ಎಫ್ ಐ ಬಂದ ಎಂ ಮಾಡಿದ ವಿಚಾರ ವಾಗಿ ಪ್ರಶಿಸಿದ ಮಾಧ್ಯಮದವರಿಗೆ ಬೆಳಗಾವಿ ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಸಂಜಯ ಪಾಟೀಲ್ ಪ್ರತಿಕ್ರಿಯಿಸಿ ಪಿ ಎಫ್ ಐ ರಾಷ್ಟ್ರದ್ರೋಹಿ ಕೃತ್ಯಗಳಲ್ಲಿ ತೊಡಗಿಸಿ ಕೊಂಡಿದ್ದು ಕಂಡು ಬಂದಿದೆ ಆದ್ದರಿಂದ ಬ್ಯಾನ್ ಬಿಜೆಪಿ ಸರ್ಕಾರ ಬ್ಯಾನ್ ಮಾಡಿದೇ ಆದರೆ ಭಜರಂಗ ದಳ ಯಾವುದೇ ರಾಷ್ಟ್ರ ದ್ರೋಹಿ ಕೆಲಸಗಳನ್ನು ವಿರೋಧಿಸಿದ್ದರು ಯಾವುದೇ ಕೆಟ್ಟ ಕೃತ್ಯ ಗಳಲ್ಲಿ ಭಾಗವಹಿಸಿದ ಭಜರಂಗದಳವನ್ನು ಬ್ಯಾನ್ ಮಾಡುವ ಅಧಿಕಾರ ಇಲ್ಲ ಎಂದರು.ಇನ್ನು ನಾಳೆ ಬೆಳಗಾವಿಗೆ ಅಗಮಿಸಲಿರುವ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಅಮಿತ್ ಶಾ ಜಿಲ್ಲೆಯ ಎಲ್ಲ ಕ್ಷೇತಗಳಲ್ಲಿ ಪ್ರಚಾರ ಸಭೆ ನಡೆಸುವವರು ಎಂದರು.ಇನ್ನು ಮಾಜಿ ಶಾಸಕ ಅನಿಲ್ ಬೆನಕೆ, ಬೆಳಗಾವಿ ಜಿಲ್ಲೆ ಗ್ರಾಮಾಂತರ ಅಧ್ಯಕ್ಷ ಸಂಜಯ್ ಪಾಟೀಲ್,ಯಮಕನ ಮರಡಿ ಉಸ್ತುವಾರಿ ಭರತ್ ಪಾಟೀಲ್ ಹಾಗೂ ಬಿಜೆಪಿ ಮಾಧ್ಯಮ ಸಲಹೆಗಾರ ಶರತ ಪಾಟೀಲ್ ಉಪಸ್ಥಿತರಿದ್ದರು.

## ರಾಜಕೀಯ ಪಕ್ಷಗಳ ಬೆಳವಣಿಗೆ ನೋಡಿ ಈಗ ಸ್ವತಂತ್ರ್ಯರಿಗೆ ಅವಕಾಶ ಕೊಡಿ: ಅಶೋಕ್ ಗೋವೇಕರ್

ಬೆಳಗಾವಿ: ಕಾಂಗ್ರೆಸ್, ಭಾರತೀಯ ಜನತಾ ಪಕ್ಷ ಸೇರಿದಂತೆ ಎಲ್ಲ ರಾಜಕೀಯ ಪಕ್ಷಗಳು ಅಭಿವೃದ್ಧಿ ಹೆಸರಿನಲ್ಲಿ ಸಾರ್ವಜನಿಕರಿಗೆ ಮೋಸ ಮಾಡಿವೆ. ರಾಜಕೀಯ ಪಕ್ಷಗಳ ಅಭಿವೃದ್ಧಿಯನ್ನು ನೀವು ನೋಡಿದ್ದೀರಿ, ಈಗ ಪಕ್ಷೇತರರಿಗೆ ಅವಕಾಶ ನೀಡಿ ಎಂದು ಬೆಳಗಾವಿ ಉತ್ತರ ಕ್ಷೇತ್ರದ ಸ್ವತಂತ್ರ ಅಭ್ಯರ್ಥಿ ಅಶೋಕ ಗೋವೇಕರ ಮನವಿ ಮಾಡಿದರು.

ಬೆಳಗಾವಿ ಉತ್ತರ ಕ್ಷೇತ್ರದಲ್ಲಿ ಖ್ಯಾತ ಸಮಾಜ ಸೇವಕ ಅಶೋಕ ಗೋವೇಕರ್ ಸ್ವತಂತ್ರ ಅಭ್ಯರ್ಥಿಯಾಗಿ ಈ ಬಾರಿ ಸ್ಪರ್ಧಿಸಿದ್ದಾರೆ. ಮೊದಲಿನಿಂದಲೂ ಸಮಾಜಸೇವೆಯಲ್ಲಿ ಒಲವು ಮತ್ತು ಒಲವು ಹೊಂದಿರುವ ಅಶೋಕ್ ಗೋವೇಕರ್ ಅವರು ಹಲವು ವರ್ಷಗಳಿಂದ ನಿರ್ಲಿಪ್ತ ಹಾಗೂ ನಿಸ್ವಾರ್ಥ ಮನೋಭಾವದಿಂದ ಸಮಾಜಸೇವೆ ಮಾಡಿಕೊಂಡು ಬಂದಿದ್ದಾರೆ.



ಈ ವರ್ಷ ಬೆಳಗಾವಿ ಉತ್ತರ ಕ್ಷೇತ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು, ಶಾಸಕರಾಗಿ ಆಯ್ಕೆಯಾದರೆ ಸಮಾಜಮುಖಿ ಕಾರ್ಯದ ವ್ಯಾಪ್ತಿ ವಿಸ್ತರಿಸುವ ಉದ್ದೇಶ ಹೊಂದಿದ್ದಾರೆ. ಅಶೋಕ್ ಗೋವೇಕರ್ ಅವರು ತಮ್ಮ ಹಲವು ಕಾರ್ಯಕರ್ತರು ಹಾಗೂ ಬೆಂಬಲಿಗರೊಂದಿಗೆ ಕ್ಷೇತ್ರದಲ್ಲಿ ಕ್ಷಿಪ್ರ ಪ್ರಚಾರ ನಡೆಸುತ್ತಿದ್ದಾರೆ.

ಕ್ಷೇತ್ರದ ಬಸವನ ಕುಡಚಿ ಗ್ರಾಮಕ್ಕೆ ಭೇಟಿ ನೀಡಿ ಮತ ಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಕಾರ್ಯಕರ್ತರು ಅವರಿಗೆ ಭವ್ಯ ಸ್ವಾಗತ ನೀಡಿ ಬೆಂಬಲ ವ್ಯಕ್ತಪಡಿಸಿದರು. ಸ್ಥಳೀಯರು ಪಟಾಕಿ ಸಿಡಿಸಿ ಕುಂಕುಮ ಹಚ್ಚಿ, ಹಾರ ಹಾಕಿ ಭವ್ಯ ಸ್ವಾಗತ ಮಾಡಿಕೊಂಡರು ಸನ್ಮಾನಿಸಿ, ಜಯವಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಶೋಕ್ ಗೋವೇಕರ್, ನೀವು ಕಾಂಗ್ರೆಸ್, ಬಿಜೆಪಿಯಂತಹ ರಾಜಕೀಯ ಪಕ್ಷಗಳನ್ನು ಅನುಭವಿಸಿದ್ದೀರಿ. ಅವರು ಏನು ಅಭಿವೃದ್ಧಿ ಮಾಡಿದ್ದಾರೆ ಎಂಬುದು ನಿಮ್ಮ ಕಣ್ಣ ಮುಂದೆ ಇದೆ ಈ ಎರಡೂ ಪಕ್ಷಗಳು ಜನರ ನಿರೀಕ್ಷೆಯನ್ನು ಈಡೇರಿಸಿಲ್ಲ. ಬೆಳಗಾವಿ ಉತ್ತರ ಕ್ಷೇತ್ರ ಅಭಿವೃದ್ಧಿಯಲ್ಲಿ ಹಿಂದುಳಿದಿದೆ. ರಸ್ತೆ, ಚರಂಡಿ, ಉದ್ಯಾನವನ, ನೀರು, ವಿದ್ಯುತ್ ಹೀಗೆ ಎಲ್ಲ ಮೂಲ ಸೌಕರ್ಯ ಕಲ್ಪಿಸಿ ಕ್ಷೇತ್ರದ ಅಭಿವೃದ್ಧಿ ಮಾಡಬೇಕೆಂಬುದು ನನ್ನ ಕನಸು. ಇದಲ್ಲದೆ, ಯಾವುದೇ ಸಮಸ್ಯೆಗಳನ್ನು ಪರಿಹರಿಸಲು, ಕಷ್ಟದ ಸಮಯದಲ್ಲಿ ಜನರಿಗೆ ಸಹಾಯ ಮಾಡಲು ನಾನು ಯಾವಾಗಲೂ ಸಿದ್ಧನಿದ್ದೇನೆ. ಹೀಗಾಗಿ ಮುಂಬರುವ ಚುನಾವಣೆಯಲ್ಲಿ ನನ್ನನ್ನು ಭಾರಿ ಮತಗಳಿಂದ ಗೆಲ್ಲಿಸುವಂತೆ ಅಶೋಕ್ ಗೋವೇಕರ್ ಮನವಿ ಮಾಡಿದರು.

## ಮೇ.9 ರಂದು ನೆಕ್ಸಸ್ ಸೆಲೆಕ್ಟ್ ಟ್ರಸ್ಟ್ ಸಾರ್ವಜನಿಕ ಕೊಡುಗೆ




ಹುಬ್ಬಳ್ಳಿ: 17 ಅತ್ಯುತ್ತಮ ದರ್ಜೆಯ ನಗರ ಗ್ರಾಹಕ ಕೇಂದ್ರಗಳು, ಎರಡು ಪೂರಕ ಹೋಟೆಲ್ ಸ್ವತ್ತುಗಳು ಮತ್ತು ಮೂರು ಕಚೇರಿ ಸ್ವತ್ತುಗಳನ್ನು ಒಳಗೊಂಡಂತೆ ಭಾರತದ ಅತಿದೊಡ್ಡ ಗ್ರಾಹಕ ಕೇಂದ್ರಗಳ ಮಾಲೀಕ ಎನಿಸಿರುವ ನೆಕ್ಸಸ್ ಸೆಲೆಕ್ಟ್ ಟ್ರಸ್ಟ್', ಮೇ 9, 2023 ರಂದು ಪ್ರತಿ ಯೂನಿಟ್ಗೆ ನಗದು ಮಾದರಿಯಲ್ಲಿ ಒಟ್ಟು 32,000.00 ದಶಲಕ್ಷ ರೂಪಾಯಿ ಸಂಗ್ರಹಕ್ಕೆ ಆರಂಭಿಕ ಸಾರ್ವಜನಿಕ ಕೊಡುಗೆ' ತೆರೆಯಲು ಉದ್ದೇಶಿಸಿದೆ. ವೈನ್ಫೋರ್ಡ್ ಇನ್ವೆಸ್ಟ್ಮೆಂಟ್ಸ್ ಲಿಮಿಟೆಡ್'(ಬ್ಲ್ಯಾಕ್ಸ್ಟೋನ್ ಫಂಡ್ಗಳ ಪೋರ್ಟ್‌ಫೋಲಿಯೊ ಕಂಪನಿ) ನೆಕ್ಸಸ್ ಸೆಲೆಕ್ಟ್ ಟ್ರಸ್ಟ್'ನ ಪ್ರಾಯೋಜಕರು ಮತ್ತು ನೆಕ್ಸಸ್ ಸೆಲೆಕ್ಟ್ ಮಾಲ್ ಮ್ಯಾನೇಜ್ಮೆಂಟ್ ಪ್ರೈವೇಟ್ ಲಿಮಿಟೆಡ್'ನ ವ್ಯವಸ್ಥಾಪಕರಾಗಿದ್ದಾರೆ. ಆಕ್ಸಿಸ್ ಟ್ರಸ್ಟಿ ಸರ್ವೀಸಸ್ ಲಿಮಿಟೆಡ್', ನೆಕ್ಸಸ್ ಸೆಲೆಕ್ಟ್ ಟ್ರಸ್ಟ್'ನ ಟ್ರಸ್ಟಿಯಾಗಿದೆ.

ಸಾರ್ವಜನಿಕ ಕೊಡುಗೆಯು 14,000.00 ದಶಲಕ್ಷ ರೂಪಾಯಿ ವರೆಗೆ ಯೂನಿಟ್ಗಳ ಹೊಸ ವಿತರಣೆ' ("ಫ್ರೆಶ್ ಇಶ್ಯೂ") ಮತ್ತು 18,000.00 ದಶಲಕ್ಷ ರೂಪಾಯಿವರೆಗೆ ಯೂನಿಟ್ಗಳ ಮಾರಾಟದ ಪ್ರಸ್ತಾಪ'ವನ್ನು ಒಳಗೊಂಡಿದೆ ("ಮಾರಾಟದ ಮೂಲಕ ಕೊಡುಗೆ" ಮತ್ತು ಹೊಸ ವಿತರಣೆ'ಯೂ ಸೇರಿದಂತೆ "ಆಫರ್"). ಕೊಡುಗೆಯ ದರ ಮಿತಿಯನ್ನು (ಪ್ರೈಸ್ ಬ್ಯಾಂಡ್) ಪ್ರತಿ ಯೂನಿಟ್ಗೆ 95 ರೂ.ಗಳಿಂದ 100 ರೂ.ಗೆ ನಿಗದಿಪಡಿಸಲಾಗಿದೆ. ಬಿಡ್ / ಆಫರ್ ಗುರುವಾರ, ಮೇ 11, 2023 ರಂದು ಕೊನೆಗೊಳ್ಳುತ್ತದೆ. ಆಂಕರ್ ಹೂಡಿಕೆದಾರರ ಬಿಡ್ / ಆಫರ್ ಅವಧಿಯು ಬಿಡ್ / ಆಫರ್ ತೆರೆಯುವ ದಿನಾಂಕಕ್ಕೆ ಒಂದು ಕೆಲಸದ ದಿನ ಮುಂಚಿತವಾಗಿ, ಅಂದರೆ, ಸೋಮವಾರ, ಮೇ 8, 2023ರಂದು ತೆರೆಯಲಿದೆ. ಬ್ಲ್ಯಾಕ್ ಸ್ಟೋನ್'ನ ಏಷ್ಯಾ ಪೆಸಿಫಿಕ್ ಅಧ್ಯಕ್ಷ ಮತ್ತು ರಿಯಲ್ ಎಸ್ಟೇಟ್ ಏಷ್ಯಾದ ಮುಖ್ಯಸ್ಥ ಕ್ರಿಸ್ ಹೆಡಿ ಅವರು ಮಾತನಾಡಿ, "ಭಾರತದ ಮೊದಲ ರೀಟೇಲ್‌ಆಧರಿತ ಆರ್‌ಇಐಟಿ' ಸಂಸ್ಥೆ ನೆಕ್ಸಸ್ ಸೆಲೆಕ್ಟ್ ಟ್ರಸ್ಟ್'ನ ಚೊಚ್ಚಲ ಆರಂಭಿಕ ಕೊಡುಗೆಯನ್ನು ತೆರೆಯಲು ನಾವು ರೋಮಾಂಚನಗೊಂಡಿದ್ದೇವೆ.

ಇದು ಭಾರತಕ್ಕೆ ಬ್ಲ್ಯಾಕ್ಸ್ಟೋನ್'ನ ಬದ್ಧತೆಯನ್ನು ಪುನರುಚ್ಚರಿಸುತ್ತದೆ. ಅಲ್ಲಿ ನಾವು 15 ವರ್ಷಗಳಿಗಿಂತ ಹೆಚ್ಚು ಕಾಲ ಬಲವಾದ ಉಪಸ್ಥಿತಿಯನ್ನು ಹೊಂದಿದ್ದೇವೆ. ಅಲ್ಲದೆ, ಮೊದಲ ಎರಡು ಆರ್‌ಇಐಟಿಗಳಉದ್ಘಾಟನೆಯಲ್ಲಿಭಾಗವಹಿಸಿದ್ದೇವೆ," ಎಂದರು.

ನೆಕ್ಸಸ್ ಸೆಲೆಕ್ಟ್ ಮಾಲ್ ಮ್ಯಾನೇಜ್ಮೆಂಟ್ ಪ್ರೈವೇಟ್ ಲಿಮಿಟೆಡ್'ನಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಲೀಪ್ ಸೆಹಗಲ್‌ಅವರು ಮಾತನಾಡಿ, "ನೆಕ್ಸಸ್ ಸೆಲೆಕ್ಟ್ ಟ್ರಸ್ಟ್ ಭಾರತದ ಅತಿದೊಡ್ಡ ಮಾಲ್ ವೇದಿಕೆಯಾಗಿದೆ. ಭಾರತದ ವಿಶಿಷ್ಟ ಬಳಕೆಯ ಲಾಭವನ್ನು ಪಡೆಯಲು ಉತ್ತಮ ಸ್ಥಾನದಲ್ಲಿದೆ. ಭಾರತದ ಚಿಲ್ಲರೆ ಪಯಣದಲ್ಲಿ ಮುಂಚೂಣಿಯಲ್ಲಿರಲು ನಾವು ಉತ್ಸುಕರಾಗಿದ್ದೇವೆ," ಎಂದು ಹೇಳಿದರು.

## ಶೋಭಾ ಕರಂದ್ಲಾಜೆ ಅವರೇ ಶೂರ್ಪನಖಿ ಆಗಬೇಡಿ, ಸೀತಾಮಾತೆಯಾಗಿ: ರಮೇಶ್ ಬಾಬು ತಿರುಗೇಟು



ಬೆಂಗಳೂರು: ಕರ್ನಾಟಕ ವಿಧಾನಸಭಾ ಚುನಾವಣೆಗೆ ಇನ್ನು ಐದೇ ದಿನ ಬಾಕಿ ಇದೆ. ಈ ವೇಳೆ ಘಟಾನುಘಟಿ ನಾಯಕರು ಪ್ರಚಾರ ಕೈಗೊಂಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ರೋಡ್ ಶೋಗೆ ಕಾಂಗ್ರೆಸ್‌ನವರು ಆಂಬ್ಯುಲೆನ್ಸ್ ಬಿಟ್ಟು ತೊಂದರೆ ಕೊಡುತ್ತಾರೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಕ್ಕೆ ಕೆಪಿಸಿಸಿ ವಕ್ತಾರ ರಮೇಶ್ ಬಾಬು ತಿರುಗೇಟು ನೀಡಿದ್ದಾರೆ

ಶೋಭಾ ಕರಂದ್ಲಾಜೆ ಅವರೇ ನೀವು ಕರ್ನಾಟಕ ರಾಜಕಾರಣದಲ್ಲಿ ಸೀತಾ ಮಾತೆ ಪಾತ್ರವನ್ನು ಮಾಡಿ. ಶೂರ್ಪನಖಿ ಪಾತ್ರ ಮಾಡಬೇಡಿ. ರಾಜ್ಯದ ಜನರಿಗೆ ಏನು ಅನುಕೂಲ ಆಗುತ್ತದೆಯೋ ಆ ಕೆಲಸವನ್ನು ನೀವು ಮಾಡಿ. ಪ್ರಧಾನಿ ನರೇಂದ್ರ ಮೋದಿ ರೋಡ್ ಶೋದಿಂದ ನಿಮಗೆ ಯಾವುದೇ ತೊಂದರೆ ಆಗದೇ ಇರಬಹುದು. ಆದರೆ, ಇದರಿಂದ ಬೀದಿ ವ್ಯಾಪಾರಸ್ಥರಿಗೆ ಸಮಸ್ಯೆ ಆಗಲಿದೆ. ಚಿಕ್ಕಪುಟ್ಟ ಸಹಿತ ಅಂಗಡಿ ಇಟ್ಟುಕೊಂಡವರಿಗೆ ಸಮಸ್ಯೆಯಾಗುತ್ತದೆ ಎಂದು ರಮೇಶ್ ಬಾಬು ಕಿಡಿಕಾರಿದ್ದಾರೆ.

ನರೇಂದ್ರ ಮೋದಿ ರೋಡ್ ಶೋ ದಾರಿಯಲ್ಲಿ ಕಾಂಗ್ರೆಸ್‌ನವರು ಆಂಬ್ಯುಲೆನ್ಸ್ ತಂದು ಸೀನ್ ಕ್ರಿಯೇಟ್ ಮಾಡಲು ಹೊರಟಿದ್ದಾರೆ ಎಂಬ ಶೋಭಾ ಕರಂದ್ಲಾಜೆ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿರುವ ಕಾಂಗ್ರೆಸ್ ವಕ್ತಾರ ರಮೇಶ್ ಬಾಬು, ಕಳೆದ ಬಾರಿ ನರೇಂದ್ರ ಮೋದಿ ರೋಡ್ ಶೋ ಆದ ಕಡೆಗಳಲ್ಲಿ ಆಂಬ್ಯುಲೆನ್ಸ್ ಸಮಸ್ಯೆ ಆಗಿದ್ದು ಮಾಧ್ಯಮಗಳಲ್ಲಿ ವರದಿಯಾಗಿದೆ. ಜನರಿಗೆ ಸಮಸ್ಯೆ ಆಗಬಾರದು ಎಂದು ಗುರುವಾರ ಚುನಾವಣಾ ಆಯೋಗಕ್ಕೆ ದೂರು ನೀಡಲಾಗಿದೆ. ಆದರೆ, ಇದನ್ನು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ತುಂಬ ಚೆನ್ನಾಗಿ ತಿರುಚುತ್ತಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

## ಶೆಟ್ಟರ್ ವಿಷಯದಲ್ಲಿ ಮಾತನಾಡಲು ಮಠಾಧೀಶರಿಗೆ ಧೈರ್ಯವಿಲ್ಲ

ಹುಬ್ಬಳ್ಳಿ: 'ಲಿಂಗಾಯತ ವಿಚಾರ ಬಂದಾಗಲೆಲ್ಲ ಲಿಂಗಾಯತ ಮಠದ ಸ್ವಾಮೀಜಿಗಳು ಒಗ್ಗಟ್ಟು ಪ್ರದರ್ಶಿಸುತ್ತಿದ್ದರು. ಆದರೆ, ಜಗದೀಶ ಶೆಟ್ಟರ್ ವಿಷಯದಲ್ಲಿ ಮಾತನಾಡಲು ಧೈರ್ಯವಿಲ್ಲದೆ ಮೌನವಾಗಿದ್ದಾರೆ' ಎಂದು ರಾಜ್ಯಸಭಾ ಸದಸ್ಯ ಎಲ್. ಹನುಮಂತಯ್ಯ ಟೀಕಿಸಿದರು.



ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಫಲಾಪೇಕ್ಷೆಯಲ್ಲಿರುವ ಮಠಾಧೀಶರು, ಅದನ್ನು ತಪ್ಪಿಸಿಕೊಳ್ಳಲು ಸಿದ್ಧವಿಲ್ಲ. ಅವರು ಎಲ್ಲ ಸಂದರ್ಭದಲ್ಲಿಯೂ ನ್ಯಾಯಪರವಾಗೇನೂ ನಿಂತಿಲ್ಲ. ಮುಂದೆ ಯಾವ ಪಕ್ಷ ಅಧಿಕಾರ ಬರುತ್ತದೆಯೋ ಏನೋ ಎಂದು ತಿಳಿಯದ ಅವರು, ಶೆಟ್ಟರ್‌ಗೆ ಆದ ಅನ್ಯಾಯದ ಕುರಿತು ಧ್ವನಿ ಎತ್ತದೆ ಮೌನಕ್ಕೆ ಜಾರಿದ್ದಾರೆ' ಎಂದು ಆಕ್ರೋಶ ವ್ಯಕ್ತಪಡಿಸಿದರು. ಲಿಂಗಾಯತರನ್ನು ಕಡೆಗಣನೆ ಮಾಡಲಾಗುತ್ತದೆ ಎಂದು ಶೆಟ್ಟರ್ ಪ್ರಾಮಾಣಿಕವಾಗಿ ಹೇಳಿಕೆ ನೀಡಿದ್ದಾರೆ. ಬಿ.ಎಲ್. ಸಂತೋಷ ವಿರುದ್ಧ ಮಾತನಾಡಿದ ಏಕೈಕ ವ್ಯಕ್ತಿ ಶೆಟ್ಟರ್ ಆಗಿದ್ದಾರೆ. ಹೀಗಾಗಿ ಅವರನ್ನು ಬಿಜೆಪಿ ಟಾರ್ಗೆಟ್ ಮಾಡುತ್ತಿದೆ. ಶೆಟ್ಟರ್ ತುಂಬಾ ಪ್ರಬಲರು ಅಂತಲ್ಲ. ಬಿಜೆಪಿ ವಿರುದ್ಧ ಮಾತನಾಡಿದವರನ್ನು ಸೋಲಿಸಿ, ಎಲ್ಲರಿಗೂ ಸಂದೇಶ ರವಾನಿಸಬೇಕೆನ್ನುವುದು ಆ ಪಕ್ಷದ ವರಿಷ್ಠರ ಉದ್ದೇಶ. ಈ ಬಾರಿ ಶೆಟ್ಟರ್ ಗೆದ್ದೇ ಗೆಲ್ಲುತ್ತಾರೆ. ಅವರನ್ನು ಕಾಂಗ್ರೆಸ್ ಎಂದೂ ಕೈ ಬಿಡಲ್ಲ. ಅಗ್ರನಾಯಕರಲ್ಲಿ ಅವರೂ ಒಬ್ಬರಾಗಿದ್ದು, ಮುಖ್ಯಮಂತ್ರಿ ಹುದ್ದೆಯ ಆಯ್ಕೆ ಪಟ್ಟಿಯಲ್ಲಿ ಅವರು ಸಹ ಇರಲಿದ್ದಾರೆ' ಎಂದು ತಿಳಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089